ಕನ್ನಡ ದಿನಪತ್ರಿಕೆ
27 ಫೆಬ್ರುವರಿ । ಮಂಗಳವಾರ
27 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 09 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ನಿರುದ್ಯೋಗ ತಗ್ಗಿಸಲು ಪ್ರತಿ ವರ್ಷ ಬೃಹತ ಉದ್ಯೋಗ ಮೇಳ : ಸಿಎಂ ಸಿದ್ದರಾಮಯ್ಯ



ಬೆಂಗಳೂರು: ರಾಜ್ಯದಲ್ಲಿ ನಿರುದ್ಯೋಗವನ್ನು ತಗ್ಗಿಸಲು ಇನ್ನು ಮುಂದೆ ಪ್ರತಿ ವರ್ಷ ಪ್ರಾದೇಶಿಕವಾರು ಬೃಹತ ಉದ್ಯೋಗ ಮೇಳವನ್ನು ಆಯೋಜಿಸುವುದಾಗಿ ತಿಳಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ, ಹೊಸ ಜಿಟಿಟಿಸಿ ಕೇಂದ್ರಗಳನ್ನು ತೆರೆಯುವುದಾಗಿ ತಿಳಿಸಿದ್ದಾರೆ.

ನಗರದ ಅರಮನೆ ಮೈದಾನದಲ್ಲಿ ಆಯೋಜಿಸಲಾಗಿದ್ದ ಯುವ ಸಮೃದ್ಧಿ ಬೃಹತ್ ಉದ್ಯೋಗ ಮೇಳ ಉದ್ಘಾಟಿಸಿದ ಬಳಿಕ ಮಾತನಾಡಿದ ಅವರು, 580ಕ್ಕೂ ಹೆಚ್ಚು ಕಂಪನಿಗಳ ಉದ್ಯೋಗದಾತರು ಸಮ್ಮೇಳನದಲ್ಲಿ ಭಾಗವಹಿಸಿದ್ದು, ಒಂದು ಲಕ್ಷಕ್ಕೂ ಹೆಚ್ಚು ಉದ್ಯೋಗ ನೀಡಲು ಮುಂದೆ ಬಂದಿದ್ದಾರೆ. ಅವರನ್ನು ಅಭಿನಂದಿಸುವುದಾಗಿ ತಿಳಿಸಿದರು.

ಸರ್ಕಾರದ ವತಿಯಿಂದ ದೇಶದಲ್ಲಿ ಅತಿ ದೊಡ್ಡದಾದ ಉದ್ಯೋಗ ಮೇಳವನ್ನು ಆಯೋಜಿಸಲಾಗಿದೆ. ಇನ್ನು ಮುಂದೆ ಮೈಸೂರು, ಬೆಂಗಳೂರು, ಬೆಳಗಾವಿ, ಕಲಬುರಗಿ ಪ್ರಾದೇಶಿಕವಾರು ಉದ್ಯೋಗ ಮೇಳವನ್ನು ಪ್ರತಿ ವರ್ಷ ಆಯೋಜಿಸಲಾಗುವುದು. ಜೊತೆಗೆ ಮಾರುಕಟ್ಟೆ ಬೇಡಿಕೆ ಆಧಾರಿತವಾಗಿ ಮಾನವ ಸಂಪನ್ಮೂಲ ಅಭಿವೃದ್ಧಿಪಡಿಸಲು ಕೌಶಲ್ಯ ತರಬೇತಿ ನೀಡಲಾಗುತ್ತದೆ.

ಈಗಾಗಲೇ ಐಟಿಐ, ಪಾಲಿಟೆಕ್ನಿಕ್, ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಉದ್ಯೋಗಧಾರಿತ ತರಬೇತಿ ನೀಡಲಾಗುತ್ತಿದೆ. ಈಗಾಗಲೇ ಸಾಕಷ್ಟು ಸರ್ಕಾರಿ ಟೋಲ್ರೂಮ್–ಟ್ರೈನಿಂಗ್ ಸೆಂಟರ್(ಜಿಟಿಟಿಸಿ)ಗಳನ್ನು ತೆರೆಯಲಾಗಿದೆ. ಮತ್ತಷ್ಟು ಕೇಂದ್ರಗಳನ್ನು ತೆರೆದು ಕೌಶಲ್ಯ ತರಬೇತಿಯನ್ನು ಹೆಚ್ಚಿಸುವುದಾಗಿ ಹೇಳಿದರು.

ದೇಶದಲ್ಲಿ ನಿರುದ್ಯೋಗದ ಸಮಸ್ಯೆ ಹೆಚ್ಚಾಗುತ್ತಲೇ ಇದೆ. 2014ರಲ್ಲಿ ಶೇ.2.1ರಷ್ಟಿದ್ದ ನಿರುದ್ಯೋಗದ ಪ್ರಮಾಣ 2023ರ ವೇಳೆಗೆ ಶೇ.8.40ರಷ್ಟಾಗಿದೆ. ಲೋಕಸಭೆ ಚುನಾವಣೆ ವೇಳೆ ನರೇಂದ್ರಮೋದಿ ಅವರು ಪ್ರತಿ ವರ್ಷ 2 ಕೋಟಿ ಉದ್ಯೋಗ ಸೃಷ್ಟಿಸುವುದಾಗಿ ಭರವಸೆ ನೀಡಿದ್ದರು. ಆದರೆ ಉದ್ಯೋಗ ಸೃಷ್ಟಿಸುವ ಬದಲಾಗಿ ಉದ್ಯೋಗ ನಷ್ಟವಾಗುತ್ತಿದೆ. ಭರವಸೆ ಈಡೇರಿಕೆಯಾಗಿದ್ದರೆ 20 ಕೋಟಿ ಉದ್ಯೋಗ ಸೃಷ್ಟಿಯಾಗಬೇಕಿತ್ತು. ಅದು ಸಾಧ್ಯವಾಗಿಲ್ಲ ಎಂದು ದೂರಿದರು.

ನಿರುದ್ಯೋಗದ ಸಮಸ್ಯೆ ಹೆಚ್ಚಾದರೆ ದೇಶದ ಸಂಪತ್ತು ಸೃಷ್ಟಿಸಬೇಕಾದ ಯುವಜನ ನಿರರ್ಥಕವಾಗುತ್ತದೆ. ಇದು ಅಭಿವೃದ್ಧಿಗೆ ಘಾಸಿ ಮಾಡುತ್ತದೆ. ದೇಶದಲ್ಲಿ ನಿರುದ್ಯೋಗ ಸವಾಲಿನಂತೆ ಬೆಳೆದು ನಿಂತಿದ್ದು, ಅದನ್ನು ನಿವಾರಿಸಬೇಕಾದರೆ ಪ್ರಾಮಾಣಿಕ ಪ್ರಯತ್ನಗಳು ಅಗತ್ಯ. ರಾಜ್ಯ ಸರ್ಕಾರ ಪದವೀಧರ ನಿರುದ್ಯೋಗಿಗಳಿಗೆ ಮತ್ತು ಡಿಪ್ಲೋಮೊದಾರರಿಗೆ ನಿರುದ್ಯೋಗ ಭತ್ಯೆ ನೀಡುತ್ತಿದೆ. ಜೊತೆಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನೂ ನೀಡಲಾಗುತ್ತಿದೆ ಎಂದು ಹೇಳಿದರು.

ಉದ್ಯೋಗ ಮೇಳದಲ್ಲಿ 75 ಸಾವಿರ ಮಂದಿ ಈವರೆಗೂ ನೋಂದಣಿಯಾಗಿದ್ದಾರೆ. ಉದ್ಯೋಗ ಪಡೆಯುವವರಿಗೆ ಶುಭವಾಗಲಿ ಎಂದು ಮುಖ್ಯಮಂತ್ರಿ ಹಾರೈಸಿದರು. ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವ ಶರಣಪ್ರಕಾಶ್ ಪಾಟೀಲ್ ಮಾತನಾಡಿ, 75 ಸಾವಿರ ಮಂದಿ ನೋಂದಾಣಿಯಾಗಿರುವುದು ದೇಶದಲ್ಲೇ ಐತಿಹಾಸಿಕ ದಾಖಲೆ. ಎಸ್ಸೆಸ್ಸೆಲ್ಸಿಯಿಂದ ಸ್ನಾತಕೋತ್ತರದವರೆಗೂ ವಿವಿಧ ವಿದ್ಯಾರ್ಹತೆಗಳನ್ನು ಹೊಂದಿರುವವರು ಮೇಳದಲ್ಲಿ ಭಾಗವಹಿಸಿದ್ದಾರೆ. ಒಂದು ಲಕ್ಷ ಉದ್ಯೋಗಗಳ ನೇಮಕಾತಿಗೆ ಖಾಸಗಿ ಕಂಪನಿಗಳು ಮುಂದೆ ಬಂದಿವೆ ಎಂದು ತಿಳಿಸಿದರು.

ಪಂಚಖಾತ್ರಿಗಳಲ್ಲಿ ಒಂದಾಗಿರುವ ಯುವನಿ ಕಾರ್ಯಕ್ರಮ ಯುವ ಸಮುದಾಯದ ಬೆನ್ನಲೆಬುಗಿದೆ. 1.40 ಲಕ್ಷ ಪದವೀಧರರು ಹಾಗೂ ಡಿಪ್ಲೋಮೊದಾರರ ಬ್ಯಾಂಕ್ ಖಾತೆಗಳಿಗೆ ಯುವನಿಧಿ ಹಣ ಸಂದಾಯವಾಗುತ್ತಿದೆ. ಸರ್ಕಾರ ಯುವ ಸಮುದಾಯದ ಜೊತೆಗಿರಲಿದೆ ಎಂದು ಭರವಸೆ ನೀಡಿದರು. ಯುವನಿಧಿ ಅಡಿ ನೋಂದಣಿಯಾಗಿರುವವರಿಗೆ ಕೌಶಲ್ಯಾಭಿವೃದ್ಧಿ ತರಬೇತಿ ನೀಡಲಾಗುತ್ತಿದೆ. ಈ ಮೂಲಕ ಉದ್ಯೋಗಿಗಳ ಸಂಖ್ಯೆಯನ್ನು ಹೆಚ್ಚಿಸಲಾಗುವುದು. ಇಂದು ನೆಪಮಾತ್ರಕ್ಕೆ ಉದ್ಯೋಗ ಮೇಳ ನಡೆಯುತ್ತಿಲ್ಲ. ಎಲ್ಲರಿಗೂ ಉದ್ಯೋಗ ಕೊಡಿಸಲಾಗುತ್ತಿದೆ. ಉದ್ಯೋಗ ಸಿಗದೆ ಇದ್ದ ನೋಂದಾಯಿತರ ದತ್ತಾಂಶಗಳ ಮೇಲೆ ನಿಗಾ ಇಡಲಾಗುವುದು. ನಿರಂತರವಾಗಿ ಅವರ ಜೊತೆ ಸಂಪರ್ಕದಲ್ಲಿದ್ದು, ಅಗತ್ಯ ತರಬೇತಿ ಹಾಗೂ ಕೌಶಲ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುವುದು.

## ನನಗೆ ಬಿಜೆಪಿ ಟಿಕೆಟ್ ಸಿಗುವುದು ಪಕ್ಕಾ: ಸುಮಲತಾ ವಿಶ್ವಾಸ



ಮಂಡ್ಯ: ಬಿಜೆಪಿ ಟಿಕೆಟ್ ಸಿಗುವ ಬಗ್ಗೆ ನನಗೆ ಯಾವುದೇ ಅನುಮಾ ಇಲ್ಲ. ಟಿಕೆಟ್ ಖಂಡಿತಾ ಸಿಗುತ್ತದೆ. ಆದರೆ ಮಂಡ್ಯದಿಂದ ಸ್ಪರ್ಧೆ ಮಾಡಬೇಕು ಎನ್ನುವುದು ನನ್ನ ಆಸೆ ಎಂದು ಸಂಸದೆ ಸುಮಲತಾ ಅಂಬರೀಷ್ ಹೇಳಿದ್ದಾರೆ.

ನಾನು ಟಿಕೆಟ್ ಕೇಳ್ತೇನೆ, ಇದ್ರಲ್ಲಿ ಯಾವುದೇ ಡೌಟ್ ಇಲ್ಲ. ನನಗೆ ಆತ್ಮವಿಶ್ವಾಸ ಇದೆ. ಜೆಡಿಎಸ್ ಎನ್‌ಡಿಎ ಭಾಗ, ನಾನು ಕೂಡ ಎನ್‌ಡಿಎ ಭಾಗ. ಮಂಡ್ಯದಲ್ಲಿ ಸ್ಪರ್ಧಿಸಿ ಗೆಲ್ಲುವ ವಿಶ್ವಾಸ ಇದೆ ಎಂದು ಹೇಳಿದ್ದಾರೆ.

ಬಿಜೆಪಿ ಮಹಿಳಾ ಮೀಸಲಾತಿ ತಂದಿದೆ, ಹಾಗಾಗಿ ನನಗೆ ಟಿಕೆಟ್ ಸಿಕ್ಕೇ ಸಿಗುತ್ತದೆ. ಮೈತ್ರಿ ಅಂತಾದ್ಮೇಲೆ ಜೆಡಿಎಸ್ ಕಡೆಯಿಂದಲೂ ವಿಶ್ವಾಸ ಸಿಗುತ್ತದೆ ಎಂದುಕೊಂಡಿದ್ದೇನೆ ಎಂದಿದ್ದಾರೆ.



## ಜೆಡಿಎಸ್‌ಗೆ ಸೋಲು ಖಚಿತ

ಬೆಂಗಳೂರು: ರಾಜ್ಯದ 4 ಸ್ಥಾನಗಳಿಗೆ ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಅಖಾಡ ಸಿದ್ಧವಾಗಿದೆ. ನಾಳೆ ಬೆಳಗ್ಗೆ ರಾಜ್ಯಸಭಾ ಚುನಾವಣೆಗೆ ಶಾಸಕರು ಮತದಾನ ಮಾಡಲಿದ್ದು, 5ನೇ ಅಭ್ಯರ್ಥಿಗೆ ಬೀಳುವ ಮತಗಳು ತೀವ್ರ ಕುತೂಹಲಕ್ಕೆ ಕಾರಣವಾಗಿದೆ.

ರಾಜ್ಯಸಭಾ ಚುನಾವಣೆ ಹಿನ್ನೆಲೆಯಲ್ಲಿ ಸಚಿವ ಜಮೀರ್ ಅಹ್ಮದ್ ಖಾನ್ ಅವರು ಮಾಜಿ ಸಿಎಂ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ.

ವಿಧಾನಸೌಧದಲ್ಲಿ ಮಾತನಾಡಿದ ಸಚಿವರು, ಬಿಜೆಪಿ, ಜೆಡಿಎಸ್ ಅಭ್ಯರ್ಥಿ ಕುಪೇಂದ್ರ ರೆಡ್ಡಿ ಅವರ ಗೆಲುವಿಗಾಗಿ ಕಾಂಗ್ರೆಸ್ ಶಾಸಕರಿಗೆ ಗಾಳ ಹಾಕಲಾಗಿದೆ. ಜೆಡಿಎಸ್‌ನವ್ರು ಸೋತು, ಸೋತು ಸುಣ್ಣವಾಗಿದ್ದಾರೆ.ಬೇರೆ ವಿಧಿನೇ ಇಲ್ಲ, ಕಾಂಗ್ರೆಸ್‌ಗೆ ವೋಟ್ ಹಾಕ್ಬೇಕು ಎಂದು ಜಮೀರ್ ಅಹ್ಮದ್ ಹೇಳಿದ್ದಾರೆ.



## ಮೆಟ್ರೋನಲ್ಲಿ ರೈತನಿಗೆ ಅಪಮಾನ; ಸಿಬ್ಬಂದಿ ವಜಾ

ಬೆಂಗಳೂರು: ಗಲೀಜು ಬಟ್ಟೆ ಹಾಕಿದ್ದಾನೆ ಎಂದು ಮೆಟ್ರೋ ಒಳಗೆ ಬಿಡದ ಭದ್ರತಾ ಮೇಲ್ವಿಚಾರಕನನ್ನು ಸೇವೆಯಿಂದ ವಜಾಗೊಳಿಸಲಾಗಿದೆ.

ತಲೆ ಮೇಲೆ ಮೂಟೆ ಹೊತ್ತು, ಗಲೀಜು ಬಟ್ಟೆ ಹಾಕಿದ್ದಾನೆ ಅನ್ನೋ ಒಂದೇ ಕಾರಣಕ್ಕೆ ರೈತನನ್ನು ನಮ್ಮ ಮೆಟ್ರೋ ಒಳಗೆ ಬಿಟ್ಟಿರಲಿಲ್ಲ. ರಾಜಾಜಿನಗರದ ಮೆಟ್ರೋ ಸಿಬ್ಬಂದಿಯ ಈ ನಡೆಗೆ ಭಾರೀ ಆಕ್ರೋಶ ವ್ಯಕ್ತವಾಗಿತ್ತು. ವರದಿಗಳ ಬಳಿಕ ಎಚ್ಚೆತ್ತ ಮೆಟ್ರೋ ಹಿರಿಯ ಅಧಿಕಾರಿ ಯಶವಂತ ಚವಾಣ್ ಅವರು ಪ್ರತಿಕ್ರಿಯೆ ನೀಡಿದ್ದಾರೆ.

ಮೆಟ್ರೋ ಒಳಗೆ ರೈತನನ್ನು ಬಿಡದ ಭದ್ರತಾ ಮೇಲ್ವಿಚಾರಕನನ್ನು ಕೂಡಲೇ ವಜಾಗೊಳಿಸಲಾಗಿದೆ. ಈ ಘಟನೆಯ ಕುರಿತು ತನಿಖೆ ನಡೆಸಲಾಗುವುದು ಎಂದು ಮೆಟ್ರೋ ಹಿರಿಯ ಅಧಿಕಾರಿ ಯಶವಂತ ಚವಾಣ್ ಭರವಸೆ ನೀಡಿದ್ದಾರೆ.

## ಭಾರತದ ಒತ್ತಡಕ್ಕೆ ಮಣಿದ ರಷ್ಯಾ: ಸೇನೆಯಿಂದ ಹಲವು ಭಾರತೀಯರ ಬಿಡುಗಡೆ

ನವದೆಹಲಿ: ಭಾರತದ ಒತ್ತಾಯದ ನಂತರ ರಷ್ಯಾದ ಸೇನೆಯಲ್ಲಿ ಸಹಾಯಕ ಸಿಬ್ಬಂದಿಯಾಗಿ ಕಾರ್ಯನಿರ್ವಹಿಸುತ್ತಿರುವ ಹಲವಾರು ಭಾರತೀಯರನ್ನು ಬಿಡುಗಡೆ ಮಾಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

ರಷ್ಯಾದ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ರಷ್ಯಾದ ಸೈನ್ಯದಿಂದ ಭಾರತೀಯ ಪ್ರಜೆಗಳನ್ನು ಶೀಘ್ರವಾಗಿ ಬಿಡುಗಡೆ ಮಾಡಲು ಎಲ್ಲಾ ಸಂಬಂಧಿತ ವಿಷಯಗಳನ್ನು ಮುಂದುವರಿಸಲು ಭಾರತವು ಬದ್ಧವಾಗಿದೆ. ಈ ವಿಷಯಗಳಿಗೆ 'ಹೆಚ್ಚಿನ ಆದ್ಯತೆಯನ್ನು' ಲಗತ್ತಿಸುತ್ತದೆ ಎಂದು ಅದು ಹೇಳಿದೆ.

ಈ ವಿಷಯವನ್ನು ಪ್ರಸ್ತಾಪಿಸಿದ ನಂತರ ಹಲವಾರು ಭಾರತೀಯರನ್ನು ಬಿಡುಗಡೆ ಮಾಡಲಾಗಿದೆ ಎಂದು ಹೇಳಿಕೆ ತಿಳಿಸಿದೆ. ಆದರೆ, ಈಗ ರಷ್ಯಾದ ಸೇನೆಯಲ್ಲಿ ಎಷ್ಟು ಭಾರತೀಯರು ಸೇವೆ ಸಲ್ಲಿಸುತ್ತಿದ್ದಾರೆ ಎಂಬುದು ಸ್ಪಷ್ಟವಾಗಿಲ್ಲ. ರಷ್ಯಾದ ಸೇನೆಯಲ್ಲಿ ಕೆಲಸ ಮಾಡುತ್ತಿರುವ ಭಾರತೀಯರ ಸಂಖ್ಯೆ ಸುಮಾರು 100 ಇರಬಹುದು ಎಂದು ವರದಿಗಳು ಹೇಳುತ್ತಿವೆ. ರಷ್ಯಾ ಮತ್ತು ಉಕ್ರೇನ್ ನಡುವೆ ನಡೆಯುತ್ತಿರುವ ಸಂಘರ್ಷದಿಂದ ದೂರವಿರಲು ಭಾರತ ತನ್ನ ನಾಗರಿಕರನ್ನು ಕೇಳಿಕೊಂಡಿತ್ತು.

ಸದ್ಯ ಹಲವಾರು ಭಾರತೀಯರು ಈಗಾಗಲೇ ನಿರಾಳರಾಗಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ರಷ್ಯಾದ ಸೇನೆಯಲ್ಲಿ ಸಹಾಯಕ ಸಿಬ್ಬಂದಿಯಾಗಿ ಸೇವೆ ಸಲ್ಲಿಸುತ್ತಿರುವ ಭಾರತೀಯರ ಬಿಡುಗಡೆಯನ್ನು ತ್ವರಿತಗೊಳಿಸಲು ಸಚಿವಾಲಯವು ಯೋಜಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್ ಕಳೆದ ವಾರ ಹೇಳಿದ್ದಾರೆ. 'ಬಿಡುಗಡೆ'ಗಾಗಿ ಮಾಸ್ಕೋದೊಂದಿಗೆ ನಿರಂತರ ಸಂಪರ್ಕದಲ್ಲಿದ್ದೇವೆ.

## ತಿಚಿ ಹೈಟೆಕ್ ವೇಶ್ಯಾವಾಟಿಕೆ: 7 ವಿದೇಶಿ ಯುವತಿಯರ ರಕ್ಷಣೆ



ಬೆಂಗಳೂರು: ಮಸಾಜ್ ಪಾರ್ಲರ್ ಹೆಸರಿನಲ್ಲಿ ವೇಶ್ಯಾವಾಟಿಕೆ ದಂಧೆ ನಡೆಸುತ್ತಿದ್ದ ಥಾಯ್ ಸ್ಪಾ ಮೇಲೆ ಯಲಹಂಕ ಪೊಲೀಸರು ದಾಳಿ ಮಾಡಿ 7 ಮಂದಿ ಯುವತಿಯರನ್ನು ರಕ್ಷಿಸಿದ್ದಾರೆ. ಪ್ರಕರಣ ಸಂಬಂಧ ಪೊಲೀಸರು ಮೂವರನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

ಬಂಧಿತರನ್ನು ಆಂಜನೇಯ ಗೌಡ, ಹರೀಶ್ ಸೇರಿದಂತೆ ಮೂವರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ಬಂಧಿತ ಆರೋಪಿಗಳು ಯಲಹಂಕ ನ್ಯೂ ಟೌನ್ನಲ್ಲಿ ರೋರಾ ಲಕ್ಸುರಿ ಥಾಯ್ ಸ್ಪಾ ಹೆಸರಿನಲ್ಲಿ ವೇಶ್ಯಾವಾಟಿಕೆ ನಡೆಸುತ್ತಿದ್ದರು ಎಂದು ತಿಳಿದು ಬಂದಿದೆ.

ಬಂಧಿತ ಆರೋಪಿಗಳು ಥೈಲ್ಯಾಂಡ್ ಸೇರಿದಂತೆ ವಿವಿಧ ದೇಶದ ಮಹಿಳೆಯರನ್ನು ಟೂರಿಸ್ಟ್ ವೀಸಾ ಹಾಗೂ ಬ್ಯುಸಿನೆಸ್ ವೀಸಾ ಮೂಲಕ ಬೆಂಗಳೂರಿಗೆ ಕರೆತಂದು ವೇಶ್ಯಾವಾಟಿಕೆಗೆ ತಳ್ಳುತ್ತಿದ್ದರು.

ದೇಶದಿಂದ ಯುವತಿಯರನ್ನು ಕರೆ ತಂದು ವೇಶ್ಯಾವಾಟಿಕೆ ನಡೆಸಲಾಗುತ್ತಿದೆ ಎಂಬ ಖಚಿತ ಮಾಹಿತಿ ಪಡೆದ ಈಶಾನ್ಯ ವಿಭಾಗದ ಡಿಸಿಪಿ ಯಲಹಂಕ ನ್ಯೂಟೌನ್ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಯಲಹಂಕ ನ್ಯೂ ಟೌನ್ ಪೊಲೀಸರು ದಾಳಿ ಮಾಡಿದ್ದಾರೆ.

ದಾಳಿ ವೇಳೆ ಆರೋಪಿಗಳು ವಿವಿಧ ದೇಶದ ಮಹಿಳೆಯರನ್ನು ಟೂರಿಸ್ಟ್ ವೀಸಾ ಹಾಗೂ ಬ್ಯುಸಿನೆಸ್ ವೀಸಾ ಮೂಲಕ ಬೆಂಗಳೂರಿಗೆ ಕರೆತಂದು ವೇಶ್ಯಾವಾಟಿಕೆ ನಡೆಸುತ್ತಿರುವುದು ಬೆಳಕಿಗೆ ಬಂದಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳನ್ನು ವಿಚಾರಣೆಗೆ ಒಳಪಡಿಸಿದ್ದಾರೆ.

## ಸಂಗೀತ ಮಾಂತ್ರಿಕ ಪಂಕಜ್ ಉದಾಸ್ ಇನ್ನಿಲ್ಲ: ಕಂಬನಿ ಮಿಡಿದ ಸಿನಿರಂಗ



ಮುಂಬೈ: ಅನಾರೋಗ್ಯದಿಂದ ಬಳಲುತ್ತಿದ್ದ ಬಾಲಿವುಡ್ ಖ್ಯಾತ ಗಜಲ್ ಗಾಯಕ ಪಂಕಜ್ ಉದಾಸ್ ನಿಧನರಾಗಿದ್ದಾರೆ. 72ನೇ ವಯಸ್ಸಿನಲ್ಲಿ ಪಂಕಜ್ ಉದಾಸ್ ಕೊನೆಯುಸಿರೆಳೆದಿದ್ದಾರೆ. ಗಜಲ್ ಹಾಡುಗಳಿಂದ ಗಾಯಕ ಪಂಕಜ್ ಉದಾಸ್ ಫೇಮಸ್ ಆಗಿದ್ದರು.

90ರ ದಶಕದಲ್ಲಿ ಕನ್ನಡ, ಗಜಲ್ ಮತ್ತು ಹಿಂದಿ ಸಿನಿಮಾಗಳ ಹಾಡಿನಿಂದ ಭಾರಿ ಜನಪ್ರಿಯರಾಗಿದ್ದರು. ಛಿಟ್ಟಿ ಆಯಿಹೈ , ಸಾಜನ್ ಸಿನಿಮಾದ ಹಾಡುಗಳನ್ನು ಹಾಡಿದ್ದಾರೆ. 2006ರಲ್ಲಿ ಪಂಕಜ್ ಗಾಯನ ಸೇವೆಗೆ ಪದ್ಮಶ್ರೀ ಪ್ರಶಸ್ತಿ ಕೂಡ ಬಂದಿತ್ತು.

ಕಿಚ್ಚ ಸುದೀಪ್ ನಟನೆಯ ಸ್ಪರ್ಶ ಸಿನಿಮಾದ ಬರೆಯದ ಮೌನದ ಕವಿತೆ ಹಾಗೂ ಚಂದಕ್ಕಿಂತ ಚಂದ ನೀನೇ ಸುಂದರ ಹಾಡನ್ನು ಪಂಕಜ್ ಉದಾಸ್ ಅವರು ಹಾಡಿದ್ದರು. ನಾದಬ್ರಹ್ಮ ಹಂಸಲೇಖ ಅವರು ಈ ಹಾಡಿಗೆ ಸಂಗೀತ ಸಂಯೋಜನೆ ಮಾಡಿದ್ದಾರೆ.

ಕಳೆದ 10 ದಿನದ ಹಿಂದೆ ಗಾಯಕ ಪಂಕಜ್ ಉದಾಸ್ ಅವರು ವಯೋಸಹಜ ಕಾಯಿಲೆಯಿಂದ ಬಳಲುತ್ತಿದ್ದರು. ಹೀಗಾಗಿ ಅವರನ್ನು ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿತ್ತು.

ಆದರೆ ಸೋಮವಾರ ಬೆಳಗ್ಗೆ 11 ಗಂಟೆಗೆ ಗಾಯಕ ಪಂಕಜ್ ಉದಾಸ್ ಇಹಲೋಕ ತ್ಯಜಿಸಿದ್ದಾರೆ. ಇನ್ನು ಗಾಯಕ ಪಂಕಜ್ ಉದಾಸ್ ನಿಧನ ಸುದ್ದಿಯನ್ನು ಅವರ ಕುಟುಂಬದವರು ಇನ್ಸ್ಟಾಗ್ರಾಮ್ ಖಾತೆಯಲ್ಲಿ ಮಾಹಿತಿ ನೀಡಿದ್ದಾರೆ. ಗಜಲ್ ಗಾಯಕ ಪಂಕಜ್ ಉದಾಸ್ ನಿಧನಕ್ಕೆ ಅನೇಕ ಗಣ್ಯರು ಸಂತಾಪ ಸೂಚಿಸಿದ್ದಾರೆ.


## ಮುಂಬೈನ ಸುಲಭವಾಗಿ ಮಣಿಸಿದ ಸುದೀಪ್ ಟೀಂ



ಬೆಂಗಳೂರು: ಬಹುನಿರೀಕ್ಷಿತ ಸೆಲೆಬ್ರಿಟಿ ಕ್ರಿಕೆಟ್ ಲೀಗ್ **(CCL)** ಆರಂಭವಾಗಿದ್ದು, ಸುದೀಪ್ ನೇತೃತ್ವದ ಕರ್ನಾಟಕ ಬುಲ್ಡೋಜರ್ಸ್ ಮುಂಬೈ ಹೀರೋಸ್ ತಂಡವನ್ನು ಮಣಿಸಿದೆ. ಹತ್ತು ಓವರ್‌ಗಳಿರುವ ಈ ಪಂದ್ಯದಲ್ಲಿ ರಿತೇಶ್ ದೇಶ್‌ಮುಖ್ ನಾಯಕತ್ವದ ಬಾಲಿವುಡ್ ತಂಡವನ್ನು ಸುದೀಪ್ ತಂಡ ಮಣಿಸಿದೆ.

18 ಎಸೆತಗಳಲ್ಲಿ ಡಾರ್ಲಿಂಗ್ ಕೃಷ್ಣ 55 ರನ್‌ಗಳನ್ನು ಕಲೆ ಹಾಕಿ ಹಾಫ್ ಸೆಂಚುರಿ ಗಳಿಸಿದ್ದರು. ಕರ್ನಾಟಕ ತಂಡದ ಮೊತ್ತ ರೀಚ್ ಮಾಡಲಾಗದೆ ಬಾಲಿವುಡ್ ತಂಡ ಸೋಲೊಪ್ಪಿಕೊಂಡಿತು.

## ರಾಜ್ಯಸಭೆ ಚುನಾವಣೆ ಹಿನ್ನೆಲೆ ಕಾಂಗ್ರೆಸ್ ಶಾಸಕರಿಗೆ ವಿಪ್ ಜಾರಿ: ಅಶೋಕ್ ಪಟ್ಟಣ್



ಬೆಂಗಳೂರು: ರಾಜ್ಯಸಭೆ ಚುನಾವಣೆಯಲ್ಲಿ ಮತ ಚಲಾವಣೆಗೆ ಕಡ್ಡಾಯ ಹಾಜರಾತಿಗೆ ಕಾಂಗ್ರೆಸ್ ಶಾಸಕರಿಗೆ ವಿಪ್ ಜಾರಿ ಮಾಡಲಾಗಿದೆ ಎಂದು ಸರ್ಕಾರದ ಮುಖ್ಯ ಸಚೇತಕ ಅಶೋಕ್ ಪಟ್ಟಣ್ ತಿಳಿಸಿದ್ದಾರೆ. ವಿಧಾನಸೌಧದಲ್ಲಿ ಮಾತನಾಡಿದ ಅವರು, ಎಲ್ಲಾ ಶಾಸಕರಿಗೂ ವಿಪ್ ಕೊಟ್ಟಿದ್ದೀವಿ. ಸಂಜೆ 6 ಗಂಟೆಗೆ ಕಂಪಲ್ಸರಿ ಹಾಜರಾಗಲು ಹೇಳಿದ್ದೀವಿ ಹಿಲ್ಟನ್ ಹೋಟೆಲ್‌ಗೆ ಬರುವಂತೆ ವಾಟ್ಸಪ್‌ನಲ್ಲಿ ಸಂದೇಶ ಕಳಿಸಿದ್ದೀವಿ, ವೈಯಕ್ತಿಕವಾಗಿಯೂ ಫೋನ್ ಮಾಡಿ ಹೇಳಿದ್ದೀವಿ. ಎಲ್ಲಾ ಶಾಸಕರು ರಾತ್ರಿ ಅಲ್ಲೇ ಉಳಿದುಕೊಳ್ತೀವಿ ಎಂದು ಹೇಳಿದ್ದಾರೆ. ಮಂಗಳವಾರ ಬೆಳಗ್ಗೆ ಎಲ್ಲಾ ಶಾಸಕರು ಹೋಟೆಲ್‌ನಿಂದ ಬಸ್‌ನಲ್ಲಿ ಬರ್ತೀವಿ. ಬಸ್ ವ್ಯವಸ್ಥೆ ಆಗಿದೆ, ಎಲ್ಲರೂ ಒಟ್ಟಿಗೆ ಬಂದು ಮತ ಹಾಕಿ ಹೋಗ್ತೀವಿ. ವೋಟಿಂಗ್ ಪ್ಯಾಟ್ರನ್ ಟ್ರೈನಿಂಗ್ ಕೊಡೋಕೆ, ಯಾವ ರೀತಿ ಮಾರ್ಕ್ ಮಾಡಬೇಕು ಅಂತಲೇ ಶಾಸಕಾಂಗ ಪಕ್ಷದ ಸಭೆ ಕರೆದಿರೋದು. ಅಡ್ಡ ಮತದಾನದ ಭೀತಿನೇ ಇಲ್ಲ. ಏಕೆಂದರೆ ತೋರಿಸಿ ವೋಟ್ ಹಾಕಬೇಕು, ಆದ್ದರಿಂದ ಯಾರೂ ಬೇರೆಯವರಿಗೆ ಮತ ಹಾಕಲ್ಲ. ಅಡ್ಡ ಮತದಾನ ಮಾಡಿದ್ರೆ ಸ್ಪೀಕರ್‌ಗೆ ದೂರು ಕೊಟ್ಟು ಶಾಸಕ ಸ್ಥಾನದಿಂದ ವಜಾ ಗೊಳಿಸ್ತೀವಿ, ಕ್ರಮ ಕೈಗೊಳ್ತೀವಿ ಎಂದು ಎಚ್ಚರಿಕೆ ನೀಡಿದ್ದಾರೆ.

## ರಾಜ್ಯಸಭೆ ಚುನಾವಣೆ: ವಿಧಾನಸೌಧ ಸುತ್ತಲೂ 144 ಸೆಕ್ಷನ್ ಜಾರಿ



ಬೆಂಗಳೂರು: ಅಧಿವೇಶನ ಮತ್ತು ರಾಜ್ಯ ಸಭೆ ಚುನಾವಣೆ ಹಿನ್ನೆಲೆ ವಿಧಾನಸೌಧ ಸುತ್ತಲೂ 144 ಸೆಕ್ಷನ್ ಜಾರಿ ಮಾಡಿ ಆದೇಶ ಹೊರಡಿಸಲಾಗಿದೆ.

ಇಂದಿನಿಂದ 28 ನೇ ತಾರೀಖು ಬೆಳಗ್ಗೆ 6 ಗಂಟೆವರೆಗೆ ನಿಷೇದಾಜ್ಞೆ ಜಾರಿ ಮಾಡಿ ಆದೇಶ ಹೊರಡಿಸಿದೆ. ವಿವಿಧ ರಾಜಕೀಯ ಪಕ್ಷಗಳು, ಹಲವು ಸಂಘಟನೆಗಳಿಂದ ಪ್ರತಿಭಟನೆ ಸಾಧ್ಯತೆ ಹಿನ್ನೆಲೆ 144ಸೆಕ್ಷನ್ ಜಾರಿ ಮಾಡಿ ನಗರ ಪೊಲೀಸ್ ಆಯುಕ್ತ ಬಿ ದಯಾನಂದ್ರಿಂದ ಆದೇಶ ನೀಡಲಾಗಿದೆ. ಕರ್ನಾಟಕದ 4 ರಾಜ್ಯಸಭಾ ಸ್ಥಾನಗಳಿಗೆ ಚುನಾವಣೆ ಮಂಗಳವಾರ ನಡೆಯಲಿದೆ. ಮಂಗಳವಾರ ಬೆಳಗ್ಗೆ 10 ಗಂಟೆಗೆ ವಿಧಾನಸೌಧದಲ್ಲಿ ಮತದಾನ ಆರಂಭವಾಗಲಿದ್ದು, ಸಂಜೆ 4 ಗಂಟೆಯವರೆಗೂ ಹಕ್ಕು ಚಲಾವಣೆಗೆ ಅವಕಾಶವಿರಲಿದೆ. ಸಂಜೆ 4 ಗಂಟೆಯಿಂದ 5ಗಂಟೆಯವರೆಗೆ ಮತಗಳ ಎಣಿಕೆ ನಡೆಯಲಿದೆ.

ಲೋಕಸಭೆ ಚುನಾವಣೆಗೂ ಮುನ್ನವೇ ರಾಜ್ಯದಲ್ಲಿ ರಾಜ್ಯಸಭೆಯ ಲೆಕ್ಕಾಚಾರ ಜೋರಾಗಿಯೇ ಇದೆ. ಏನಾದರೂ ಮಾಡಿ ಕಾಂಗ್ರೆಸ್ ಬಿಗ್ ಶಾಕ್ ಕೊಡಬೇಕು ಅಂತ ತಂತ್ರ ಹೂಡಿರುವ ಬಿಜೆಪಿ–ಜೆಡಿಎಸ್ ಎರಡನೇ ಅಭ್ಯರ್ಥಿ ಮೂಲಕ ಕಾಂಗ್ರೆಸ್ಗೆ ಚೆಕ್ಮೆಟ್ ಕೊಡುವುದಕ್ಕೆ ಸನ್ನದ್ಧವಾಗಿದ್ದಾರೆ. ಕೊನೆ ಕ್ಷಣದಲ್ಲಿ ಮಾಜಿ ರಾಜ್ಯಸಭಾ ಸದಸ್ಯ ಕುಪೇಂದ್ರ ರೆಡ್ಡಿಯನ್ನ ಅಖಾಡಕ್ಕೆ ಇಳಿಸಿದ್ದು, ಕಾಂಗ್ರೆಸ್ ಮಣಿಸುವುದಕ್ಕೆ ದೊಡ್ಡ ಲೆಕ್ಕಾಚಾರಗಳನ್ನೇ ಹಾಕಿದ್ದಾರೆ.

ವಿಧಾನಭೆ ಬಲಾಬಲದ ಪ್ರಕಾರ ಕಾಂಗ್ರೆಸ್ ಮೂರು ಸ್ಥಾನ, ಬಿಜೆಪಿ ಒಂದು ಸ್ಥಾನ ಗೆಲ್ಲಲು ಸುಲಭ ಅವಕಾಶ ಇತ್ತು. ಆದರೆ ಇದೀಗ ಬಿಜೆಪಿ–ಜೆಡಿಎಸ್ ಮೈತ್ರಿಯ 2ನೇ ಅಭ್ಯರ್ಥಿ ಎಂಟ್ರಿಯಿಂದ ಕಾಂಗ್ರೆಸ್ಗೆ ಈಗ ಅಡ್ಡಮತದಾನದ ಭೀತಿ ಶುರುವಾಗಿದೆ. ಒಬ್ಬ ಅಭ್ಯರ್ಥಿಯ ಗೆಲುವಿಗೆ 45 ಮತಗಳು ಬೇಕಾಗುತ್ತದೆ. ಕಾಂಗ್ರೆಸ್ನ ಸಂಖ್ಯಾಬಲ 135 ಇರುವುದರಿಂದ ಮೂರು ಅಭ್ಯರ್ಥಿಗಳನ್ನ ಆರಾಮಾಗಿ ಗೆಲ್ಲಿಸಬಹುದು. ಇನ್ನೊಂದೆಡೆ ಬಿಜೆಪಿ ಸಂಖ್ಯಾಬಲ 66 ಆಗಿದ್ದು, ಕೇವಲ ಒಬ್ಬ ಅಭ್ಯರ್ಥಿಯನ್ನ ಮಾತ್ರ ಗೆಲ್ಲಿಸಬಹುದಾಗಿದೆ. ಇನ್ನು ಮೈತ್ರಿಕೂಟದ ಅಭ್ಯರ್ಥಿ ಆಗಿರುವ ಕುಪೇಂದ್ರ ರೆಡ್ಡಿ ಎಂಟ್ರಿಯಿಂದಾಗಿ ರಾಜ್ಯಸಭೆ ಅಖಾಡ ಹೈವೋಲ್ಟೇಜ್ ಪಡೆದುಕೊಂಡಿದೆ.

ಬಿಜೆಪಿ ಬಳಿ ಇರುವ 66 ಮತಗಳಲ್ಲಿ 45 ಮತಗಳು ಕಳೆದರೆ 21 ಹೆಚ್ಚುವರಿ ಮತ ಉಳಿಯಲಿದೆ. ಬಿಜೆಪಿ 21 ಮತ, ಜೆಡಿಎಸ್ ಬಳಿ ಇರುವ 19, ಪಕ್ಷೇತರ 2 ಮತ್ತು ಕೆಆರ್‌ಪಿಪಿಯ, ಸರ್ವೋದಯ ಕರ್ನಾಟಕದ ತಲಾ 1 ಮತಗಳನ್ನ ಪಡೆಯಲು ಸಾಧ್ಯವಾದರೆ 44 ಮತ ಕುಪೇಂದ್ರ ರೆಡ್ಡಿ ಪಾಲಾಗಲಿದೆ. ಕಾಂಗ್ರೆಸ್‌ನಲ್ಲಿರುವ ಅಸಮಾಧಾನಿತರಿಗೆ ಗಾಳ ಹಾಕಿ ಇನ್ನೂ ಎರಡು ಅಥವಾ 3 ಶಾಸಕರಿಂದ ಅಡ್ಡ ಮತದಾನ ಮಾಡಿಸಿದರೆ ಗೆಲುವು ಸಾಧ್ಯ ಎಂಬ ಲೆಕ್ಕಾಚಾರ ಹಾಕಲಾಗಿದೆ.

## ತ್ರಿಪುರಾ: ಸಿಂಹಗಳಿಗೆ ಅಕ್ಬರ್–ಸೀತಾ ಎಂದು ನಾಮಕರಣ ಮಾಡಿದ್ದ ಹಿರಿಯ ಐಎಫ್‌ಎಸ್ ಅಧಿಕಾರಿ ಅಮಾನತು



ಅಗರ್ತಲಾ: ಮೃಗಾಲಯದಲ ಸಿಂಹ ಮತ್ತು ಸಿಂಹಿಣಿಗೆ ಅಕ್ಬರ್‌ಸೀತಾ ಎಂದು ನಾಮಕರಣ ಮಾಡಿದ ಹಿರಿಯ ಐಎಫ್ಎಸ್ ಅಧಿಕಾರಿಯನ್ನು ಸರ್ಕಾರ ಇದೀಗ ಅಮಾನತುಗೊಳಿಸಿದೆ.

ನಾಮಕರಣದ ವಿವಾದದ ನಡುವೆ, ರಾಜ್ಯ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಪ್ರಬಿನ್ ಲಾಲ್ ಅಗರ್ವಾಲ್ ರನ್ನು ಸರ್ಕಾರ ಅಮಾನತುಗೊಳಿಸಿದೆ. ಈ ಹೆಸರುಗಳು ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿವೆ ಎಂದು ಆರೋಪಿಸಿ ವಿಶ್ವ ಹಿಂದೂ ಪರಿಷತ್ (ವಿಎಚ್‌ಪಿ) ಕಲ್ಕತ್ತಾ ಹೈಕೋರ್ಟ್‌ನಲ್ಲಿ ದೂರಿನ ಹಿನ್ನೆಲೆಯಲ್ಲಿ ಅಮಾನತುಗೊಳಿಸಲಾಗಿದೆ.

ಮೃಗಾಲಯದಲ್ಲಿ ಇದ್ದ ಸಿಂಹಕ್ಕೆ ಅಕ್ಬರ್ ಎಂದು ಹಾಗೂ ಸಿಂಹಿಣಿಗೆ ಸೀತಾ ಎಂದು ನಾಮಕರಣ ಮಾಡಿದ್ದ ವಿಚಾರ ತೀವ್ರ ವಿವಾದಕ್ಕೆ ಕಾರಣವಾದ ಹಿನ್ನೆಲೆಯಲ್ಲಿ ತ್ರಿಪುರಾ ಸರ್ಕಾರ ತನ್ನ ಅರಣ್ಯ ಇಲಾಖೆಯ ಪ್ರಧಾನ ಮುಖ್ಯ ಸಂರಕ್ಷಣಾಧಿಕಾರಿಯನ್ನು ಅಮಾನತು ಮಾಡಿದೆ. ಈ ವಿವಾದ ಸಂಬಂಧ ವಿಶ್ವ ಹಿಂದೂ ಪರಿಷತ್ ಕೋಲ್ಕತ್ತಾ ಹೈಕೋರ್ಟ್‌ನಲ್ಲಿ ದೂರು ಸಲ್ಲಿಕೆ ಮಾಡಿದ್ದ ಹಿನ್ನೆಲೆಯಲ್ಲಿ ಪ್ರಬೀನ್ ಲಾಲ್ ಅಗರ್ವಾಲ್ ಅವರನ್ನು ಅಮಾನತು ಮಾಡಲಾಗಿದೆ. ಈ ರೀತಿಯ ಹೆಸರು ಇಡುವ ಮೂಲಕ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತರಲಾಗಿದೆ ಎಂದು ಹಿಂದೂ ಪರ ಸಂಘಟನೆ ಆರೋಪ ಮಾಡಿತ್ತು. ಸಿಂಹ ಹಾಗೂ ಸಿಂಹಿಣಿಯನ್ನು ಫೆಬ್ರವರಿ 12 ರಂದೇ ತ್ರಿಪುರಾದ ಸೆಪಾಹಿಜಲ ಮೃಗಾಲಯದಿಂದ ಸಿಲಿಗುರಿಯ ಉತ್ತರ ಬಂಗಾಳ ವನ್ಯ ಮೃಗಗಳ ಉದ್ಯಾನಕ್ಕೆ ವರ್ಗಾವಣೆ ಮಾಡಲಾಗಿತ್ತು. ವನ್ಯಜೀವಿಗಳ ವಿನಿಮಯ ಕಾರ್ಯಕ್ರಮದ ಅಡಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಸರ್ಕಾರ ತಿಳಿಸಿದೆ.

ಸಿಂಹ ಹಾಗೂ ಸಿಂಹಿಣಿಯನ್ನು ತ್ರಿಪುರಾದಿಂದ ಪಶ್ಚಿಮ ಬಂಗಾಳ ರಾಜ್ಯದ ಸಿಲಿಗುರಿಯಲ್ಲಿ ಇರುವ ಉತ್ತರ ಬಂಗಾಳ ವನ್ಯ ಮೃಗಗಳ ಉದ್ಯಾನಕ್ಕೆ ಕರೆ ತಂದ ಬಳಿಕ ಈ ವಿವಾದ ಭುಗಿಲೆದ್ದಿತ್ತು.

1994ರ ಬ್ಯಾಚ್‌ನ ಐಎಫ್‌ಎಸ್ ಅಧಿಕಾರಿಯಾಗಿರುವ ಅಗರ್ವಾಲ್ ಅವರು ತ್ರಿಪುರ ಮುಖ್ಯ ವೈಲ್ಡ್ ಲೈಫ್ ವಾರ್ಡನ್ ಆಗಿದ್ದರು. ಫೆಬ್ರವರಿ 12 ರಂದು ಪ್ರಾಣಿ ವಿನಿಮಯ ಕಾರ್ಯಕ್ರಮದ ಭಾಗವಾಗಿ ತ್ರಿಪುರಾ ಮೃಗಾಲಯದಿಂದ ಉತ್ತರ ಬಂಗಾಳಕ್ಕೆ ಸಿಂಹಗಳನ್ನು ಸ್ಥಳಾಂತರಿಸಲಾಯಿತು. ಆ ಸಮಯದಲ್ಲಿ ರಿಜಿಸ್ಟರ್‌ನಲ್ಲಿ ಪ್ರಾಣಿಗಳ ಹೆಸರನ್ನು ನಮೂದಿಸಿದವರು ಅಗರ್ವಾಲ್. ತ್ರಿಪುರಾ ಮೃಗಾಲಯದ ಅಧಿಕಾರಿಗಳು ಸಿಂಹಗಳ ಹೆಸರನ್ನು ನೀಡಿದ್ದಾರೆ ಎಂದು ಬಂಗಾಳ ಅರಣ್ಯ ಇಲಾಖೆ ಕೊಲ್ಕತ್ತಾ ಹೈಕೋರ್ಟ್‌ಗೆ ತಿಳಿಸಿದೆ. ವಿಎಚ್‌ಪಿ ದೂರಿನ ಮೇರೆಗೆ ಸಿಂಹ ಜೋಡಿಯ ಹೆಸರನ್ನು ಬದಲಾಯಿಸುವಂತೆಯೂ ನ್ಯಾಯಾಲಯ ಸೂಚಿಸಿದೆ.

## ಬಿಜೆಪಿ ಐಟಿ ಸೆಲ್‌ಗೆ ಸಂಬಂಧಿಸಿದ ವಿಡಿಯೊ ರಿಟ್ವೀಟ್ ಮಾಡಿ ತಪ್ಪು ಮಾಡಿದೆ: 'ಸುಪ್ರೀಂ'ಗೆ ದೆಹಲಿ ಸಿಎಂ ಕೇಜ್ರಿವಾಲ್ ಹೇಳಿಕೆ



ನವದೆಹಲಿ: ಮಾನನಷ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರು ಬಿಜೆಪಿ ಐಟಿ ಸೆಲ್‌ಗೆ ಸಂಬಂಧಿಸಿದ ಮಾನಹಾನಿಕರ ವಿಡಿಯೊವನ್ನು ಮರುಟ್ವೀಟ್ ಮಾಡುವ ಮೂಲಕ ತಪ್ಪು ಮಾಡಿದ್ದೇನೆ ಎಂದು ಸೋಮವಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದ್ದಾರೆ. ಬಿಜೆಪಿ ಐಟಿ ಸೆಲ್‌ಗೆ ಸಂಬಂಧಿಸಿದ ಯೂಟ್ಯೂಬರ್ ಧ್ರುವ ರಥೀ ಅವರು ಪ್ರಸಾರ ಮಾಡಿದ್ದ ಮಾನಹಾನಿಕರ ವೀಡಿಯೊವನ್ನು ಮರುಟ್ವೀಟ್ ಮಾಡುವ ಮೂಲಕ ತಪ್ಪು ಮಾಡಿದ್ದೇನೆ ಎಂದು ಕೇಜ್ರಿವಾಲ್ ತಪ್ಪೊಪ್ಪಿಗೆ ಹೇಳಿಕೆ ನೀಡಿದ್ದಾರೆ. ಕೇಜ್ರಿವಾಲ್ ತಪ್ಪೊಪ್ಪಿಕೊಂಡ ಹಿನ್ನೆಲೆಯಲ್ಲಿ ಸುಪ್ರೀಂ ಕೋರ್ಟ್ ಕೇಜ್ರಿವಾಲ್ ವಿರುದ್ಧ ದೆಹಲಿ ನ್ಯಾಯಾಲಯದಲ್ಲಿ **(Delhi Court)** ನಡೆಯುತ್ತಿದ್ದ ಮಾನನಷ್ಟ ಕೇಸ್ ಅರ್ಜಿಯ ವಿಚಾರಣೆಗೆ ತಡೆ ನಡೆದಿದೆ.

ಏನಿದು ಪ್ರಕರಣ? ಯೂಟ್ಯೂಬರ್ ಧ್ರುವ್ ರಥೀ ಅವರು 2018ರಲ್ಲಿ ಬಿಜೆಪಿ ಐಟಿ ಸೆಲ್‌ಗೆ ಸಂಬಂಧಿಸಿದಂತೆ , 'ಐ ಸಪೋರ್ಟ್ ನರೇಂದ್ರ ಮೋದಿ' ಎಂಬ ಪೇಜ್ ಅಡ್ಮಿನ್ 'ಬಿಜೆಪಿ ಐಟಿ ಸೆಲ್ ಭಾಗ–2' ನಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿ ರಥೀ ಟ್ವೀಟ್ ಮಾಡಿದ್ದರು. ಈ ಟ್ವೀಟ್ ಅನ್ನು ಕೇಜ್ರಿವಾಲ್ ಟ್ವೀಟ್ ಮಾಡಿದ್ದರು. ಕೇಜ್ರಿವಾಲ್ ತನ್ನ ವಿರುದ್ಧ ಸುಳ್ಳು ಪ್ರಚಾರ ಮಾಡಿದ್ದಾರೆ ಎಂದು ಆರೋಪಿಸಿ ಐ ಸಪೋರ್ಟ್ ನರೇಂದ್ರ ಮೋದಿ ಪೇಜ್ ಅಡ್ಮಿನ್ ಮಾನನಷ್ಟ ಕೇಸ್ ದಾಖಲಿಸಿದ್ದರು. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಜ್ರಿವಾಲ್ ವಿಚಾರಣೆಗೆ ಹಾಜರಾಗುವಂತೆ ದೆಹಲಿಯ ನ್ಯಾಯಾಲಯ 2019ರಲ್ಲಿ ಸಮನ್ಸ್ ಜಾರಿ ಮಾಡಿತ್ತು. ಈ ಸಮನ್ಸ್ ರದ್ದು ಪಡಿಸುವಂತೆ ಕೋರಿ ಕೇಜ್ರಿವಾಲ್ ನಂತರ ಸೆಶನ್ಸ್ ಕೋರ್ಟ್ ಮತ್ತು ಹೈಕೋರ್ಟ್ ಮೊರೆ ಹೋಗಿದ್ದರು. ದೆಹಲಿ ಹೈಕೋರ್ಟ್ ವಿಚಾರಣೆಗೆ ಹಾಜರಾಗುವಂತೆ ದೆಹಲಿ ನ್ಯಾಯಾಲಯ ನೀಡಿದ್ದ ಆದೇಶವನ್ನು ಎತ್ತಿ ಹಿಡಿದಿತ್ತು. ಈ ಹಿನ್ನೆಲೆಯಲ್ಲಿ ಕೇಜ್ರಿವಾಲ್ ಸುಪ್ರೀಂ ಮೊರೆ ಹೋಗಿದ್ದರು.

## ಮಕ್ಕಳಿಗಾಗಿ ಮಕ್ಕಳ ಹಬ್ಬ ಕಾರ್ಯಕ್ರಮ

ಧಾರವಾಡ: ಕರ್ನಾಟಕ ಬಾಲವಿಕಾಸ ಅಕಾಡೆಮಿ ಹಾಗೂ ಧಾರವಾಡ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ ಜಿಲ್ಲಾ ಮಟ್ಟದಲ್ಲಿ ಧಾರವಾಡ ಜಿಲ್ಲೆಯ 06 ರಿಂದ 18 ವರ್ಷದೊಳಗಿನ ಸಂಗೀತ, ಕಾವ್ಯ, ನಾಟಕ ಪ್ರದರ್ಶನ, ಜನಪದ ನೃತ್ಯ, ಕ್ರೀಡೆ, ಚಿತ್ರಕಲೆ, ಕ್ಲೆ ಮಾಡಲಿಂಗ್ ಹೀಗೆ ವಿವಿಧ ವಿಭಾಗಗಳಲ್ಲಿ ಭಾಗವಹಿಸುವ ಮಕ್ಕಳಿಗಾಗಿ ಮಕ್ಕಳ ಹಬ್ಬ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ.

ಧಾರವಾಡ ಜಿಲ್ಲೆಯ ಎಲ್ಲ ತಾಲೂಕಿನ ಸಂಗೀತ, ಕಾವ್ಯ, ನಾಟಕ ಪ್ರದರ್ಶನ, ಜನಪದ ನೃತ್ಯ, ಕ್ರೀಡೆ, ಚಿತ್ರಕಲೆ, ಕ್ಲೆ ಮಾಡಲಿಂಗ್ ಹೀಗೆ ವಿವಿಧ ವಿಭಾಗಗಳಲ್ಲಿ ಪರಿಣತಿಯನ್ನು ಹೊಂದಿರುವ ಪ್ರತಿಭಾನ್ವಿತ ಆಸಕ್ತ ಮಕ್ಕಳು ಹಾಗೂ ಕಲಾ ತಂಡಗಳು ತಮ್ಮ ಹೆಸರನ್ನು ಮಾರ್ಚ್ 02, 2024 ರೊಳಗಾಗಿ ಖುದ್ದಾಗಿ ಬಂದು ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಧಾರವಾಡ ಇವರ ಕಚೇರಿಯಲ್ಲಿ ನೊಂದಾಯಿಸಿಕೊಳ್ಳಬಹುದಾಗಿದೆ.

ನೊಂದಣಿಗೆ ಆಧಾರ ಕಾರ್ಡ ಹಾಗೂ ಜನ್ಮ ದಾಖಲೆಯನ್ನು ತರಬೇಕು. ಕೊನೆಯ ದಿನಾಂಕದ ನಂತರ ಬರುವ ಅಭ್ಯರ್ಥಿಗಳಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜನಾರ್ಧನ ರೆಡ್ಡಿ ಮನವೊಲಿಸುವಲ್ಲಿ ಸಿಎಂ–ಡಿಸಿಎಂ ಸಕ್ಸಸ್

ಬೆಂಗಳೂರು: ರಾಜ್ಯದಲ್ಲಿ ನಡೆಯಲಿರುವ ರಾಜ್ಯಸಭಾ ಚುನಾವಣೆಗೆ ಕೌಂಟ್‌ಡೌನ್ ಶುರುವಾಗಿದೆ. ಲೋಕಸಭಾ ಚುನಾವಣೆಗೂ ಮುನ್ನ ಬಿಜೆಪಿ ಜೆಡಿಎಸ್ ಮೈತ್ರಿ ವರ್ಕೌಟ್ ಆಗುತ್ತಾ ಅಥವಾ ಆಡಳಿತಾರೂಢ ಕಾಂಗ್ರೆಸ್ ದೋಸ್ತಿಗಳನ್ನು ಕೆಡವಿ ಹಾಕುತ್ತಾ ಅನ್ನೋ ಕುತೂಹಲ ಸೃಷ್ಟಿಯಾಗಿದೆ.



ಒಂದೆಡೆ ಸ್ವತಂತ್ರ ಶಾಸಕರ ಮತವನ್ನು ಪಡೆಯಲು ಬಿಜೆಪಿ–ಜೆಡಿ–ಎಸ್ ದೋಸ್ತಿಗಳು ಹವಣಿಸುತ್ತಿರುವ ಮಧ್ಯೆಯೇ ಸ್ವತಂತ್ರ ಶಾಸಕ ಜನಾರ್ಧನ ರೆಡ್ಡಿ ಮತ ಪಡೆಯಲು ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಕಸರತ್ತು ನಡೆಸಿದ್ದಾರೆ. ಶಾಸಕ ಜನಾರ್ಧನ ರೆಡ್ಡಿಯನ್ನು ಕಾವೇರಿ ನಿವಾಸದಲ್ಲಿ ಕರೆಸಿಕೊಂಡು ಸಿಎಂ–ಡಿಸಿ–ಎಂ ಮಾತುಕತೆ ನಡೆಸಿದ್ದು, ಮಾತುಕತೆ ವೇಳೆ ಸಚಿವ ಶಿವರಾಜ್ ತಂಗಡಗಿ ಕೂಡ ಉಪಸ್ಥಿತಿರಿದ್ದರು.

ಈ ವೇಳೆ ಕೆಆರ್‌ಪಿಪಿ ಪಕ್ಷದ ಶಾಸಕ ಜನಾರ್ಧನ ರೆಡ್ಡಿ ಜೊತೆ ಕಾಂಗ್ರೆಸ್ ಅಭ್ಯರ್ಥಿಗಳ ಪರ ಮತ ಹಾಕುವಂತೆ ಸಿಎಂ–ಡಿಸಿಎಂ ಮನವಿ ಮಾಡಿದ್ದು, ಕಾಂಗ್ರೆಸ್ ಮೂರನೇ ಅಭ್ಯರ್ಥಿಗೆ ಮತ ಚಲಾಯಿಸುವಂತೆ ವಿನಂತಿ ಮಾಡಿದ್ದಾರೆ. ಈ ವೇಳೆ ಜನಾರ್ದನ ರೆಡ್ಡಿ ಕೂಡ ಕಾಂಗ್ರೆಸ್‌ಗೆ ಮತ ಚಲಾಯಿಸುವ ಬಗ್ಗೆ ಭರವಸೆ ನೀಡಿದ್ದಾರೆ. ಇತ್ತೀಚೆಗಷ್ಟೇ ಬಜೆಟ್‌ನಲ್ಲಿ ಅಂಜನಾದ್ರಿಗೆ ಅನುದಾನ ನೀಡಿದ್ದಕ್ಕೆ ಸಿಎಂ ಸಿದ್ದರಾಮಯ್ಯ ಅವರನ್ನು ಜನಾರ್ಧನ ರೆಡ್ಡಿ ಶ್ಲಾಘಿ–ಸಿದ್ದನ್ನು ಸ್ಮರಿಸಿಕೊಳ್ಳಬಹುದು.

ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾದ ಬಳಿಕ ವಿಧಾನಸೌಧದಲ್ಲಿ ಸುದ್ದಿಗಾರರ ಜೊತೆ ಮಾತನಾಡಿದ ಕೆಆ–ರ್‌ಪಿಪಿ ಪಕ್ಷದ ಶಾಸಕ ಜನಾರ್ಧನ ರೆಡ್ಡಿ, ಐತಿಹಾಸಿಕ ಆನೆಗೊಂದಿ ಉತ್ಸವವನ್ನ ವೈಭವದಿಂದ ಆಚರಿಸಲು ಜಿಲ್ಲಾಡಳಿತ ನಿರ್ಧಾರ ಮಾಡಿದೆ. ಮಾರ್ಚ್ ತಿಂಗಳಲ್ಲಿ ಈ ಉತ್ಸವವನ್ನು ವೈಭವದಿಂದ ಆಚ–'ರಿಸಲಾಗುತ್ತೆ. ಈ ಸಂಬಂಧ ಸಿಎಂ ಹಾಗೂ ಡಿಸಿಎಂಗೆ ಆಹ್ವಾನ ನೀಡಲು ಹೋಗಿದ್ದೆ. ರಾಜ್ಯಸಭಾ ಚುನಾವಣೆಗೆ ಎಲ್ಲರೂ ಮನವಿ ಮಾಡಿದ್ದಾರೆ, ಸಿಎಂ, ಡಿಸಿಎಂ ಆದಿಯಾಗಿ ಎಲ್ಲ ಪಕ್ಷದವ್ರು ಮನವಿ ಮಾಡಿದ್ದಾರೆ. ಆದ–'ರೆ ನಾನು ಇನ್ನು ಏನೂ ತೀರ್ಮಾನ ಮಾಡಿಲ್ಲ ಎಂದು ಹೇಳಿ ಕುತೂಹಲ ಮೂಡಿಸಿದರು.

ನಾಳಿನ ರಾಜ್ಯಸಭಾ ಚುನಾವಣೆ ದೋಸ್ತಿಗಳ ಪಾಲಿಗೆ ನಂಬರ್‌ಗೇಮ್ ಲೆಕ್ಕಾಚಾರವಾಗಿದ್ದು, ರಾಜ್ಯ ವಿಧಾನಸಭೆಯಲ್ಲಿನ ಸಂಖ್ಯಾಬಲದ ಪ್ರಕಾರ ಜೆಡಿಎಸ್ ಕೇವಲ 19 ಶಾಸಕರನ್ನು ಇಟ್ಟುಕೊಂಡು ತನ್ನ ಅಭ್ಯರ್ಥಿ ಕುಪೇಂದ್ರ ರೆಡ್ಡಿಯನ್ನು 45 ಮತಗಳಿಂದ ಗೆಲ್ಲಿಸಬೇಕಿದೆ. ಇದಕ್ಕಾಗಿ ದೋಸ್ತಿ ಪಕ್ಷ ಬಿಜೆಪಿಯಿಂದ 21 ಮತಗಳನ್ನು ಪಡೆಯಬಹುದಷ್ಟೇ. ಆ ಮೂಲಕ ಮೈತ್ರಿಯಿಂದ 40 ಮತಗಳು ಸಿಗುತ್ತವೆ. ಆದರೆ ಮ್ಯಾಜಿಕ್ ನಂಬರ್ ತಲುಪಲು 45 ಮತಗಳು ಬೇಕಿದೆ. ಇದಕ್ಕಾಗಿ ಬಿಜೆಪಿ ಮತ್ತು ಜೆಡಿಎಸ್ ನಾಲ್ಕು ಸ್ವತಂತ್ರ ಶಾಸಕರ ಮತಗಳು ಮತ್ತು ಕಾಂಗ್ರೆಸ್ ಶಾಸಕರನ್ನು ಸೆಳೆದು ಅಡ್ಡ ಮತದಾನ ಹಾಕಿಸಲು ಇನ್ನಿಲ್ಲ ಪ್ರಯತ್ನ ಮಾಡುತ್ತಿದೆ.

ದೋಸ್ತಿ ನಾಯಕರಿಗೆ ಅತೃಪ್ತ ಶಾಸಕರ ಟೆನ್ಷನ್..! ಇನ್ನು ನಾಳಿನ ರಾಜ್ಯಸಭಾ ಚುನಾವಣೆಯಲ್ಲಿ ಶಾಸಕ ಎಸ್ ಟಿ ಸೋಮಶೇಖರ್, ಶಿವರಾಮ್ ಹೆಬ್ಬಾರ್ ಅಡ್ಡ ಮತದಾನ ಮಾಡುವ ಆತಂಕ ಬಿಜೆಪಿ ಮತ್ತು ಜೆಡಿಎಸ್ ಶಾಸಕ–ರಿಗೆ ಎದುರಾಗಿದ್ದು, ಈಗಾಗಲೇ ಬಿಜೆಪಿಯಿಂದ ಒಂದು ಹೆಜ್ಜೆ ಹಿಂದೆ ಇಟ್ಟಿರುವ ಈ ಇಬ್ಬರು ಅತೃಪ್ತ ಶಾಸಕರು, ನಾಳಿನ ಚುನಾವಣೆಯಲ್ಲಿ ಸ್ವಪಕ್ಷ ಶಾಸಕರಿಂದಲೇ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತದಾನ ಮಾಡುವ ಭಯ ದೋಸ್ತಿಗಳಿಗೆ ಎದುರಾಗಿದೆ. ಹೀಗಾಗಿ ಆ ಇಬ್ಬರು ಶಾಸಕರನ್ನು ನಾಳೆಯವರೆಗೂ ಹಿಡಿದಿಟ್ಟುಕೊಂಡು ಮೈತ್ರಿ ಅಭ್ಯರ್ಥಿಗಳ ಪರ ಮತ ಹಾಕಿಸಲು ದೋಸ್ತಿ ನಾಯಕರು ಕಾರ್ಯತಂತ್ರ ರೂಪಿಸಲಿದ್ದಾರೆ.

ಇನ್ನು ನಾಳೆ ರಾಜ್ಯಸಭೆ ಚುನಾವಣೆ ನಡೆಯಲಿರುವ ಹಿನ್ನೆಲೆಯಲ್ಲಿ ಬಿಜೆಪಿ ಶಾಸಕರಿಗೆ ನಾಳೆ ವಿಪ್ ಜಾರಿ ಮಾಡುವ ಸಾಧ್ಯತೆ ಇದ್ದು, ಬಿಜೆಪಿಯ ಮುಖ್ಯ ಸಚೇತಕ ದೊಡ್ಡನಗೌಡ ಪಾಟೀಲ್ ಅವರು ಮೈತ್ರಿ ಅಭ್ಯರ್ಥಿಗಳ ಪರ ಕಡ್ಡಾಯ ಮತದಾನ ಮಾಡುವಂತೆ ವಿಪ್ ಜಾರಿ ಮಾಡುವ ಸಾಧ್ಯತೆ ಇದೆ.

# ಕುಡಿಯುವ ನೀರು, ಜಾನುವಾರು ಮೇವು ಪೂರೈಕೆಗೆ ಮೊದಲ ಆದ್ಯತೆ; ಅನುದಾನದ ಕೊರತೆ ಇಲ್ಲ; ಜನರ ಬೇಡಿಕೆಗೆ ಅನುಗುಣವಾಗಿ ಕೆಲಸ ಮಾಡಿ:ಜಿಲ್ಲಾಧಿಕಾರಿ ದಿವ್ಯ ಪ್ರಭು

ಧಾರವಾಡ: ಬರಗಾಲದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಜನರಿಗೆ ಕುಡಿಯುವ ನೀರು, ಮೇವು ಕೊರತೆ ಆಗದಂತೆ ಮೊದಲ ಆದ್ಯತೆ ನೀಡಿ, ಯಾವುದಕ್ಕೂ ಕೊರತೆ ಇಲ್ಲ. ಜನರ ಬೇಡಿಕೆಗೆ ಅನುಗುಣವಾಗಿ ಕೆಲಸ ಮಾಡಿ. ಜನಪ್ರತಿನಿಧಿಗಳ ಗಮನಕ್ಕೂ ತನ್ನಿ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.



ಅವರು ಇಂದು ಬೆಳಿಗ್ಗೆ ಬರ ಪರಿಸ್ಥಿತಿ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ, ಮಾತನಾಡಿದರು.

ಪ್ರತಿ ವಾರ ತಹಶೀಲ್ದಾರರು ತಾಲೂಕು ಟಾಸ್ಕ್ ಫೇರ್ಸ್ ಸಮಿತಿ ಸಭೆ ನಡಿಸಿ, ತಾಲೂಕಿನ ಬರ ಪರಿಸ್ಥಿತಿ, ನೀರು, ಮೇವು ಪೂರೈಕೆ, ನರೇಗಾ ಉದ್ಯೋಗ ನೀಡಿಕೆ ಕುರಿತು ಚರ್ಚಿಸಿ, ಕ್ರಮವಹಿಸಬೇಕು ಎಂದರು.

ಜಿಲ್ಲೆಯಲ್ಲಿ ಲಭ್ಯವಿರುವ ನೀರನ್ನು ಸೋರಿಕೆ, ಅಪವ್ಯಯವಾಗದಂತೆ ತಡೆದು, ಸಮರ್ಪಕವಾಗಿ ಬಳಕೆ ಮಾಡುವಂತೆ ಗಮನಿಸಬೇಕು. ಸಾರ್ವಜನಿಕರಿಗೆ ಶುದ್ದವಾದ ಕುಡಿಯುವ ನೀರು ಪೂರೈಕೆ ಬಗ್ಗೆ ಖಾತ್ರಿ ಮಾಡಿಕೊಳ್ಳಬೇಕು. ಬಹುತೇಕ ಕಡೆಗಳಲ್ಲಿ ಹಳೆ ಪೈಪಲೈನ ಇರುವುದ–ರಿಂದ ಪೈಪಗಳಲ್ಲಿ ಸೋರಿಕೆ ಆಗಿ, ನೀರು ಕಲ್ಮಷವಾಗುವ ಸಾಧ್ಯತೆ ಇರುತ್ತದೆ. ನೀರು ಕಲ್ಮಷವಾಗುವ ಬಗ್ಗೆ ಎಚ್ಚರಿಕೆವಹಿಸಬೇಕು. ಕ್ಲೋರಿನೇಶನ್ ಸರಿಯಾಗಿ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲೆಯಲ್ಲಿ ನಗರ, ಗ್ರಾಮಗಳಲ್ಲಿ ನೀರಿನ ಸಮಸ್ಯೆ ಆಗದಂತೆ ಮುಂಜಾಗೃತೆ ವಹಿಸಿ: ಜಿಲ್ಲೆಯಲ್ಲಿ ಒಟ್ಟು 8 ತಾಲೂಕುಗಳ ಪೈಕಿ 395 ವಸತಿಯುತ ಗ್ರಾಮಗಳಿವೆ. ಈ ಪೈಕಿ ಮೇ ಅಂತ್ಯದವರೆಗೆ ಸುಮಾರು 153 ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಕಾಣುವ ಲಕ್ಷಣಗಳಿವೆ. ಈ ಪೈಕಿ ಅಳ್ನಾವರ ತಾಲೂಕಿನ 2, ಕುಂದಗೋಳ ತಾಲೂಕಿನ 15, ಅಣ್ಣಿಗೇರಿ ತಾಲೂಕಿನ 1, ಹುಬ್ಬಳ್ಳಿ ತಾಲೂಕಿನ 17, ಧಾರವಾಡ ತಾಲೂಕಿನ 37 ಮತ್ತು ಕಲಘಟಗಿ ತಾಲೂಕಿನ 81 ಗ್ರಾಮಗಳು ಸೇರಿವೆ.


ಈಗಾಗಲೇ ಎಲ್ಲ ತಾಲೂಕಿನ ತಹಶೀಲ್ದಾರರು ಮತ್ತು ಟಾಸ್ಕ್ ಪೋರ್ಸ್ ಸಮಿತಿ ಸದಸ್ಯರು ಮುಂದಿನ ಮೂರು ತಿಂಗಳವರೆಗೆ ಜಿಲ್ಲೆಯಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಮುಂಜಾಗೃತೆ ಕ್ರಮ ಕೈಗೊಂಡಿದ್ದಾರೆ. ನಗರ ಮತ್ತು ಗ್ರಾಮಗಳ ವ್ಯಾಪ್ತಿಯಲ್ಲಿರುವ ಸರ್ಕಾರಿ ಬೋರ್ವೆಲ್ಲಗಳನ್ನು ಸುಸ್ಥಿತಿಯಲ್ಲಿಡಲು ಕ್ರಮ ವಹಿಸಿದ್ದಾರೆ. ಅಗತ್ಯವಿದ್ದಲ್ಲಿ ಕುಡಿಯುವ ನೀರು ಸರಬರಾಜು ಮಾಡಲು ವಿವಿಧ ನಗರ ಮತ್ತು ಗ್ರಾಮಗಳಲ್ಲಿ ಸುಮಾರು 301 ಖಾಸಗಿ ಕೊಳವೆಬಾವಿಗಳನ್ನು ಗುರುತಿಸಿ, ಮಾಲೀಕರೊಂದಿಗೆ ಚರ್ಚಿಸಿದ್ದಾರೆ. ಮತ್ತು ಈ ಪೈಕಿ 139 ಕೊಳವೆಬಾವಿ ಮಾಲೀಕರಿಂದ ನೀರು ಖರಿದಿಸಲು ಒಪ್ಪಿಗೆ ಪತ್ರ ಪಡೆದಿದ್ದಾರೆ. ಹಾಗೂ ಶೀಘ್ರದಲ್ಲಿ ಇನ್ನು 162 ಕೊಳವೆಬಾವಿ ಮಾಲೀಕರಿಂದ ಒಪ್ಪಿಗೆ ಪತ್ರ ಪಡೆಯಲು ಕ್ರಮವಹಿಸಿದ್ದಾರೆ. ಕುಂದಗೋಳ ತಾಲೂಕಿನ ಶಿರೂರ, ಕೋಡ್ಲಿವಾಡ ಹಾಗೂ ಹಳೆ ಹಂಚನಾಳ ಸೇರಿ ಈ ಮೂರು ಗ್ರಾಮಗಳಲ್ಲಿ ಕೋಳವೆಬಾವಿಗಳು ಲಭ್ಯವಿಲ್ಲ. ತಾಲೂಕಾ ಟಾಸ್ಕೋರ್ಸ್ ಸಮಿತಿ ತೀರ್ಮಾನದಂತೆ ಟ್ಯಾಂಕರ್ ಮೂಲಕ ಅಥವಾ ಪೈಪಲೈನ ಮೂಲಕ ಕುಡಿಯುವ ನೀರಿನ ವ್ಯವಸ್ಥೆ ಕಲಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

*ಜಾನುವಾರು ಮೇವು ದಾಸ್ತಾನು;* ಜಿಲ್ಲೆಯಲ್ಲಿ ಜಾನುವಾರುಗಳಿಗೆ ಮುಂದಿನ 13 ವಾರುಗಳಿಗೆ ಸಾಕಾಗುವಷ್ಟು ಅಂದರೆ 1,38,492 ಟನ್ ಮೇವು ದಾಸ್ತಾನು ಲಭ್ಯವಿದೆ. ಶೆರೆವಾಡ, ಶಿರಗುಪ್ಪಿ ಮತ್ತು ಹುಬ್ಬಳ್ಳಿ ಎಪಿಎಂಸಿಯಲ್ಲಿ ಮೇವು ಬ್ಯಾಂಕ್ ಆರಂಭಿಸಲು ಕ್ರಮ ವಹಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

*ಅಪೂರ್ಣಗೊಂಡಿರುವ ಲೇಔಟ್ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ:* ಅನುಮತಿ ಪಡೆದು ಲೇಔಟ್ ಮಾಡುವ ಮಾಲೀಕರು ಸರಿಯಾದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸದೇ ಪ್ಲಾಟ್ಗಳನ್ನು ಮಾರಾಟ ಮಾಡುತ್ತಾರೆ ಇದರಿಂದ ಸಾರ್ವಜನಿಕರಿಗೆ ತೊಂದರೆ ಆಗುತ್ತದೆ. ಮುಖ್ಯಾಧಿಕಾ–ರಿಗಳು ಅಥವಾ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ತಮ್ಮ ವ್ಯಾಪ್ತಿಯಲ್ಲಿ ಅಪೂರ್ಣಗೊಂಡಿರುವ ಲೇಔಟ್ಗಳನ್ನು ಪರಿಶೀಲಿಸಿ ಮುಂದಿನ 2 ದಿನಗಳಲ್ಲಿ ವರದಿ ಸಲ್ಲಿಸಬೇಕು. ಮತ್ತು ಅಂತಹ ಮಾಲೀಕರಿಗೆ ನೋಟಿಸ್ ಜಾರಿ ಮಾಡಿ, ಕಾಲಮಿತಿಯಲ್ಲಿ ತಕ್ಷಣ ಲೇಔಟ್ ಜನ–ರಿಗೆ ಕುಡಿಯುವ ನೀರು, ವಿದ್ಯುತ್, ಚರಂಡಿ ವ್ಯವಸ್ಥೆಯನ್ನು ಕಲ್ಪಿಸುವಂತೆ ಕ್ರಮ ವಹಿಸಬೇಕು. ನೋಟಿಸ್ದಲ್ಲಿನ ನಿರ್ದೇಶನಗಳನ್ನು ಪಾಲಿಸದ ಲೇಔಟ್ ಖಾತಾ ರದ್ದುಗೊಳ್ಳಿಸಿ, ನೀಡಿದ ಅನುಮತಿಯನ್ನು ಹಿಂಪಡೆಯಬೇಕೆಂದು ಜಿಲ್ಲಾಧಿಕಾ–ರಿಗಳು ಅಧಿಕಾರಿಗಳಿಗೆ ಸೂಚಿಸಿದರು.

ಮುಂದಿನ ದಿನಗಳಲ್ಲಿ ಮಾರ್ಗ ಸೂಚಿಗಳನ್ವಯ ಲೇಔಟ್ ನಿರ್ಮಿಸದಿದಲ್ಲಿ ಅನುಮತಿ ನೀಡಿದ ಅಧಿಕಾರಿಯನ್ನು ಹೊಣೆಗಾರರನ್ನಾಗಿಸಿ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿಗಳು ಎಚ್ಚರಿಸಿದರು.

## ಟೈರ್ ಸ್ಪೋಟಗೊಂಡು ಬೊಲೇರೊ ಪಲ್ಟಿ: ಮೂವರು ದಾರುಣ ಸಾವು



ದಾವಣಗೆರೆ: ರಾಷ್ಟ್ರೀಯ ಹೆದ್ದಾರಿಯಲ್ಲಿ ಬೊಲೇರೊ ಟೆಂಪೊ ವಾಹನ ಹೋಗುತ್ತಿದ್ದಾಗ ಏಕಾಏಕಿ ಟೈರ್ ಸ್ಪೋಟಗೊಂಡು ವಾಹನ ಪಲ್ಟಿಯಾದ ಪರಿಣಾಮ ಮೂವರು ಸ್ಥಳದಲ್ಲೇ ಮೃತಪಟ್ಟಿರುವ ಘಟನೆ ನಗರದ ಹೊರವಲಯದ ಬಳಿ ತಡರಾತ್ರಿ ಸಂಭವಿಸಿದೆ.

## ರೌಡಿ ಶೀಟರ್ ಸೈನೆಡ್ ಜಾವೆದ್ ಬಂಧನ



ಮೈಸೂರು: ನಗರದಲ್ಲಿ ಸಿಸಿಬಿ ಪೊಲೀಸರು ಕಾರ್ಯಾಚರಣೆ ನಡೆಸಿ ಮಾರಕಾಸ್ತ್ರಗಳ ಸಮೇತ ರೌಡಿ ಶೀಟರ್ ಒಬ್ಬನನ್ನು ಬಂಧಿಸಿದ್ದಾರೆ. ಬೆಂಗಳೂರು ಹಾಗೂ ಮೈಸೂರು ನಗರದಲ್ಲಿ ಕ್ರಿಮಿನಲ್ ಪ್ರಕರಣಗಳಲ್ಲಿ ಭಾಗಿಯಾಗಿ ಲಷ್ಕರ್ ಪೊಲೀಸ್ ಠಾಣೆಯಲ್ಲಿ ರೌಡಿಶೀಟರ್ ಪಟ್ಟಿಯಲ್ಲಿರುವ ಜಾವೆದ್ ಖಾನ್ ಅಲಿಯಾಸ್ ಸೈನೆಡ್ ಜಾವೆದ್ (42) ಬಂತ ರೌಡಿ ಶೀಟರ್.

ಈತನ ಮೇಲೆ ಈಗಾಗಲೇ ಹಲವು ಪ್ರಕರಣಗಳಿದ್ದರೂ ಮತ್ತೊಂದು ಕೃತ್ಯಕ್ಕೆ ಸಂಚು ಹಾಕುತ್ತಿದ್ದ ವೇಳೆ ಸಿಸಿಬಿ ಪೊಲೀಸರು ದಾಳಿ ಮಾಡಿ ಸೆರೆ ಹಿಡಿದರು. ಸಿಕ್ಕಿಬಿದ್ದ ವೇಳೆ ಜಾವೆದ್ ಖಾನ್ ಬಳಿ ವಿವಿಧ ನಮೂನೆಯ ಮೂರು ಡ್ರಾಗರ್ಗಳು ದೊರೆತಿದೆ. ನಂಬರ್ ಪ್ಲೇಟ್ ಇಲ್ಲದ ಸುಜುಕಿ ಆಕ್ಸಿಸ್ನಲ್ಲಿ ಡ್ರಾಗರ್ಗಳನ್ನು ಇಟ್ಟುಕೊಂಡಿದ್ದ ವೇಳೆ ರೆಡ್ ಹ್ಯಾಂಡಾಗಿ ಸಿಸಿಬಿ ಪೊಲೀಸರ ಕೈಗೆ ಸಿಕ್ಕಿಬಿದ್ದಿದ್ದಾನೆ. ಠಾಣೆಗೆ ಕರೆಸಿ ಎಚ್ಚರಿಕೆ ಕೊಡುವ ಬದಲು ರೌಡಿಶೀಟರ್ಗಳು ಇರುವ ಸ್ಥಳವನ್ನೇ ಹುಡುಕಿಕೊಂಡು ಹೋಗಿ ಪರಿಶೀಲನೆ ಮಾಡುವ ಜವಾಬ್ದಾರಿಯನ್ನು ಸಿಸಿಬಿ ಪೊಲೀಸರಿಗೆ ನೀಡಲಾಗಿದೆ. ಫೆ.23 ರ ರಾತ್ರಿ ಎನ್.ಆರ್.ಪೊಲೀಸ್ ಠಾಣಾ ವ್ಯಾಪ್ತಿಯ ಉನ್ನತಿ ನಗರದಲ್ಲಿ ಇನ್ಸ್ಪೆಕ್ಟರ್ ಪೂವಯ್ಯ ಮತ್ತು ಟೀಂ ರೌಂಡ್ಸ್ ಮಾಡುತ್ತಿದ್ದ ವೇಳೆ ಜಾವೆದ್ ಖಾನ್ ಮಾರಕಾಸ್ತ್ರಗಳ ಸಮೇತ ಸಿಕ್ಕಿ ಬಿದ್ದಿದ್ದಾನೆ.

## ರೈತರ ಮಕ್ಕಳಿಂದ ತೋಟಗಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಧಾರವಾಡ ಜಿಲ್ಲೆಯ ರೈತ ಮಕ್ಕಳಿಗಾಗಿ 2024–25 ನೇ ಸಾಲಿಗೆ, 10 ತಿಂಗಳ ಅವಧಿಯ (ಮೇ 02, 2024 ರಿಂದ ಮೇ 28, 2025 ರವರೆಗೆ) ಗದಗ ತೋಟಗಾರಿಕೆ ತರಬೇತಿ ಕೇಂದ್ರದಲ್ಲಿ ಮಹಿಳಾ–05 ಹಾಗೂ ಪುರುಷ–10 ಒಟ್ಟು– 15 ಅಭ್ಯರ್ಥಿಗಳಿಂದ ತೋಟಗಾರಿಕೆ ತರಬೇತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಅರ್ಜಿಗಳನ್ನು, ತೋಟಗಾರಿಕೆ ಉಪ ನಿರ್ದೇಶಕರು, ಜಿಲ್ಲಾ ಪಂಚಾಯತ ಧಾರವಾಡ ಕಛೇರಿಯಲ್ಲಿ ಸಲ್ಲಿಸಬೇಕು. ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 30 ಮತ್ತು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ರೂ.15 ಮೌಲ್ಯದ ಇಂಡಿಂ–ಯನ್ ಪೋಸ್ಟಲ್ ಆರ್ಡರ್ (ಐಪಿಓ) ಅಥವಾ ಬ್ಯಾಂಕ್ ಡಿಮ್ಯಾಂಡ್ ಡ್ರಾಫ್ಟ್ನ್ನು ತೋಟಗಾ–ರಿಕೆ ಉಪ ನಿರ್ದೇಶಕರು (ಜಿಪಂ) ಧಾರವಾಡ ಅವರ ಹೆಸರಿನಲ್ಲಿ ಪಡೆದು, ಅರ್ಜಿ ಜೊತೆಗೆ ಅರ್ಜಿ ಶುಲ್ಕದ ಬಾಬತ್ತು ಲಗತ್ತಿಸಬೇಕು. ಅರ್ಜಿ ಫಾರಂಗಳನ್ನು ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಸ್ಟೇಷನ್ ರಸ್ತೆ, ಧಾರವಾಡ ಅವರ ಕಛೇ–ರಿಯಲ್ಲಿ ಅಥವಾ ಇಲಾಖಾ ವೆಬ್ಸೈಟ್ https://horticulturedir.karnataka.gov.in ನಲ್ಲಿ ಮಾರ್ಚ 1 ರಿಂದ 30, 2024 ರವರೆಗೆ ಡೌನ್ಲೋಡ್ ಮಾಡಿಕೊಳ್ಳಬಹುದು. ಭರ್ತಿ ಮಾಡಿದ ಅರ್ಜಿ ಪೂರ್ಣ ಪ್ರಮಾಣದ ದಾಖಲಾತಿಗಳೊಂದಿಗೆ ಎಪ್ರೀಲ್ 1, 2024 ರ ಸಂಜೆ 5:30 ಗಂಟೆಯೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯವಲಯ) ಧಾರವಾಡ ಕಛೇರಿ ಅಥ–'ವಾ ದೂರವಾಣಿ: 0836–2957801 ಯನ್ನು ಸಂಪರ್ಕಿಸಬಹುದಾಗಿದೆ ಎಂದು ತೋಟಗಾ–ರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫೆ.28 ರಂದು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಕುಂದು ಕೊರತೆ ಸಭೆ

ಧಾರವಾಡ: ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರ ಕುಂದು ಕೊರತೆ ಸಭೆಯನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರ ಅಧ್ಯಕ್ಷತೆಯಲ್ಲಿ ಫೆಬ್ರವರಿ 28 ರಂದು ಮದ್ಯಾಹ್ನ 3 ಗಂಟೆಗೆ ಧಾರವಾಡ ಜಿಲ್ಲಾ ಪೊಲೀಸ್ ಕಾರ್ಯಾಲಯದ ಸಭಾಭವನದಲ್ಲಿ ಆಯೋಜಿಲಸಾಗಿದೆ.

ಜಿಲ್ಲೆಯ ಎಲ್ಲ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮುಖಂಡರು ಈ ಸಭೆಗೆ ಹಾಜರಾಗಿ, ಸದುಪಯೋಗ ಪಡೆದುಕೊಳ್ಳಬೇಕೆಂದು ಜಿಲ್ಲಾ ಪೊಲೀಸ್ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹೃದಯಾಘಾತದಿಂದ ಕೆಎಎಸ್ ಅಧಿಕಾರಿ ಭರತ ಕಟ್ಟಿ ನಿಧನ



ಬೆಳಗಾವಿ: ಚಿಕ್ಕೋಡಿ ತಾಲೂಕಿನ ಜುಗಳ ಗ್ರಾಮದರಾದ ಭರತ ಕಟ್ಟಿ (52) ಅವರು ಹೃದಯಾಘಾತದಿಂದ ಭಾನುವಾರ ನಿಧನರಾಗಿದ್ದಾರೆ.

ಬೆಳಗಾವಿ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಹಣಕಾಸು ಅಧಿಕಾರಿಗಳಾಗಿ ಕಾರ್ಯ ಕಾರ್ಯನಿರ್ವಸುತ್ತಿದ್ದ, ಭರತ ಕಟ್ಟಿ ಅವರು (ಕೆಎಎಸ್) ಮನೆಯಲ್ಲಿ ಹೃದಯಾಘಾತದಿಂದ ಇಂದು ಕೊನೆಯುಸಿರೆಳಿದ್ದಾರೆ. ಮೃತರು ಪತ್ನಿ, ಪುತ್ರ ಹಾಗೂ ಅಪಾರ ಬಂಧು –ಬಳಗದವರನ್ನು ಅಗಲಿದ್ದಾರೆ. ಮೃತರ ಆತ್ಮಕ್ಕೆ ಶಾಂತಿ ಸಿಗಲಿ, ಭಗವಂತ ಅವರ ಕುಟುಂಬದವರಿಗೆ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಮಾನ್ಯ ಕುಲಪತಿಗಳು, ಕುಲಸಚಿವರು, ಕುಲಸಚಿವರು ( ಮೌಲ್ಯಮಾಪನ) ಹಣ–ಕಾಸು ಅಧಿಕಾರಿಗಳು( ಪ್ರಭಾರಿ), ಎಲ್ಲಾ ಅಧಿಕಾರಿ ವೃಂದದವರು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗಳು ಸತಾಂಪ ಸೂಚಿಸಿದ್ದಾರೆ.

**ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ**
**"ಜ್ಞಾನ ಸಂಗಮ", ಬೆಳಗಾವಿ–590018, ಕರ್ನಾಟಕ, ಭಾರತ**

ಕ್ರಮ ಸಂಖ್ಯೆ: ವಿ.ತಾ.ವಿ./ಬೆ/ಸ್ಥಾ.ಅ./2023–24/ಐ.ಎಫ್.ಟಿ.ನಂ.62/6498 ದಿನಾಂಕ:24 FEB 2024

**ಅಲ್ಪಾವಧಿ ಟೆಂಡರ ಪ್ರಕಟಣೆ**

ಕುಲಸಚಿವರು, ವಿತಾವಿ, ಬೆಳಗಾವಿ ಇವರಿಂದ ಅರ್ಹ ಗುತ್ತಿಗೆದಾರರಿಂದ ಸ್ಟ್ಯಾಂಡರ್ಡ ಟೆಂಡರ ಡಾಕ್ಯುಮೆಂಟ್ಸ ಮೂಲಕ ಅಲ್ಪಾವಧಿ ಟೆಂಡರಗಳನ್ನು ಆಹ್ವಾನಿಸಲಾಗಿದೆ. ಕೆಲಸದ ಹೆಸರು:–1)ವಿತಾವಿ, "ಜ್ಞಾನ ಸಂಗಮ", ಬೆಳಗಾವಿ ಆವರಣದಲ್ಲಿ 2023–24ನೇ ಸಾಲಿನ 23ನೇ ವಾರ್ಷಿಕ ಘಟಿಕೋತ್ಸವ (ಭಾಗ–II) ನಿಮಿತ್ಯ ಉಪಹಾರ ಊಟೋಪಚಾರ ಹಾಗೂ ರಾತ್ರಿ ಊಟದ ಸೇವೆಗಳನ್ನು ಒದಗಿಸುವುದು ಮತ್ತು ಪೂರೈಸುವುದು ಮೊತ್ತ ರೂ.3,90,280/– (ಜಿ.ಎಸ್.ಟಿ.ರಹಿತ) ಮತ್ತು 2) ವಿತಾವಿ "ಜ್ಞಾನ ಸಂಗಮ", ಬೆಳಗಾವಿ ಆವರಣದಲ್ಲಿ 23ನೇ ವಾರ್ಷಿಕ ಘಟಿಕೋತ್ಸವದ (ಭಾಗ–II) ನಿಮಿತ್ಯ, ಊಟೋಪಚಾರದ ಪೆಂಡಾಲ, ಟೇಬಲ್, ಚೇರ್ಸ್, ಬ್ಯಾನರ್‌ಗಳನ್ನು ಬಾಡಿಗೆ ಆಧಾರದ ಮೇಲೆ ಅಳವಡಿಸುವ ಕಾಮಗಾರಿ ಮತ್ತು ಇನ್ನೂಳಿದ ಕಾರ್ಯ ನಿರ್ವಹಿಸುವುದು ಮೊತ್ತ ರೂ.4,18,690/– (ಜಿ.ಎಸ್.ಟಿ.ರಹಿತ), ಇತರೆ ಮಾಹಿತಿಗಳನ್ನು http//www.vtu.ac.in/tenders ವೆಬ್‌ಸೈಟ್ ಮೂಲಕ ದಿನಾಂಕ: 27–02–2024 ರಿಂದ ಪಡೆದುಕೊಳ್ಳಬಹುದು.

ಸಹಿ/– ಕುಲಸಚಿವರು,
ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ,ಬೆಳಗಾವಿ

DIPR/BGM/RO-NO-1230/KSMCA/2023-24

# ರಾಜಾ ವೆಂಕಟಪ್ಪ ನಾಯಕಗೆ ಉಭಯ ಸದನಗಳಲ್ಲಿ ಭಾವಪೂರ್ಣ ಶ್ರದ್ಧಾಂಜಲಿ

ಬೆಂಗಳೂರು: ವಿಧಾನಸಭೆ ಸದಸ್ಯರಾಗಿದ್ದ ರಾಜಾ ವೆಂಕಟಪ್ಪ ನಾಯಕ ಅವರ ನಿಧನಕ್ಕೆ ವಿಧಾನಸಭೆಯಲ್ಲಿಂದು ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಇಂದು ಬೆಳಿಗ್ಗೆ ಸದನ ಪ್ರಾರಂಭವಾದಾಗ ಸಭಾಧ್ಯಕ್ಷ ಯು.ಟಿ.ಖಾದರ್ ಅವರು ಶಾಸಕ ರಾಜಾ ವೆಂಕಟಪ್ಪ ನಾಯಕ ಅವರು ನಿನ್ನೆ ನಿಧನರಾಗಿರುವುದನ್ನು ಸದನಕ್ಕೆ ತಿಳಿಸಿ ಸಂತಾಪ ನಿರ್ಣಯವನ್ನು ಮಂಡಿಸಿದರು.



ರಾಜಾ ವೆಂಕಟಪ್ಪ ನಾಯಕ ಅವರು 1957 ರ ನವೆಂಬರ್ 23 ರಂದು ಯಾದಗಿರಿ ಜಿಲ್ಲೆಯ ಸುರಪುರದಲ್ಲಿ ಜನಿಸಿದ್ದರು. ವೃತ್ತಿಯಲ್ಲಿ ಕೃಷಿಕರಾಗಿದ್ದ ಅವರು, 1987 ರಲ್ಲಿ ಪೇಠ ಅಮ್ಮಾಪುರ ಮಂಡಲ ಪಂಚಾಯಿತಿಯ ಸದಸ್ಯರಾಗುವ ಮೂಲಕ ರಾಜಕೀಯ ಪ್ರವೇಶ ಮಾಡಿ ಅದೇ ಅವಧಿಯಲ್ಲಿ ಮಂಡಲ ಪ್ರಧಾನರಾಗಿ ಸೇವೆ ಸಲ್ಲಿಸುವ ಮೂಲಕ ಜನಾನುರಾಗಿಯಾಗಿದ್ದರು. 1994 ರಲ್ಲಿ ಮೊದಲ ಬಾರಿಗೆ ವಿಧಾನಸಭೆಗೆ ಚುನಾಯಿತರಾಗಿದ್ದ ಅವರು, 1999, 2013 ಹಾಗೂ 2023 ರಲ್ಲಿ ಹದಿನಾರನೇ ವಿಧಾನಸಭೆಗೆ ಆಯ್ಕೆಯಾಗಿ ಪ್ರಸ್ತುತ ಸದನದಲ್ಲಿ ಸದಸ್ಯರಾಗಿ ಸಕ್ರಿಯರಾಗಿದ್ದರು. ಇತ್ತೀಚೆಗೆ ಉಗ್ರಾಣ ನಿಗಮದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡು ಎಲ್ಲಾ ಸಮುದಾಯದ ವಿಶ್ವಾಸಕ್ಕೆ ಪಾತ್ರರಾಗಿದ್ದರು. ಸರಳ ಸಜ್ಜನಿಕೆಯ ನಾಯಕರಾಗಿದ್ದ ರಾಜಾ ವೆಂಕಟಪ್ಪ ನಾಯಕ ಅವರ ನಿಧನದಿಂದ ರಾಜ್ಯಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಹೇಳಿದರು.

ಪ್ರತಿಯೊಬ್ಬರ ಸಾವು ನಮಗೆಲ್ಲಾ ದೊಡ್ಡ ಮಟ್ಟದ ಸಂದೇಶವನ್ನು ನೀಡುತ್ತದೆ. ನಿನ್ನೆ ಮೊನ್ನೆಯವರೆಗೆ ನಮ್ಮೊಂದಿಗೆ ಇದ್ದವರು ನಿನ್ನೆ ನಿಧನರಾಗಿದ್ದಾರೆ. ದೇವರು ಎಷ್ಟು ವರ್ಷ ಆಯಸ್ಸು ಕೊಡುತ್ತಾನೋ ಅಷ್ಟು ದಿನ ನೆಮ್ಮದಿ ಜೀವನ ನಡೆಸಬೇಕು, ಇನ್ನೊಬ್ಬರ ನೆಮ್ಮದಿಗೂ ಸಹಕರಿಸಬೇಕು. ದ್ವೇಷ, ಕೋಪ, ಸಣ್ಣಪುಟ್ಟ ವಿಚಾರಕ್ಕೆ ತೊಂದರೆ ಕೊಡುವುದರಿಂದ ಮುಂದೆ ಪಶ್ಚಾತ್ತಾಪ ಪಡಬೇಕಾಗಬಹುದು. ದ್ವೇಷರಹಿತ, ಅಸೂಯೆ ರಹಿತ ಜೀವನ ನಡೆಸುವಂತಾಗಲಿ ಎಂದು ಹೇಳಿ ರಾಜಾ ವೆಂಕಟಪ್ಪ ನಾಯಕ ಅವರ ನಿಧನ ಅತ್ಯಂತ ನೋವು ತಂದಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಸಂತಾಪ ಸೂಚನಾ ನಿರ್ಣಯವನ್ನು ಬೆಂಬಲಿಸಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಸುರಪುರದ ಶಾಸಕರಾಗಿದ್ದ ರಾಜಾ ವೆಂಕಟಪ್ಪ ನಾಯಕ ನಿಧನರಾಗಿದ್ದಾರೆ. ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಅವರನ್ನು ನೋಡಲು ಹೋಗಿದ್ದೆ. ಆಗ ಅವರು ತುರ್ತು ಚಿಕಿತ್ಸಾ ಘಟಕದಲ್ಲಿದ್ದರು. ಇಷ್ಟು ಬೇಗ ನಮ್ಮನ್ನು ಅಗಲುತ್ತಾರೆ ಎನ್ನಿಸಿರಲಿಲ್ಲ. ಕಾಂಗ್ರೆಸ್ನ ನಿಷ್ಠಾವಂತ ಶಾಸಕ, ನಾಲ್ಕು ಬಾರಿ ಶಾಸಕರಾಗಿದ್ದು, ಅತ್ಯಂತ ಸರಳ, ಸಜ್ಜನಿಕೆಯಿಂದ ಇದ್ದರು. ತಮ್ಮ ಜಿಲ್ಲೆ ಹಾಗೂ ಕ್ಷೇತ್ರದ ಅಭಿವೃದ್ಧಿ ಬಗ್ಗೆ ಕಳಕಳಿ ಹೊಂದಿದ್ದರು. ತಮ್ಮ ಅನಾರೋಗ್ಯವನ್ನು ಲೆಕ್ಕಿಸದೆ ಜನಪರ ಕಾರ್ಯ ಮಾಡುತ್ತಿದ್ದರು. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರಿಗೂ ಆಪ್ತರಾಗಿದ್ದರು. ಅವರನ್ನು ಉಗ್ರಾಣ ನಿಗಮದ ಅಧ್ಯಕ್ಷರನ್ನಾಗಿ ಮಾಡಲಾಗಿತ್ತು. ಅವರ ಆತ್ಮಕ್ಕೆ ಚಿರಶಾಂತಿ ಕೋರುತ್ತಾ, ಅವರ ಕುಟುಂಬ ವರ್ಗದವರಿಗೆ ರಾಜಾ ವೆಂಕಟಪ್ಪ ನಾಯಕರವರ ಅಗಲಿಕೆಯ ದುಃಖ ಭರಿಸಲಿ ಎಂದು ಹೇಳಿದರು.

ವಿರೋಧಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, ರಾಜಾ ವೆಂಕಟಪ್ಪ ನಾಯಕ ಅವರ ನಿಧನದ ಸುದ್ದಿ ಕೇಳಿ ಆಘಾತವಾಗಿದೆ. ಐದು ವರ್ಷ ಈ ಸದನದ ಸದಸ್ಯರಾಗಿರುವಂತೆ ಚುನಾವಣಾ ಆಯೋಗ ಗ್ಯಾರಂಟಿ ಕೊಟ್ಟಿತ್ತು. ಆದ–'ರೆ ವಿಧಿ ಅವಕಾಶ ಮಾಡಿಕೊಡಲಿಲ್ಲ. ಸರಳ, ಸಜ್ಜನಿಕೆಯುಳ್ಳವರಾಗಿದ್ದ ಅವರು, ಅವರಾಯಿತು, ಅವರ ಕ್ಷೇತ್ರವಾಯಿತು ಎಂಬಂತಿದ್ದರು. ಅವರ ಮನೆತನ ಸ್ವಾತಂತ್ರ್ಯ ಹೋರಾಟದ ಮನೆತನವಾಗಿತ್ತು ಎಂದು ಸ್ಮರಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾತನಾಡಿ, 1987 ರಿಂದಲೂ ಅವರು ನನಗೆ ಪರಿಚಯ. ನಾಲ್ಕು ಬಾರಿ ಶಾಸಕರಾಗಿದ್ದರು. ರಾಜ ರಾಜನಾಗಿ, ಬಡವ ಬಡವನಾಗಿ, ಶ್ರೀಮಂತ ಶ್ರೀಮಂತನಾಗಿರಲು ಸಾಧ್ಯವಿಲ್ಲ . ಆದರೆ ಸಂಬಂಧ ಮಾತ್ರ ಶಾಶ್ವತವಾಗಿ ಇರುತ್ತದೆ. ನಾಲ್ಕು ದಿನದ ಹಿಂದೆ ಆಸ್ಪತ್ರೆಗೆ ಭೇಟಿ ನೀಡಿ ಮಾತುಕತೆ ನಡೆಸಿದ್ದೆ. ರಾಜ್ಯಸಭೆ ಚುನಾವಣೆಗೆ ಮತ ಹಾಕುವುದಾಗಿ ಹೇಳಿದ್ದರು. ಯಾರಿಗೂ ತೊಂದರೆ ಕೊಟ್ಟವರಲ್ಲ. ಅವರ ಅಭಿಮಾನಿಯೊಬ್ಬ ನಿಧನದ ಸುದ್ದಿ ಕೇಳಿ ಹೃದಯಾಘಾತದಿಂದ ಮೃತಪಟ್ಟಿದ್ದಾರೆ. ಅಜಾತಶತ್ರು ಎಂದು ಅವರು ಜನಪ್ರಿಯರಾಗಿದ್ದರು ಎಂದು ಅವರ ಒಡನಾಟದ ಘಟನಾವಳಿಗಳನ್ನು ಮೆಲುಕು ಹಾಕಿದರು.

ಸಚಿವರಾದ ಜಮೀರ್ ಅಹಮ್ಮದ್ ಖಾನ್, ಪ್ರಿಯಾಂಕ್ ಖರ್ಗೆ, ಡಾ.ಶರಣ ಪ್ರಕಾಶ್ ಪಾಟೀಲ್, ಮಧು ಬಂಗಾರಪ್ಪ, ಶಾಸಕರಾದ ಮಾನಪ್ಪ ವಜ್ಜಲ್, ಆರಗ ಜ್ಞಾನೇಂದ್ರ, ಅಜಯ್ ಧರ್ಮಸಿಂಗ್, ನಾಗರಾಜ, ಎನ್.ಟಿ.ಶ್ರೀನಿವಾಸ್ ಅವರು ಮಾತನಾಡಿ ರಾಜಾ ವೆಂಕಟಪ್ಪ ನಾಯಕ ಅವರ ಸೇವೆಯನ್ನು ಸ್ಮರಿಸಿ, ಶ್ರದ್ಧಾಂಜಲಿ ಸಲ್ಲಿಸಿದರು.

ಬಳಿಕ ಸದನದ ಸದಸ್ಯರೆಲ್ಲಾ ಎದ್ದು ನಿಂತು ಒಂದು ನಿಮಿಷ ಮೌನಾಚರಣೆ ಮಾಡುವ ಮೂಲಕ ಸಂತಾಪ ಸೂಚಿಸಲಾಯಿತು. ಸಭಾಧ್ಯಕ್ಷರು ಮಾತನಾಡಿ, ಸದನದಲ್ಲಿ ಕೈಗೊಂಡ ಸಂತಾಪ ನಿರ್ಣಯದ ಪ್ರತಿಯನ್ನು ಅವರ ಕುಟುಂಬ ವರ್ಗಕ್ಕೆ ಕಳುಹಿಸಿಕೊಡುವುದಾಗಿ ಪ್ರಕಟಿಸಿದರು.

# ಕಷ್ಟದಲ್ಲಿ ಬೆಳೆದು ಗುರಿ ಮುಟ್ಟಿದ ತಾಂಡಾದ ಯುವಕ: ಸಿವಿಲ್ ನ್ಯಾಯಾಧೀಶ ಹುದ್ದೆಗೆ ಆಯ್ಕೆ

ವಿಜಯನಗರ: ಯುವಕನೊಬ್ಬ ತನ್ನ ತಾಯಿಯ ಆಸೆಯಂತೆ ಸತತ 2 ಬಾರಿ ಪ್ರಯತ್ನದ ನಂತರ 3ನೇ ಬಾರಿಗೆ ಸಿವಿಲ್ ನ್ಯಾಯಾಧೀಶರ ಪರೀಕ್ಷೆಯನ್ನು ಪಾಸ್ ಮಾಡಿ ಜಡ್ಜ್ ಆಗಿದ್ದಾರೆ.



'ಕೈಲಾಗದು ಎಂದು ಕೈಕಟ್ಟಿ ಕುಳಿತರೇ ಸಾಗದು ಕೆಲಸವು ಮುಂದೆ' ಎಂದು ಡಾ.ರಾಜ್ಕುಮಾರ್ ಅವರ ಹಾಡು ಪ್ರಸ್ತುತವಾಗಿ ಎಲ್ಲರಿಗೂ ಮಾದರಿಯಾಗುತ್ತಿದೆ. ಸಿವಿಲ್ ನ್ಯಾಯಾಧೀಶರ ಪರೀಕ್ಷೆಯನ್ನು ಪಾಸ್ ಮಾಡಿರುವ ವಿಜಯ್ ಕುಮಾರ್ ಅವರು 2 ಬಾರಿ ಪ್ರಯತ್ನಿಸಿದರು ಹುದ್ದೆ ಸಿಕ್ಕಿಲ್ಲವೆಂದು ನಿಲ್ಲಿಸಿದ್ದರೇ ಅವರು ಇಂದು ಜಡ್ಜ್ ಆಗುತ್ತಿರಲಿಲ್ಲ.

ಆದರೆ 3ನೇ ಬಾರಿಗೆ ತಮ್ಮ ಎಲ್ಲ ಪರಿಶ್ರಮವನ್ನು ಹಾಕಿ ಓದಿದ್ದ-ರಿಂದ ಪರೀಕ್ಷೆಯನ್ನು ಪಾಸ್ ಮಾಡಿ ಉನ್ನತ ಹುದ್ದೆಯನ್ನು ಪಡೆದುಕೊಂಡಿದ್ದಾರೆ. ಅನ್ನ ಹಾಕಿದ ಮನೆ ಕೆಡಲ್ಲ, ಗೊಬ್ರ ಹಾಕಿದ ಹೊಲ ಹಾಳಾಗಿಲ್ಲ ಎನ್ನುವಂತೆ ಯಾವತ್ತೂ ವಿದ್ಯೆಯನ್ನು ಕಲಿತವ-ರಿಗೆ ಶಾಶ್ವತವಾಗಿರುತ್ತದೆ. ಇದು ಸಂತಸದ ಸಂಗತಿ. ಇನ್ನು ವಿಜಯ್ ಕುಮಾರ್ ಎಲ್ಲಿಯವರು, ಅವರ ಶಿಕ್ಷಣದ ಜೀವನ ಹೇಗಿತ್ತು ಎನ್ನುವುದು ನೋಡುವುದಾದರೇ..

ವಿಜಯಕುಮಾರ್ ಅವರು ವಿಜಯನಗರ ಜಿಲ್ಲೆಯ ಹಗ-ರಿಬೊಮ್ಮನಹಳ್ಳಿ ತಾಲೂಕಿನ ಚಿಕ್ಕದಾದ ಆನೇಕಲ್ ತಾಂಡ ನಿವಾಸಿ. ನಾರಾಯಣ್ ಹಾಗೂ ಮಂಜುಳಾ ದಂಪತಿಯ ಪುತ್ರ. ತಮ್ಮ ಪ್ರಾಥಮಿಕ ಓದನ್ನೆಲ್ಲ ತನ್ನ ಹುಟ್ಟೂರು ತಾಂಡದಲ್ಲೇ ಮುಗಿಸಿದ್ದಾರೆ.

ಬಳಿಕ ಮೊರಾರ್ಜಿ ಶಾಲೆಯ ಪರೀಕ್ಷೆಯನ್ನು ಪಾಸ್ ಮಾಡಿ, ಮೊರಾರ್ಜಿ ವಸತಿ ಶಾಲೆಯಲ್ಲಿ ಉಳಿದುಕೊಂಡು ಪ್ರೌಢ ಶಿಕ್ಷಣವನ್ನು ಮುಗಿಸಿದ್ದಾರೆ. 10ನೇ ತರಗತಿ ಪಾಸ್ ಆದ ಮೇಲೆ ಮುಂದೆ ಪಿಯುಸಿ ವ್ಯಾಸಂಗವನ್ನು ಹಗರಿ ಬೊಮ್ಮನಹಳ್ಳಿಯ ಕಾಲೇಜಿನಲ್ಲಿ ಓದಿದ್ದಾರೆ. ಇದೇ ಕಾಲೇಜಿನಲ್ಲಿ ಪದವಿ ಕೂಡ ಪೂರ್ಣಗೊಳಿಸಿದ್ದಾರೆ.

ಪದವಿ ಮುಗಿದ ಬಳಿಕ ಮುಂದೇನು ಎಂಬುದು ವಿಜಯಕುಮಾರ್ ಆಲೋಚನೆಗೆ ಬಂದಾಗ 2020-21ರಲ್ಲಿ ಬಳ್ಳಾ-ರಿಯ ಗಿಖಖ ಲಾ ಕಾಲೇಜಿನಲ್ಲಿ ಐಐಃ ಕೋರ್ಸ್ಗೆ ಪ್ರವೇಶ ಪಡೆದುಕೊಂಡಿದ್ದಾರೆ. ಎಲ್-ಎಲ್ಬಿ ಮುಗಿದ ಮೇಲೆ ಎರಡು ವರ್ಷ ಬಳ್ಳಾರಿಯಲ್ಲಿ ಕಿರಿಯ ವಕೀಲನಾಗಿ ಸೇವೆ ಸಲ್ಲಿಸಿದ್ದಾರೆ. ತಂದೆ ನಿಧನ ಬಳಿಕ ಛಲ ಬಿಡದ ವಿಜಯಕುಮಾರ್ ಅವರು ತಾಯಿ ಆಸೆಯಂತೆ ಜಡ್ಜ್ ಹುದ್ದೆಗಾಗಿ ಓದಲು ಆರಂಭಿಸಿದ್ದಾರೆ. ಸತತ ಓದಿನಿಂದ ಎರಡು ಬಾರಿ ಪರೀಕ್ಷೆಯಲ್ಲಿ ಪ್ರತಿಫಲ ಸಿಗದೇ ವಾಪಸ್ ಆಗಿದ್ದರು. ಆದರೆ ಕಷ್ಟದ ಕೆಲಸ ಇಷ್ಟದಿಂದ ಮಾಡಿದರೆ ಪ್ರತಿಫಲ ಪಕ್ಕಾ ಎನ್ನುವುದು ಅರಿತ ವಿಜಯ್ ಕುಮಾರ್ 3ನೇ ಬಾರಿ ನ್ಯಾಯಾಧೀಶರ ಪರೀಕ್ಷೆಗೆ ಹಾಜರಾಗಿ ಬರೆದಿದ್ದಾರೆ. ಅದರಂತೆ ಎಕ್ಸಾಂನಲ್ಲಿ ಪಾಸ್ ಆಗಿದ್ದು ಇಂದು ಸಿವಿಲ್ ನ್ಯಾಯಾಧೀಶರಾಗಿ ಆಯ್ಕೆ ಆಗಿದ್ದಾರೆ.

# ದೇವಾಲಯಗಳ ಹಣ ಚರ್ಚ, ಮಸೀದಿಗಳಿಗೆ ಹೋಗುತ್ತಿಲ್ಲಚಿ

ಬೆಂಗಳೂರು : ಲೋಕಸಭಾ ಚುನಾವಣಾ ಹತ್ತಿರ ಬರುತ್ತಿದಂತೆ ಬಿಜೆಪಿಯವರು ಜನರ ಭಾವನೆಗಳ ಮೇಲೆ ಅಪಪ್ರಚಾರ ಮಾಡುತ್ತಿದ್ದು, ಬಿಜೆಪಿ ತಿಳಿದಂತೆ ದೇವಾಲಯಗಳಲ್ಲಿ ಸಂಗ್ರಹವಾಗುತ್ತಿರುವ ಹಣ ಚರ್ಚ, ಮಸೀದಿಗಳಿಗೆ ಹೋಗುತ್ತಿಲ್ಲ ಎಂದು ಅಖಿಲ ಕರ್ನಾಟಕ ಹಿಂದೂ ದೇವಾಲಯಗಳ ಅರ್ಚಕರ ಆಗಮಿಕರ ಮತ್ತು ಉಪಾಧಿವಂತರ ಒಕ್ಕೂಟ ಸ್ಪಷ್ಟಪಡಿಸಿದೆ.




ರವಿವಾರ ಇಲ್ಲಿನ ಪ್ರೆಸ್ಕ್ಲಬ್ನಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಒಕ್ಕೂಟದ ಪ್ರಧಾನ ಸಲಹೆಗಾರ ರಾಧಾಕೃಷ್ಣ ಮಾತನಾಡಿ, 'ರಾಜ್ಯದ ಎ ದರ್ಜೆಯ ದೇವಸ್ಥಾನಗಳಲ್ಲಿ ನೂರಾರು ಕೋಟಿ ವ್ಯವಹಾರ ನಡೆಯುತ್ತಿದೆ.

ಈ ಅಭಿವೃದ್ಧಿ ಸಹಿಸಲಾಗದೇ ಬಿಜೆಪಿಯವರು ದೇವಾಲಯಗಳ ಹಣ ಚರ್ಚ, ಮಸೀದಿಗಳಿಗೆ ಹಣ ಹೋಗುತ್ತಿದೆ ಎಂದು ಅಪಪ್ರಚಾರ ಮಾಡುತ್ತಿದ್ದಾರೆ ಎಂದರು.

ಹಿಂದೂ ಧರ್ಮವನ್ನು ಎತ್ತಿ ಹಿಡಿಯುವ ಕೆಲಸ ಎ ದರ್ಜೆಯ ದೇವಸ್ಥಾನಗಳಲ್ಲಿ ಆಗುತ್ತಿದೆ. ನಿತ್ಯವೂ ಕೋಟ್ಯಂತರ ರೂ. ಹಣ ಸಂಗ್ರಹಣೆ ಆಗುತ್ತಿದ್ದು ಇದನ್ನು ಬಿಜೆಪಿ ಸಹಿಸುತ್ತಿಲ್ಲ. ಇದೇ ಕಾರಣ ಇಟ್ಟುಕೊಂಡು ರಾಜ್ಯದ ಎ ದರ್ಜೆಯ ದೇವಾಲಯಗಳ ಬಗ್ಗೆ ಅಪಪ್ರಚಾರ ನಡೆಯುತ್ತಿದೆ. ಕಾಂಗ್ರೆಸ್ ಸರಕಾರದಿಂದ ದೇವಾಲಯಗಳ ಅಭಿವೃದ್ಧಿ ಕೆಲಸ ಮಾಡುತ್ತಿದ್ದು, ದೇವಸ್ಥಾನಗಳನ್ನು ರಾಜಕೀಯಕ್ಕೆ ಎಳೆಯುವುದನ್ನು ನಿಲ್ಲಿಸಿ ಎಂದು ಅವರು ಹೇಳಿದರು.

# ಫೆ 28 ಮತ್ತು 29 ರಂದು ಬೆಳವಡಿ ಮಲ್ಲಮ್ಮನ ಉತ್ಸವ

ಬೆಳಗಾವಿ: ಜಿಲ್ಲಾಡಳಿತ, ಬೆಳಗಾವಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ 28 ಮತ್ತು 29 ರಂದು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಬೆಳವಡಿ ಗ್ರಾಮದಲ್ಲಿ ಬೆಳವಡಿ ಮಲ್ಲಮ್ಮನ ಉತ್ಸವ ನಡೆಯಲಿದೆ.

ಫೆ.28 ರಂದು ಸಂಜೆ 7 ಗಂಟೆಗೆ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಬೆಳವಡಿ ಸಂಸ್ಥಾನದ ರಾಜಗುರುಗಳು, ಹೂಲಿ ಹಿರೇಮಠದ ಶ್ರೀ ಶಿವಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರು ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲಿಕರಣ ಸಚಿವೆ ಲಕ್ಷ್ಮೀ ಹೆಬ್ಬಾಳಕರ ಅವರು ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರು ಹಾಗೂ ಬೈಲಹೊಂಗಲ ಶಾಸಕರಾದ ಮಹಾಂತೇಶ ಎಸ್. ಕೌಜಲಗಿ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ವಿಧಾನಸಭೆ ಸರ್ಕಾರಿ ಮುಖ್ಯ ಸಚೇತಕರಾದ ಅಶೋಕ ಪಟ್ಟಣ, ಕರ್ನಾಟಕ ಸರ್ಕಾರದ ನವದೆಹಲಿ ವಿಶೇಷ ಪ್ರತಿನಿಧಿ-2 ಪ್ರಕಾಶ ಹುಕ್ಕೇರಿ, ವಾಯವ್ಯ ಸಾರಿಗೆ ನಿಗಮ ನಿಯಮಿತ ಅಧ್ಯಕ್ಷರು ಹಾಗು ಕಾಗವಾಡ ಶಾಸಕರಾದ ಭರಮಗೌಡ ಕಾಗೆ, ಆಮಂತ್ರಣರಾಗಿ ಆಗಮಿಸಲಿದ್ದಾರೆ.

ಉತ್ತರ ಕನ್ನಡ ಸಂಸದರಾದ (ಲೋಕ ಸಭೆ) ಅನಂತಕುಮಾರ ಹೆಗಡೆ, ಚಿಕ್ಕೋಡಿ ಸಂಸದರಾದ (ಲೋಕ ಸಭೆ) ಅಣ್ಣಾಸಾಹೇಬ ಜೊಲ್ಲೆ, ಸಂಸದಾರದ (ರಾಜ್ಯ ಸಭೆ) ಈರಣ್ಣ ಕಡಾಡಿ, ಬೆಳಗಾವಿ ಸಂಸದರಾದ (ಲೋಕ ಸಭೆ) ಮಂಗಲ ಸುರೇಶ ಅಂಗಡಿ ಗೌರವಾನ್ವಿತ ಅಥಿತಿಗಳಾಗಿ ಆಗಮಿಸಲಿದ್ದಾರೆ.

ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರು ಹಾಗೂ ಬೈಲಹೊಂಗಲ ಶಾಸಕರಾದ ಮಹಾಂತೇಶ ಎಸ್. ಕೌಜಲಗಿ ಅವರು ವೀರರಾಣಿ ಬೆಳವಡಿ ಮಲ್ಲಮ್ಮ ವೃತ್ತದಲ್ಲಿ ಫೆ 28 ರಂದು ಬೆಳಿಗ್ಗೆ 10 ಗಂಟೆಗೆ ಬೆಳವಡಿ ಸಂಸ್ಥಾನದ ಮಲ್ಲಮ್ಮನ ವಿಜಯ ಜ್ಯೋತಿಯನ್ನು ಬರಮಾಡಿಕೊಂಡು ಬಳಿಕ ಧ್ವಜಾರೋಹಣ ನೆರವೇರಿಸದ್ದಾರೆ.

ಬೆಳಿಗ್ಗೆ 10-15 ಗಂಟೆಗೆ ವೀರರಾಣಿ ಬೆಳವಡಿ ಮಲ್ಲಮ್ಮ ವೃತ್ತದಲ್ಲಿ ಜಾನಪದ ಕಲಾವಾಹಿನಿ ಉದ್ಘಾಟನೆಯನ್ನು ಬೆಳಗಾವಿ ಸಂಸದೆ ಮಂಗಲ ಸುರೇಶ ಅಂಗಡಿ ಉದ್ಘಾಟಿಸಲಿದ್ದಾರೆ. ಮುಖ್ಯ ವೇದಿಕೆ ಎಡ ಭಾಗದಲ್ಲಿ ಬೆಳಿಗ್ಗೆ 10.30 ಗಂಟೆಗೆ ಬೈಲಹೊಂಗಲ ಶಾಸಕ ಮಾಹಂತೇಶ ಕೌಜಲಗಿ ಅವರು ವಸ್ತು ಪ್ರದರ್ಶನ ಉದ್ಘಾಟನೆ ಮಾಡಲಿದ್ದಾರೆ.

**ಪುಸ್ತಕ ಬಿಡುಗಡೆ:**

ವೀರರಾಣಿ ಬೆಳವಡಿ ಮಲ್ಲಮ್ಮ ವೆಧಿಕೆಯಲ್ಲಿ ಸಂಜೆ 7 ಗಂಟೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ತಂಗಡಗಿ ಶಿವರಾಜ್ ಸಂಗಪ್ಪ ಅವರು ಪುಸ್ತಕ ಬಿಡುಗಡೆ ಮಾಡಲಿದ್ದಾರೆ.

**ಪ್ರಶಸ್ತಿ ಸಮಾರಂಭ:**

ವೀರರಾಣಿ ಬೆಳವಡಿ ಮಲ್ಲಮ್ಮ ವೇದಿಯಲ್ಲಿ ಸಂಜೆ 7 ಗಂಟೆಗೆ ಬೈಲಹೊಂಗಲದ ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಯ ಪ್ರಾಚರ್ಯರಾದ ರೀತಾ ಪಿಂಟೋ ಅವರಿಗೆ ವೀರರಾಣಿ ಮಲ್ಲಮ್ಮ ಪ್ರಶಸ್ತಿ ಪ್ರಾದಾನ ಮಾಡಲಾಗುವುದು.

ವೀರರಾಣಿ ಬೆಳವಡಿ ಮಲ್ಲಮ್ಮಳ ವಿಚಾರ ಸಂಕಿರಣ ಫೆ.29 ರಂದು ಬೆಳಿಗ್ಗೆ 11 ಗಂಟೆಗೆ ಬೆಳವಡಿ ಮಲ್ಲಮ್ಮ ಸ್ಮಾರಕ ಭವನದಲ್ಲಿ ನಡೆಲಿದ್ದು, ಬೆಳವಡಿ ಸಂಸ್ಥಾನದ ರಾಜಗುರುಗಳು, ಹೂಲಿ ಹಿರೇಮಠದ ಶ್ರೀ ಶಿವಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳು ದಿವ್ಯ ಸಾನಿಧ್ಯ ವಹಿಸಲಿದ್ದಾರೆ.

ವೀರರಾಣಿ ಬೆಳವಡಿ ಮಲ್ಲಮ್ಮಳ ವಿಚಾರ ಸಂಕಿರಣವನ್ನು ಗದಗ ನಿವೃತ್ತ ಪ್ರಾಧ್ಯಾಪಕ ಡಾ. ಶಕುಂತಲಾ ಸಿಂಧೂರ ಅವರು ಉದ್ಘಾಟಿಸಿ, ಉಪನ್ಯಾಸ ನಿಡಲಿದ್ದಾರೆ. ಹಿರೇಮಲ್ಲೂರ ಈಶ್ವರನ್ ಪಿ.ಯು. ವಿಜ್ಞಾನ ಮಹಾವಿದ್ಯಾಲಯ ಪ್ರಾಚಾರ್ಯರಾದ ಶಶಿಧರ ತೋಡಕರ ಅವರು ಅಧ್ಯಕ್ಷತೆಯನ್ನು ವಹಿಸಲಿದ್ದಾರೆ.

ಬೆಳವಡಿ ಈಶ ಪ್ರಭು ಶಿಕ್ಷಣ ಸಂಸ್ಥೆ ಆವರಣದಲ್ಲಿ ಫೆ 29 ರಂದು ಬೆಳಿಗ್ಗೆ 12 ಗಂಟೆಗೆ ಕರ್ನಾಟಕ ರಾಜ್ಯ ಹಣಕಾಸು ಸಂಸ್ಥೆ ಅಧ್ಯಕ್ಷರು ಹಾಗೂ ಬೈಲಹೊಂಗಲ ಶಾಸಕರಾದ ಮಹಾಂತೇಶ ಎಸ್. ಕೌಜಲಗಿ ಅವರು ಕ್ರೀಡಾ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಬೆಳವಡಿ ಮಲ್ಲಮ್ಮನ ಸಂಸ್ಥಾನದ ಮಹಿಳಾ ಸಬಲೀಕರಣ ವಿಷಯದ ಕುರಿತು ಹೊಸೂರು ವಕೀಲರಾದ ಎಫ್. ಎಸ್.ಸಿದ್ದನಗೌಡ್ರು ಉಪನ್ಯಾಸ ನೀಡಲಿದ್ದಾರೆ. ಅದೇ ರೀತಿಯಲ್ಲಿ ಬೆಳವಡಿ ಉತ್ಸವ ನಡೆದು ಬಂದ ದಾರಿ ವಿಷಯದ ಕುರಿತು ಬಳ್ಳಾರಿ ಎಸ್.ಜಿ.ಪಿ.ಯು ಕಾಲೇಜ ಅರ್ಥಶಾಸ್ತ್ರ ಉಪನ್ಯಾಸಕ ಸಂತೋಷ ಯಕ್ಕುಂಡಿ ಅವರು ಉಪನ್ಯಾಸ ನೀಡಲಿದ್ದಾರೆ.

ಪಬ್ಲಿಕ ನೋಟರಿ ವಕೀಲರಾದ ಸಿ.ಎಸ್.ಚಿಕ್ಕನಗೌಡರ ಅವರು ಸ್ವಾಗತವನ್ನು ಕೋರಲಿದ್ದಾರೆ. ಸವದತ್ತಿ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷರಾದ ವಾಯ್. ಎಮ್.ಯಾಕೊಳ್ಳಿ ಅವರು ಆಶಯ ನುಡಿಯನ್ನಾಡಲಿದ್ದಾರೆ. ಬೆಳವಡಿ ಈಶ ಪ್ರಭು ಶಿಕ್ಷಣ ಸಂಸ್ಥೆಯ ಸಹ ಶಿಕ್ಷಕರಾದ ವಿರೇಶ ಕಾಡೇಶನವರ ನಿರೂಪಿಸಲಿದ್ದಾರೆ.

ಬೆಳವಡಿ ಶಿಕ್ಷಕರಾದ ಶಿವಪ್ಪ ಹುಂಬಿ ವರು ಗೌರವ ಉಪಸ್ಥಿತಿಯನ್ನು ವಹಿಸಲಿದ್ದಾರೆ. ಬೈಲಹೊಂಗಲ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಎ.ಎನ್.ಪ್ಯಾಟಿ ಅವರು ವಂದನಾರ್ಪಣೆ ಸಲ್ಲಿಸಲಿದ್ದಾಆರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ವಿಜೃಂಭಣೆಯಿಂದ ಜರುಗಿದ ಜಾರಕಿಹೊಳಿ ಕುಟುಂಬದ ಮದುವೆ ಸಮಾರಂಭ: ನವದಂಪತಿಗಳಿಗೆ ಶುಭ ಹಾರೈಸಿದ ಗಣ್ಯರು

ಗೋಕಾಕ: ಜಾರಕಿಹೊಳಿ ಕುಟುಂಬದ ಹಿರಿಯ ಸದಸ್ಯ, ಮಾಜಿ ಸಚಿವ ಹಾಗೂ ಶಾಸಕ ರಮೇಶ ಜಾರಕಿಹೊಳಿ ಅವರ ದ್ವೀತಿಯ ಸುಪುತ್ರ, ಯುವ ಧುರೀಣ ಅಮರನಾಥ ಜೊತೆ ಅಶ್ವಿನಿಯವರ ವಿವಾಹ ಮಹೋತ್ಸವ ವಿಜೃಂಭಣೆಯಿಂದ ನಗರದ ಹೊರವಲಯದಲ್ಲಿರುವ ಬಸವೇಶ್ವರ ಸಭಾ ಭವನದಲ್ಲಿ ಜರುಗಿತು.



ಈ ವಿವಾಹ ಸಮಾರಂಭದಲ್ಲಿ ರಾಜನಹಳ್ಳಿಯ ಶ್ರೀ ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದಪುರಿ ಸ್ವಾಮಿಜಿ, ಶೂನ್ಯ ಸಂಪಾದನ ಮಠದ ಶ್ರೀ ಮುರುಘರಾಜೇಂದ್ರ ಸ್ವಾಮಿಜಿ, ಅಂಕಲಗಿ ಅಡವಿಸಿದ್ದೇಶ್ವರ ಮಠದ ಶ್ರೀ ಅಮರಸಿದ್ಧೇಶ್ವರ ಸ್ವಾಮಿಜಿ, ಅರಭಾಂವಿ ದುರದುಂಡೇಶ್ವರ ಮಠದ ಗುರುಬಸವಲಿಂಗ ಸ್ವಾಮಿಜಿ, ಸುಣಧೋಳಿಯ ಶ್ರೀ ಅಭಿವನಶಿವಾನಂದ ಸ್ವಾಮಿಜಿ ಸೇರಿದಂತೆ ಗೋಕಾಕ ಹಾಗೂ ಮೂಡಲಗಿ ತಾಲೂಕು ಸೇ-ರಿದಂತೆ ವಿವಿಧ ಮಠಾಧೀಶರು ಭಾಗವಹಿಸಿ ವಧು-ವರರಿಗೆ ಶುಭ ಹಾರೈಸಿದರು.

ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ, ಬಾಲಚಂದ್ರ ಜಾರಕಿಹೊಳಿ, ಲಖನ್ ಜಾರಕಿಹೊಳಿ ಹಾಗೂ ಕಾರ್ಮಿಕ ಮುಖಂಡ ಅಂಬಿರಾವ ಪಾಟೀಲ, ಜಾರಕಿಹೊಳಿ ಕುಟುಂಬದ ಯುವ ನಾಯಕರುಗಳಾದ ಸಂತೋಷ, ಪ್ರಿಯಾಂಕಾ, ಸನತ, ಸರ್ವೋತ್ತಮ, ರಾಹುಲ, ಆದಿತ್ಯ ಹಾಗೂ ಜಾರಕಿಹೊಳಿ ಮತ್ತು ಪಾಟೀಲ ಕುಟುಂಬ ಮದುವೆ ಸಂಭ್ರಮದಲ್ಲಿ ಮಿಂದೆದ್ದರು.

ಮಾಜಿ ಮುಖ್ಯಮಂತ್ರಿಗಳಾದ ಬಸವರಾಜ ಬೊಮ್ಮಾಯಿ, ಜಗದೀಶ ಶೆಟ್ಟರ, ಮಾಜಿ ಉಪ ಮುಖ್ಯಮಂತ್ರಿ ಕೆ ಎಸ್ ಈಶ್ವರಪ್ಪ, ಶಾಸಕರುಗಳಾದ ಬಸವನಗೌಡ ಪಾಟೀಲ ಯತ್ನಾಳ, ದುರ್ಯೋಧನ ಐಹೊಳೆ, ಸಿದ್ದು ಸವದಿ, ಮಾಜಿ ಶಾಸಕರುಗಳಾದ ಮಾಲಿಕಯ್ಯ ಗುತ್ತೇದಾರ.

ವಿವೇಕರಾವ ಪಾಟೀಲ, ಕೆ ಶಿವನಗೌಡ ನಾಯಕ, ಪಿ ರಾಜೀವ, ಶ್ರೀಮಂತ ಪಾಟೀಲ, ಮಹೇಶ ಕುಮಟಳ್ಳಿ, ಬಸವರಾಜ ದಡೇಗಸೂರ, ಜಗದೀಶ್ ಮೆಟಗುಡ್ಡ, ಪ್ರತಾಪರಾವ ಪಾಟೀಲ, ಸಂಜಯ ಪಾಟೀಲ ಬಿಜೆಪಿ ಮುಖಂಡರುಗಳಾದ ಸುಭಾಸ ಪಾಟೀಲ, ರತ್ನಾ ಮಾಮನಿ, ನಾಗೇಶ ಮುನ್ನೋಳಕರ.

ಕಾಂಗ್ರೆಸ್ ಮುಖಂಡರಾದ ಶ್ಯಾಮ ಘಾಟಗೆ, ವಿನಯ ನಾವಲಟ್ಟಿ ಸೇರಿದಂತೆ ಬೆಳಗಾವಿ ಜಿಲ್ಲೆಯ ಗಣ್ಯಾತಿಗಣ್ಯರು, ಮೂಡಲಗಿ- ಗೋಕಾಕ ತಾಲೂಕಿನ ಸಾರ್ವಜನಿಕರು ಮದುವೆ ಸಮಾರಂಭದಲ್ಲಿ ಭಾಗವಹಿಸಿದ್ದರು.

# ಮೋಟಾರ್ ಸೈಕಲ್ ಹಾಗೂ ಎಮ್ಮೆ ಓಟದ ಸ್ಪರ್ಧೆ ಉದ್ಘಾಟನೆ

ಬೆಳಗಾವಿ: ಹಿಂಡಲಗಾ ಗ್ರಾಮದ ಶಿವನಗರದಲ್ಲಿ ಸ್ವಯಂಭು ಗವಳಿ ಶಹರಿ ಹಾಗೂ ಗ್ರಾಮೀಣ ವಿಕಾಸ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಭಾನುವಾರ ಹಮ್ಮಿಕೊಂಡಿದ್ದ ಮೋಟಾರ್ ಸೈಕಲ್ ಹಾಗೂ ಎಮ್ಮೆಯ ಓಟದ ಶರ್ಯತ್ ನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಲಕ್ಷ್ಮೀ ಹೆಬ್ಬಾಳಕರ್, ಗ್ರಾಮೀಣ ಸಂಸ್ಕೃತಿಯನ್ನು ಉಳಿಸುವಲ್ಲಿ ಪ್ರಮುಖ ಕೆಲಸ ಮಾಡುತ್ತಿರುವ ಗೌಳಿ ಸಮಾಜದ ಕಾರ್ಯ ಶ್ಲಾಘನೀಯವಾಗಿದೆ. ರೈತನ ಮಗಳಾಗಿ ಗೌಳಿಗರ ಶ್ರಮ ಜೀವನ ಅರ್ಥವಾಗುತ್ತದೆ. ನಿಮ್ಮ ಸಮಸ್ಯೆಗಳಿಗೆ ಸ್ಪಂದಿಸುವ ಕೆಲಸವನ್ನು ಮಾಡುತ್ತೇನೆ ಎಂದು ತಿಳಿಸಿ, ಕಾರ್ಯಕ್ರಮಕ್ಕೆ ಆರ್ಥಿಕ ನೆರವು ಘೋಷಿಸಿದರು.

ಈ ಸಮಯದಲ್ಲಿ ವಿಠ್ಠಲ ದೇಸಾಯಿ, ಚೇತನಾ ಅಗಸ್ಗೇಕರ್, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಗಜಾನನ ಬಾಂಡೇಕರ್, ಪ್ರವೀಣ ಪಾಟೀಲ, ರಾಹುಲ್ ಉರನಕರ್, ರಾಮಚಂದ್ರ ಕುದ್ರೆಮನಿಕರ್ ಮುಂತಾದವರು ಉಪಸ್ಥಿತ-ರಿದ್ದರು.

# ಲಾರಿಗೆ ಬೈಕ್ ಡಿಕ್ಕಿ: ಸೊಸೆ- ಮಾವ ಸ್ಥಳದಲ್ಲೇ ಸಾವು

ಕಲಬುರಗಿ: ತಾಲೂಕಿನ ಅವರಾದ್ ಬಳಿ ನಿಂತಿದ್ದ ಲಾರಿಗೆ ಬೈಕ್ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಬೈಕ್ ಸವಾರರು ಸಾವನ್ನಪ್ಪಿದ ಘಟನೆ ಸೋಮವಾರ ಬೆಳಗಿನ ಜಾವ ನಡೆದಿದೆ.

ಬೈಕ್ ಮೇಲೆ ಸವಾರಿ ಮಾಡುತ್ತಿದ್ದ ಮಾವ ಮತ್ತು ಸೊಸೆ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಸಾವನ್ನಪ್ಪಿದವರನ್ನು ಗುರುನಾಥ (46) ಹಾಗೂ




ಸಂಗೀತ (35) ಸಾವನ್ನಪ್ಪಿದ ದುರ್ದೈವಿಗಳು ಎಂದು ಗುರುತಿಸಲಾಗಿದೆ. ಈ ಘಟನೆಯಲ್ಲಿ ಲಕ್ಷ್ಮಣ ಎಂಬುವವರಿಗೆ ಗಂಭೀರ ಗಾಯವಾಗಿದೆ.

ಕಲಬುರಗಿ ತಾಲೂಕಿನ ಬೆಲೂರ್ ನಿಂದ ಮದುವೆಗಾಗಿ ಬಸವಕಲ್ಯಾಣಕ್ಕೆ ತೆರಳುವಾಗ ಘಟನೆ ಸಂಭವಿಸಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ಮಾಡಿದ್ದಾರೆ. ಟ್ರಾಫಿಕ್ ಒನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ. ಪ್ರಕರಣ ದಾಖಲಾಗಿದೆ.

# ಹನುಮಾನ್ ಮಂದಿರ ಉದ್ಘಾಟಿಸಿದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಬೆಳಗಾವಿ ಗ್ರಾಮೀಣ ಕ್ಷೇತ್ರದ ತುಮ್ಮರಗುದ್ದಿ ಗ್ರಾಮದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಶ್ರೀ ಹನುಮಾನ ಮಂದಿರವನ್ನು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಸೋಮವಾರ ಉದ್ಘಾಟಿಸಿದರು.



ಈ ಸಂದರ್ಭದಲ್ಲಿ ಮಾತನಾಡಿದ ಅವರು, ಗ್ರಾಮಸ್ಥರೆಲ್ಲ ಮುಂದಾಗಿ ಹನುಮಾನ್ ಗುಡಿ ಕಟ್ಟಬೇಕೆಂದು ನಿರ್ಧರಿಸಿದಾಗ ನನ್ನಿಂದ ಸಾಧ್ಯವಾದ ನೆರವು ನೀಡಿದೆ. ಅದಕ್ಕಿಂತ ಹೆಚ್ಚಾಗಿ ನೀವೆಲ್ಲ ಬಹಳಷ್ಟು ಶ್ರಮ ಪಟ್ಟು ಭಕ್ತಿಯಿಂದ ಈ ಮಂದಿರವನ್ನು ಸುಂದರವಾಗಿ ನಿರ್ಮಾಣ ಮಾಡಿದ್ದೀರಿ. ಗ್ರಾಮದಲ್ಲಿ ಅದ್ದೂರಿಯಿಂದ ನಡೆಯುತ್ತಿರುವ ಮಂದಿರದ ಉದ್ಘಾಟನೆಯ ಕಾರ್ಯಕ್ರಮ ಮನಸ್ಸಿಗೆ ಖುಷಿ ತಂದಿದೆ. ದೇವರ ಆಶೀರ್ವಾದ ನನಗೆ, ನಿಮಗೆ ಎಲ್ಲರಿಗೂ ಸಿಕ್ಕಿದೆ. ನಾನು ರಾಜ್ಯದಲ್ಲಿ ಮಂತ್ರಿಯಾಗಿದ್ದೇನೆ. ಮುಂದಿನ ದಿನಗಳಲ್ಲಿ ಗ್ರಾಮಕ್ಕೆ ಇನ್ನಷ್ಟು ಒಳ್ಳೆಯದಾಗಲಿದೆ ಎಂದು ಹೇಳಿದರು.

ಗ್ರಾಮೀಣ ಕ್ಷೇತ್ರಾದ್ಯಂತ ನೂರಾರು ದೇವಸ್ಥಾನಗಳನ್ನು ಕಳೆದ 5 ವರ್ಷದಲ್ಲಿ ನಿರ್ಮಾಣ ಮಾಡಲಾಗಿದೆ. ಆದರೆ ದೇವರ ಹೆಸರಿನಲ್ಲಿ ನಾನೆಂದೂ ರಾಜ-ಕಾರಣ ಮಾಡುವುದಿಲ್ಲ, ದೇವರು, ಭಕ್ತಿ ಇವೆಲ್ಲ ನಮ್ಮ ಮನಸ್ಸಿನಲ್ಲಿದೆ. ಜನರು ನನ್ನ ಜೊತೆಗಿದ್ದಾರೆ, ದೇವರ ಆಶೀರ್ವಾದವಿದೆ. ಹಾಗಾಗಿ ಕ್ಷೇತ್ರದಲ್ಲಿ ಸಾಕಷ್ಟು ಅಭಿವೃದ್ಧಿ ಕಾಮಗಾರಿ ಮಾಡಲು ಸಾಧ್ಯವಾಗಿದೆ. ಮುಂದಿನ ದಿನಗಳಲ್ಲಿ ಇನ್ನಷ್ಟು ಅಭಿವೃದ್ಧಿ ಮಾಡುವ ಶಕ್ತಿ ಕೊಡು ಎಂದು ಪ್ರಾರ್ಥಿಸೋಣ ಎಂದು ಅವರು ಹೇಳಿದರು.

ಈ ಸಮಯದಲ್ಲಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಶೇಖರ್ ಹೊಸೂರಿ, ಕಲ್ಮೇಶ್ ಹೊಸೂರಿ, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಬಸನಗೌಡ ಪಾಟೀಲ, ಲಕ್ಷ್ಮಣ ತಳವಾರ, ಸತ್ಯಪ್ಪ ನಂದ್ಯಾಗೋಳ, ಕಲ್ಲಪ್ಪ ಸುತಗಟ್ಟಿ, ಮಲ್ಲಪ್ಪ ಗೊಸಾವಿ, ವಿಲ್ಸನ್ ಮಹಾರ್, ಶಿವಾಜಿ ಮೊಕಾಶಿ, ಶಿವಾ ಪಾಟೀಲ, ಕಲ್ಲಪ್ಪ ಶಿನಗಿ, ಕಲ್ಮೇಶ್ ಮಳಗಳಿ, ಶ್ರೀಕಾಂತ ಶಿನಗಿ ಹಾಗೂ ಗ್ರಾಮಸ್ಥರು, ದೇವಸ್ಥಾನ ಸಮಿತಿಯ ಸದಸ್ಯರು ಉಪಸ್ಥಿತ-ರಿದ್ದರು.

# ಪ.ಪಂ ಯುವಕ ಯುವತಿಯರಿಗೆ ವಿವಿಧ ಕೌಶಲ್ಯಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ವತಿಯಿಂದ 2023-24ನೇ ಸಾಲಿನಲ್ಲಿ ಪರಿಶಿಷ್ಟ ಪಂಗಡದ ನಿರುದ್ಯೋಗಿ ಯುವಕ/ ಯುವತಿಯರಿಗೆ ವಿವಿಧ ಕೌಶಲ್ಯಭಿವೃದ್ಧಿ ಯೋಜನೆಯಡಿ ತರಬೇತಿಗಾಗಿ ಆಫಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು ಅರ್ಹರು ಮಾ.26 ರೊಳಗಾಗಿ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನೇರವಾಗಿ ಜಿಲ್ಲಾ ವ್ಯವಸ್ಥಾಪಕರ ಕಾರ್ಯಾಲಯ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ, ಕೊಠಡಿ ಸಂಖ್ಯೆ-221, ಎರಡನೆ ಮಹಡಿ, ಸುವರ್ಣಸೌಧ, ಬೆಳಗಾವಿ ಇಲ್ಲಿಗೆ ಅಥವಾ ದೂರವಾಣಿ ಸಂಖ್ಯೆ: 0831-2451252 ಗೆ ಸಂಪರ್ಕಿಸಬಹುದು ಎಂದು ಬೆಳಗಾವಿ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಹಂಗಾಮಿನಲ್ಲಿ ಮಾವು ಬೆಳೆಯ ಮುಂಜಾಗ್ರತೆ: ಸಸ್ಯ ಸಂರಕ್ಷಣಾ ಮತ್ತು ಅಗತ್ಯ ಪೂರಕ ಕ್ರಮಗಳು

ಬೆಳಗಾವಿ: 2023-2024 ನೇ ಸಾಲಿನ ಮಾವು ಹಂಗಾಮಿನ ಪೂರಕವಾಗಿ ಕೈಗೊಳ್ಳಬೇಕಾದ ಅಗತ್ಯ ಸಸ್ಯ ಸಂರಕ್ಷಣೆ ಮತ್ತು ಬೇಸಾಯದ ಮಾವು ತಳಿಗಳಾದ ಅಲ್ಫಾನೋ ಮತ್ತು ಕೇಸರ ತಳಿಗಳಿಗೆ ಆದ್ಯತೆ ನೀಡಲಾಗುತ್ತಿದೆ. ಮಾವಿನ ಮರಗಳು ಡಿಸೆಂಬರ್ ತಿಂಗಳಲ್ಲಿ ಹೂವು ಕಟ್ಟಿಕೊಂಡಿದ್ದು, ಹೆಚ್ಚುತ್ತಿರುವ ತಾಪಮಾನವು ಆರಂಭಿಕ ಹೂಗಳನ್ನು ಉತ್ತೇಜಿಸಿವೆ. ಜನೇವರಿ ಮತ್ತು ಫೆಬ್ರುವರಿ ಮಾಹೆಯಲ್ಲಿ ಹವಾಮಾಣ ಪರಿಸ್ಥಿತಿಗಳು ಅನುಕೂಲಕರವಾಗಿದ್ದ ಹೇರಳವಾದ ಮಾವಿನ ಹಣುಗಳ ಪೂರೈಕೆ ನಿರೀಕ್ಷಿಸಬಹುದಾಗಿದೆ.

ಈ ವರ್ಷ ಸಾಕಷ್ಟು ಮಳೆಯಾಗದ ಪರಿಣಾಮ ಮಳೆ ಕೊರತೆಯಿಂದಾಗಿ ಬೇಗನೆ ಹೂ ಬಿಡುತ್ತಿದ್ದು, ಮಾರುಕಟ್ಟೆಗೆ ಬೇಗ ಪ್ರವೇಶ ನೀಡುವ ಭರವಸೆ ಮೂಡಿಸಿದೆ. ಈ ವರ್ಷ ಸೀಮಿತ ಮಳೆ ಒಣಹವೆಯಿಂದಾಗಿ ಉತ್ತಮ ಇಳುವರಿ ಸಾಧ್ಯತೆ ಇರುತ್ತದೆ ಬೆಳಗಾವಿ ಜಿಲೆಯಲ್ಲಿ ಹೂ ಬಿಡುವ ಪೂರ್ವಾ ಅವಧಿ ನವೆಂಬರ್ ಮಾಹೆಯಿಂದ ಡಿಸೆಂಬರ್ ಮಾಡೆಯವರೆಗೆ ಹೂ ಬಿಡುವ ಅವಧಿ ಡಿಸೆಂಬರ್ ಮಧ್ಯಭಾಗದಿಂದ ಜನವರಿ ಮಾಹೆಯ ಕೊನೆಯವರೆಗೂ ಕಾಣಬರುತ್ತದೆ.

ಈ ಕೀಟ ಮತ್ತು ರೋಗಗಳು ಹೂ ಬಿಡುವ ಪೂರ್ವ ಅವಧಿಯಲಿ ಇವುಗಳನ್ನು ಯೋಗ ಸಸ್ಯ ಸಂರಕ್ಷಣೆ ಕ್ರಮಗಳಿಂದ ನಿಯಂತ್ರಿಸಿದರೆ ಮುಂಬರುವ ಹೂ ಬಿಡುವ ಹಂತದರೆ.. ಇವುಗಳ ನಿಯಂತ್ರಣ ಪರಿಣಾಮಕಾ-ರಿಯಾಗುತ್ತದೆ. ಹೂ ಬಿಡುವ ಅವಧಿಯಲಿ. ಜಿಗಿಹುಳು, ಹೂತೆನೆ/ ಕುಡಿ ಕೊರಕ, ಡ್ರಿಪ್ಸ್, ನುಸಿ, ಹಿಟ್ಟು ತಿಗಣೆ, ಓಟೆ ಕೊರಕ ಹಾಗೂ ರೋಗಗಳಾದ ಹೂತೆನೆ ಕಪ್ಪಾಗುವ ರೋಗ, ಬೂದಿ ರೋಗ, ಕಾಡಿಗೆ ರೋಗ ಎಲೆಚಿಟ್ಟು ರೋಗಗಳು ಹೆಚ್ಚಿನ ಹಾನಿ ಉಂಟು ಮಾಡುತ್ತವೆ.

**ಈ ಹಂಗಾಮಿನಲಿ ಅಗತ್ಯ ಪೂರಕ ಕ್ರಮಗಳು**

ಸಿಂಪರಣಾ ದ್ರಾವಣವನ್ನು ಮಾವಿನ ಮರದ ಕಾಂಡ ಮತ್ತು ಎಲಾ ರೆಂಬೆ ಕೊಂಬೆಗಳಿಗೆ ತಲುಪುವಂತೆ ಸಿಂಪಡಿಸುವುದು ಸಿಂಪಡಿಸಹುದು. ಪರಾಗ ಸ್ಪರ್ಷ ಆಗುತ್ತಿರುವ ಸಮಯದಲ್ಲಿ ಯಾವುದೇ ಕಾರಣಕ್ಕೂ ಗಿಡಗಳಿಗೆ ನೀರುಣಿಸಬಾರದು, ಪರಾಗ ಸ್ಪರ್ಷ ಪೂರ್ಣಗೊಂಡ ನಂತರ ಕಾಯಿಯು ಬಟಾಣಿಯಿಂದ ಗೋಲಿ ಗಾತ್ರದ ಹಂತದಲಿ.. ನೀರು ಕೊಡಲು ಪ್ರಾರಂಭಿಸಬಹುದು. ಎರಡು ಮತ್ತು ಮೂರು ರಕ್ಷಣಾತ್ಮಕ/ಪೂರಕ ನೀರಾವರಿ ಕೈಗೊಳ್ಳಬಹುದು,

ಕಚ್ಚಿದ ಕಾಯಿಗಳು ಉದುರದಂತೆ ನೋಡಿಕೊಳ್ಳಲು ಅವುಗಳಿಗೆ ಸಸ್ಯ ಬೆಳವಣಿಗೆ ಚೋಧಕ **– NAA (Planofix) 50 ppm** ಪ್ರಮಾಣದಲಿ ಸಿಂಪಡಿಸಬೇಕು (0.5 ಟಟ/ಐ. ಪ್ರಮಾಣದಲ್ಲಿ, ಬೆರಸಿ). ಚಿಕ್ಕ ಕಾಯಿಗಳು ಬೆಳೆಯುತ್ತಿರುವ ಹಂತದಲ್ಲಿ ಅವುಗಳಿಗೆ ಭಾರತೀಯ ತೋಟಗಾರಿಕೆ ಸಂಶೋಧನಾ ಸಂಸ್ಥೆ (IIHR) ರವರು ಹೊರತಂದಿರುವ "Mango Special" ವನ್ನು ಪ್ರತಿ 10 ಲೀಟರ್ ನೀರಿನಲಿ 50ಗ್ರಾಂ ಪ್ರಮಾಣದಲ್ಲಿ ಕರಗಿಸಿ ಸಿಂಪಡಿಸುವುದು. ಈ ಸಿಂಪರಣಾ ದ್ರಾವಣಕ್ಕೆ ಸೋಪು ದ್ರಾವಣವನ್ನು (0.5 ಮಿ.ಲೀ./ಲೀ.) ಮತ್ತು ನಿಂಬೆರಸ ಬೆರಸಿ ಸಿಂಪಡಿಸಿದರೆ, ಅದು ಪರಿಣಾಮಕಾರಿಯಾಗಿ ಕಾಯಿಗಳಿಗೆ ಅಂಟಿಕೊಳ್ಳುವುದು. ಕೈಗೆಟುಕುವ ಹಂತದ ಸಣ್ಣ ಕಾಯಿಗಳಿಗೆ ಪೇಪರ್ ಕವರ್ ಹೊದಿಕೆ ಅಳವಡಿಸಿದಲಿ. ಉತ್ತಮ ಗುಣಮಟ್ಟದ ಹಣ್ಣುಗಳನ್ನು ಪಡೆಯಬಹುದಾಗಿದೆ. ನೇರ ಮಾರುಕಟ್ಟೆ ಸಂಪರ್ಕ ಹೊಂದಿದ ಬೆಳೆಗಾರರಿಗೆ ಇದು ಉತ್ತಮ. ಕ್ರಮವಾಗಲಿದೆ, ಎಲ್ಲಾ, ಕಾಯಿಗಳಿಗೆ ಕವರ್ ಅಳವಡಿಕೆ ಮಾಡುವ ಅಗತ್ಯವಿಲ್ಲ.

ಹೆಚ್ಚಿನ ಮಾಹಿತಿಗಾಗಿ ಹತ್ತಿರದ ತಾಲೂಕು/ ಜಿಲ್ಲಾ ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಅಥವಾ ಮಾವು ಅಭಿವೃದ್ಧಿ ನಿಗಮದ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೆಳಗಾವಿ ವರದಿ
TUESDAY, 27 FEBRUARY 2024

## ಜಿ.ಪಂ ಸಿಇಓ ರಾಹುಲ್ ಶಿಂಧೆ (ತಾತ್ಕಾಲಿಕ) ಪ್ರವಾಸ ಪಟ್ಟಿ ಫೆ.26 ರಿಂದ ಮಾ.03 ರವರಿಗೆ

ಬೆಳಗಾವಿ: ಬೆಳಗಾವಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ ಅವರು ಫೆ.28 ರಿಂದ ಮಾ.03 ರವರೆಗೆ ವಿವಿಧ ಪ್ರವಾಸ ಕೈಗೊಳ್ಳಲಿದ್ದಾರೆ. ಫೆ.28 ರಂದುಬೈಲಹೊಂಗಲ ತಾಲೂಕಿನ ಬೆಳವಡಿ ಮಲ್ಲಮ್ಮನ ಉತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.

ಗುರುವಾರ (ಫೆ.29) ಮುಂಬರುವ ಲೋಕಸಭಾ ಸಾರ್ವತ್ರಿಕ ಚುನಾವಣಾ –2024ರ ಸಂಬಂಧಿಸಿದಂತೆ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಪೂರ್ವ ತಯಾರಿ ಕುರಿತು ಸಭೆ ನಡೆಸಲಿದ್ದಾರೆ. ಬಳಿಕ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಎ.ಆರ್.ಓ ಗಳು ತಹಶೀಲ್ದಾರಗಳು ಹಾಗೂ ಅಧಿಕಾರಿಗಳು/ಸಿಬ್ಬಂದಿಗಳೊಂದಿಗೆ ವಿವಿಧ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ.

ಅದೇ ರೀತಿಯಲ್ಲಿ ಶುಕ್ರವಾರ (ಮಾ.1) ಬೆಳಿಗ್ಗೆ 10 ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಬೆಳಗಾವಿ ಸುವರ್ಣ ವಿಧಾನಸೌಧದಲ್ಲಿ ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕೆಡಿಪಿ ಸಭೆಗೆ ಹಾಜರಿರಲಿದ್ದಾರೆ.

ಬಳಿಕ ಸಂಜೆ 5 ಗಂಟೆಯಿಂದ ಡಿಡಿಪಿಐ ಹಾಗೂ ಬಿಇಓ ಗಳು ಹಾಗೂ ಅಧಿಕಾರಿ ಸಿಬ್ಬಂದಿಗಳೊಂದಿಗೆ ಖಾಸಗಿ ಅನುದಾನಿತ ಪ್ರೌಡ ಶಾಲೆಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮೋದನೆ ನೀಡುವ ಕುರಿತು ಸಭೆ ನಡೆಸಲಿದ್ದಾರೆ.

ನರೇಗಾ ಯೋಜನಾ ನಿರ್ದೇಶಕರು, ಎಸ್.ಬಿ.ಎಂ ತಂಡ ಹಾಗೂ ಸಂಬಂಧಿಸಿದ ಅಧಿಕಾರಿ/ಸಿಬ್ಬಂದಿಗಳೊಂದಿಗೆ ಮಾ.3 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ನರೇಗಾ, ಎಸ್.ಬಿ.ಎಂ ಕ್ರಿಯಾಯೋಜನೆ ಕುರಿತು ಹಾಗೂ ವಿವಿಧ ಪಟ್ಟಿಗಳ ಕುರಿತು ಸಭೆ ನಡೆಸಲಿದ್ದಾರೆ.

ತದನಂತರ ಮಧ್ಯಾಹ್ನ 3 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ಸಂಬಂಧಿಸಿದ ಅಧಿಕಾರಿಗಳೊಂದಿಗೆ ಬೆಳಗಾವಿ ತಾಲೂಕಿನ ವಿವಿಧ ಗ್ರಾಮ ಪಂಚಾಯತಿಗಳಿಗೆ ಭೇಟಿ ನೀಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅರ್ಜಿ ಆಹ್ವಾನ

ಬೆಳಗಾವಿ: ಯರಗಟ್ಟಿ ಪಟ್ಟಣ ಪಂಚಾಯತ ಕಾರ್ಯಾಲಯದ 2023–24 ನೇ ಸಾಲಿನ ಎಸ್.ಎಫ್.ಸಿ ಮುಕ್ತ ನಿಧಿ ಹಾಗೂ ಪಟ್ಟಣ ಪಂಚಾಯತ ಸಾಮಾನ್ಯ ನಿಧಿ 24.10% ರಷ್ಟು ಪರಿಶಿಷ್ಟ ಜಾತಿ ,ಪರಿಶಿಷ್ಟ ಪಂಗಡ ಜನರಿಗೆ ಹಾಗೂ 7.25% ಇತರೆ ಹಿಂದುಳಿದ ವರ್ಗದವರಿಗೆ ಶಸ್ತ್ರಚಿಕಿತ್ಸೆ ಸಹಾಯಧನ ನಿಡುವುದು, ಮತ್ತು 5% ರ ವಿಕಲಚೇತನರಿಗೆ ಶ್ರವಣ ದೋಷ ಉಪಕರಣ ವಿತರಿಸುವ ವೈಯಕ್ತಿಕ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹ ಫಲಾನಿಭವಿಗಳು ಮಾರ್ಚ 4 ರೊಳಗಾಗಿ ಪಟ್ಟಣ ಪಂಚಾಯತಿಗೆ ಅರ್ಜಿ ಸಲ್ಲಿಸಬೇಕು. ಈಗಾಗಲೆ ಸದರಿ ಯೋಜನೆಗಳಲ್ಲಿ ಸೌಲಭ್ಯ ಪಡೆದ ಫಲಾನುಭವಿಗಳು ಅರ್ಜಿ ಸಲ್ಲಿಸಲು ಅನರ್ಹರಾಗಿದ್ದಾರೆ.

ಒಂದು ವೇಳೆ ಅರ್ಜಿ ಸಲ್ಲಿಸದಲ್ಲಿ ತಿರಸ್ಕರಿಸಲಾಗುವುದು. ಅರ್ಹ ಫಲಾನುಭವಿಗಳಿಗೆ ಅರ್ಜಿ ಜೋತೆಗೆ ಲಗತ್ತಿಸಬೆಕಾದ ದಾಖಲೆಗಳ ಬಗ್ಗೆ ಪಟ್ಟಣ ಪಂಚಾಯತಿ ಕಚೇರಿ ನೊಟೀಸ್ ಬೋರ್ಡಿನಲ್ಲಿ ವಿವರ ನಮೂದಿಸಲಾಗಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಯರಗಟ್ಟಿಯ ಪಟ್ಟಣ ಪಂಚಾಯತ ವಿಷಯ ನಿರ್ವಾಹಕರಿಂದ ಮಾಹಿತಿ ಪಡೆಯಬಹುದಾಗಿದೆ ಎಂದು ಯರಗಟ್ಟಿಯ ಪಟ್ಟಣ ಪಂಚಾಯತ ಆಡಳಿತಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವ್ಯಕ್ತಿ ನಾಪತ್ತೆ



ಬೆಳಗಾವಿ: ಕಣಕುಂಬಿ ಮೂಲ ನಿವಾಸಿಯಾದ ಗುರುದಾಸ ವಿಠ್ಠಲ ಬಾಂದೇಕರ (40) ಎಂಬಾತ ಬೆಳಗಾವಿ ನಗರದ ಗಣೇಶಪೂರ ನಿವಾಸಿಯಾಗಿದ್ದು, ಇವನ ಸ್ವಂತ ಊರು ಕಣಕುಂಬಿಗೆ ಮಾರ್ಚ 25–2022 ರಂದು ಹೋಗುತ್ತೆನೆ ಅಂತಾ ಹೇಳಿ ಹೋಗಿ ಅಲ್ಲಿಂದ ಮರಳಿ ಮನೆಗೆ ಬಾರದೆ ಎಲ್ಲಿಯೋ ಹೋಗಿ ಕಾಣೆಯಾಗಿರುತ್ತಾನೆ. ಈ ಕುರಿತು ಖಾನಾಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ.

ಕಾಣೆಯಾಗಿದ ವ್ಯಕ್ತಿಯ ವಿವರ

ವಯಸ್ಸು 40, ಎತ್ತರ 5 ಪೂಟ 06 ಇಂಚು, ಸಾದಾರಣ ಮೈಕಟ್ಟು, ಸಾದ ಕಪ್ಪು ಮೈಬಣ್ಣ, ಗುಂಡು ಮುಖ, ಕೆಂಪು, ಬಿಳಿ, ನೀಲಿ ಬಣ್ಣದ ಮಿಶ್ರಿತ ಟಿ–ಶರ್ಟ ಹಾಗೂ ಬ್ಲೂ ಬಣ್ಣದ ಫ್ಯಾಂಟ್ ಧರಿಸಿರುತ್ತಾನೆ. ಮರಾಠಿ, ಹಿಂದಿ ಮಾತನಾಡಲು ಬರುತ್ತದೆ.

ಸದರಿ ವ್ಯಕ್ತಿಯು ಕಂಡು ಬಂದಲ್ಲಿ, ಅಥವಾ ಮಾಹಿತಿ ದೊರೆತಲ್ಲಿ, ಖಾನಾಪೂರ ಪೊಲೀಸ ಠಾಣೆಗೆ ಸಂಪರ್ಕಿಸಬೇಕು ಎಂದು ಖಾನಾಪೂರ ಪೂಲೀಸ ಠಾಣೆಯ ಆರಕ್ಷಕ ಉಪನಿ–ರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಳವಡಿ ಮಲ್ಲಮ್ಮನ ಉತ್ಸವ: ಸಾಂಸ್ಕೃತಿಕ ಕಾರ್ಯಕ್ರಮಗಳು

ಬೆಳಗಾವಿ: ಜಿಲ್ಲಾಡಳಿತ, ಬೆಳಗಾವಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ಫೆ 28 ಮತ್ತು 29 ರಂದು ಬೆಳಗಾವಿ ಜಿಲ್ಲೆಯ ಬೈಲಹೊಂಗಲ ತಾಲೂಕಿನ ಬೆಳವಡಿ ಗ್ರಾಮದಲ್ಲಿ ಬೆಳವಡಿ ಮಲ್ಲಮ್ಮನ ಉತ್ಸವದಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.

ವೀರರಾಣಿ ಬೆಳವಡಿ ಮಲ್ಲಮ್ಮನ ವೇದಿಕೆಯಲ್ಲಿ ಸಂಜೆ 5 ಗಂಟೆಯಿಂದ 7.30 ಗಂಟೆಯವರೆಗೆ ಚೌಡಕಿ ಪದ, ಭಜನಾ ಪದ, ರಿವಾಯತ ಪದ, ಜನಪದ ಸಂಗೀತ, ಭಜನಾ, ಬಯಲಾಟ ಪದಗಳು, ವಚನ ಸಂಗೀತ, ಗೀತ ರೂಪಕ, ಶಿವ ಭಜನಾ, ಶಹನಾಯಿ, ಸುಗಮ ಸಂಗೀತ, ನೃತ್ಯ ವೈವಿಧ್ಯ ಕಾರ್ಯಕ್ರಮಗಳು ನಡೆಯಲಿವೆ.

ಅದೇ ರೀತಿಯಲ್ಲಿ ಖ್ಯಾತ ಸಂಗೀತ ನಿರ್ದೇಶಕರಾದ ಗುರುಕಿರಣ ಹಾಗೂ ತಂಡದಿಂದ ರಾತ್ರಿ 8.30 ಗಂಟೆಯಿಂದ 11 ಗಂಟೆಯವರೆಗೆ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

**ಫೆ.29ರ ವೇದಿಕೆಯ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು:**

ವೀರರಾಣಿ ಬೆಳವಡಿ ಮಲ್ಲಮ್ಮನ ವೇದಿಕೆಯಲ್ಲಿ ಸಂಜೆ 5 ಗಂಟೆಯಿಂದ ರಾತ್ರಿ 8 ಗಂಟೆಯವರೆಗೆ ಸಂಗೀತ, ರಂಗ ಗೀತೆಗಳು, ವಚನ ಸಂಗೀತ, ಜಾನಪದ ಸಂಗೀತ, ನೃತ್ಯ, ಭರತ ನಾಟ್ಯ, ಜಾದು ಪ್ರದರ್ಶನ, ನಗೆ ಹಬ್ಬ, ಕಂಗೀಲು ವಿವಿಧ ನೃತ್ಯ ವೈವಿಧ್ಯ ಕಾರ್ಯಕ್ರಮಗಳು ನಡೆಯಲಿವೆ.

ಖ್ಯಾತ ಗಾಯಕಿ ಶಮಿತಾ ಮಲ್ನಾಡ ಹಾಗೂ ತಂಡದವರಿಂದ ರಾತ್ರಿ 8.30 ಗಂಟೆಯಿಂದ 10.30 ಗಂಟೆಯವರೆಗೆ ರಸಮಂಜರಿ, ಹೆಲೇನ್ ಮೈಸೂರ ನಿರ್ದೇನದ "ಎಲ್ಲರಂತಲ್ಲ ನಾ ಅವ್ವ" ನಾಟಕ ಪ್ರದರ್ಶನ ನಡೆಯಲಿದೆ.

### ಬೆಳಗಾವಿ ಬೆಲ್ಲದ ಕಾನೂನು ಮಹಾವಿದ್ಯಾಲಯ: ಬೆಳಗಾವಿ ವಲಯ ಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ ಉದ್ಘಾಟನೆ

## ವಿದ್ಯಾವಂತರು ರಾಜಕಾರಣಕ್ಕೆ ಬರಬೇಕು; ಭಾರತದ ಪ್ರಜಾಪ್ರಭುತ್ವ ವ್ಯವಸ್ಥೆ ವಿಶ್ವದಲ್ಲೇ ಅತ್ಯಂತ ಯಶಸ್ವಿ

ಬೆಳಗಾವಿ :ಪ್ರಜಾಪ್ರಭುತ್ವ ವ್ಯವಸ್ಥೆ ಸದೃಢವಾಗಿ ಬೆಳೆಯಲು ವಿದ್ಯಾರ್ಥಿಗಳು ಈಗಿನಿಂದಲೇ ಆದರ್ಶ ವಿಚಾರಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ನಿರ್ದೇಶಕ ಕೆ. ದ್ವಾರಕನಾಥ ಬಾಬು ಸಲಹೆ ನೀಡಿದರು.



ನಗರದ ಲಿಂಗರಾಜ ಕಾಲೇಜಿನ ಕೇಂದ್ರ ಸಭಾಗೃಹದಲ್ಲಿ ಸೋಮವಾರ ಕರ್ನಾಟಕ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆ ಹಾಗೂ ಬೆಳಗಾವಿಯ ಬಿ.ವಿ.ಬೆಲ್ಲದ ಕಾನೂನು ಮಹಾವಿದ್ಯಾಲಯಗಳು ಏರ್ಪಡಿಸಿದ್ದ ಬೆಳಗಾವಿ ವಲಯ ಮಟ್ಟದ ಮಾದರಿ ವಿಧಾನಸಭಾ ಸ್ಪರ್ಧೆ –2023–24 ಉದ್ಘಾಟಿಸಿ ಮಾತನಾಡಿದರು.

ನಮ್ಮ ದೇಶದ ಪ್ರಜಾಪ್ರಭುತ್ವ ವ್ಯವಸ್ಥೆ ಅತ್ಯಂತ ಬಲಯುತವಾಗಿದೆ. ಆದ–ರೆ ಅದನ್ನು ಇನ್ನಷ್ಟು ಪ್ರಬಲವಾಗಿ ಬೆಳೆಸುವಲ್ಲಿ ಮಾದರಿ ಅಧಿವೇಶನ ಸ್ಪರ್ಧೆ ಅತ್ಯಂತ ಪೂರಕವಾಗಿದೆ. ಯುವ ಜನಾಂಗ ಈ ದೇಶದ ಭವಿಷ್ಯವಾಗಿದ್ದಾರೆ. ದೇಶದ ಆಡಳಿತದ ಚುಕ್ಕಾಣಿ ಹಿಡಿಯಲು ವಿದ್ಯಾವಂತರು ಹೆಚ್ಚಿನ ಸಂಖ್ಯೆಯಲ್ಲಿ ಸಂಸದೀಯ ವ್ಯವಸ್ಥೆ, ಪ್ರಜಾಪ್ರಭುತ್ವದ ವಿಚಾರಗಳನ್ನು ನಮ್ಮ ವ್ಯಕ್ತಿತ್ವದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ಬೆಳಗಾವಿಯಲ್ಲಿ ವಲಯ ಮಟ್ಟದ ಮಾದರಿ ವಿಧಾನಸಭಾ ಅಧಿವೇಶನ ಸ್ಪರ್ಧೆ ನಡೆಯುತ್ತಿದೆ. ಈ ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಕಾನೂನು ಮಹಾವಿದ್ಯಾಲಯಗಳ 44 ವಿದ್ಯಾರ್ಥಿಗಳು ಭಾಗವಹಿಸಿದ್ದು, ಇಲ್ಲಿ ಆಯ್ಕೆಯಾದ 10 ವಿದ್ಯಾರ್ಥಿಗಳು ಬೆಂಗಳೂರಿನಲ್ಲಿ ಮಾರ್ಚ್ ನಲ್ಲಿ ನಡೆಯುವ ರಾಜ್ಯಮಟ್ಟದ ಸ್ಪರ್ಧೆಗೆ ಆಯ್ಕೆ ಅಗಲಿದ್ದಾರೆ. ವಿದ್ಯಾರ್ಥಿಗಳು ಕಾನೂನು, ಸಂಸದೀಯ ವ್ಯವಸ್ಥೆಯ ಕೌಶಲ ಬೆಳೆಸಿಕೊಂಡು ರಾಜ್ಯಮಟ್ಟಕ್ಕೆ ಆಯ್ಕೆಯಾಗಬೇಕು ಎಂದು ಅವರು ತಿಳಿಸಿದರು.

2005 ರಿಂದ ನಮ್ಮ ಸಂಸ್ಥೆ ಸಂಶೋಧನೆ, ಮಾದರಿ ಸಂಸತ್ತು, ಮಾದರಿ ವಿಧಾನ ಸಭಾ ಅಧಿವೇಶನ ಸ್ಪರ್ಧೆ, ಅಂತಾರಾಜ್ಯ ಜಲ ವಿವಾದ ಸೇರಿದಂತೆ ಹತ್ತು ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತ ಬಂದಿದೆ. ವಿದ್ಯಾರ್ಥಿಗಳಿಗೆ ಇಂಥ ಕಾರ್ಯಕ್ರಮಗಳಿಂದ ಹೆಚ್ಚಿನ ಅನುಕೂಲತೆ ಸಿಗಲಿದೆ ಎಂದು ಅವರು ಹೇಳಿದರು.

ನಮ್ಮ ನೆರೆಯ ಕೆಲ ಪ್ರಜಾಪ್ರಭುತ್ವ ವ್ಯವಸ್ಥೆ ಹೇಗೆ ನಡೆಯುತ್ತಿದೆ ಎನ್ನುವುದನ್ನು ನಾವೆಲ್ಲ ನೋಡುತ್ತಿದ್ದೇವೆ. ಅಲ್ಲಿ ಸಾರ್ವತ್ರಿಕ ಚುನಾವಣೆಗಳು ನಡೆದು ಹಲವು ದಿನಗಳು ಕಳೆದರೂ ಅವ್ಯವಸ್ಥೆ, ಗೊಂದಲಗಳು ಇನ್ನೂ ಮುಂದುವ–ರಿದಿದೆ. ನಾಮಕಾವಸ್ತೆಗೆ ಸರಕಾರ ಎನ್ನುವಂತಾಗಿದೆ, ಅಲ್ಲಿ ಪ್ರಜಾಪ್ರಭುತ್ವ ಯಾವ ರೀತಿಯಲ್ಲಿ ಇದೆ ಎನ್ನುವುದನ್ನು ನಾವು ಗಮನಿಸಬಹುದು. ಮಿಲಿಟರಿ ವ್ಯವಸ್ಥೆಯೇ ಆಡಳಿತ ನಡೆಸುತ್ತಿದೆ. ಹಲವು ಬಾರಿ ಸಂವಿಧಾನವೇ ಬದಲಾಗಿವೆ. ಆದರೆ, ನಮ್ಮ ಭಾರತ ಸ್ವಾತಂತ್ರ್ಯ ಪಡೆದು 75 ವರ್ಷಗಳು ಕಳೆದರೂ ಪ್ರಜಾಪ್ರಭುತ್ವ ವ್ಯವಸ್ಥೆ ಅತ್ಯಂತ ಯಶಸ್ವಿ ಸರಕಾರಗಳನ್ನು ನಡೆಸುತ್ತಿದ್ದು, ಭಾರತದ ಸಂವಿಧಾನ ಅತ್ಯಂತ ಯಶಸ್ವಿ ಸಂವಿಧಾನ ಎಂದು ವಿಶ್ವದಲ್ಲೇ ಜನಪ್ರಿಯತೆ ಗಳಿಸಿದೆ. ಭಾರತದಲ್ಲಿ ಅಧಿಕಾರ ಹಸ್ತಾಂತರ ಅತ್ಯಂತ ಸುಗಮವಾಗಿ ನಡೆಯುತ್ತಿದೆ. ಜನಪ್ರಿಯ ಹಾಗೂ ಅತ್ಯಂತ ಸ್ಥಿರ ಸರಕಾರದ ವ್ಯವಸ್ಥೆ ಇಲ್ಲಿದೆ. ಆದರೂ ನಮ್ಮ ದೇಶದ ಜನರ ಪ್ರಜೆಗಳ ಭವಿಷ್ಯ ವಿಶ್ವದಲ್ಲೇ ಇನ್ನೂ ಉತ್ತಮವಾಗಬೇಕು ಎಂಬ ಉದ್ದೇಶದಿಂದ ಮಾದರಿ ವಿಧಾನ ಸಭಾ ಅಧಿವೇಶನ ಮುಂತಾದ ಕಾರ್ಯಕ್ರಮ ನಡೆಸಲಾಗುತ್ತಿದೆ. ದೇಶದ ಭವಿಷ್ಯದ ರಾಜಕಾರಣಿಗಳಾಗಿ ರೂಪುಗೊಳ್ಳುವವ–ರಿಗೆ ಈ ಕಾರ್ಯಕ್ರಮ ಅತ್ಯಂತ ಪೂರಕ. ನೀವೆಲ್ಲ ಇಂಥ ಸ್ಪರ್ಧೆಗಳಲ್ಲಿ ಅತ್ಯಂತ ಉತ್ಸುಕರಾಗಿ ಭಾಗವಹಿಸಬೇಕು.

ವಿದ್ಯಾರ್ಥಿಗಳೇ ದೇಶದ ಭಾವಿ ಭವಿಷ್ಯವಾಗಿದ್ದು ಅದರಲ್ಲೂ ಕಾನೂನು ವಿದ್ಯಾರ್ಥಿಗಳು ಸಂಸದೀಯ ವ್ಯವಸ್ಥೆಯ ತಿರುಳನ್ನು ಮೈಗೂಡಿಸಿಕೊಂಡು ಬೆಳೆಯಬೇಕು ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಬೆಳಗಾವಿ ಬಿ.ವಿ.ಬೆಲ್ಲದ ಕಾನೂನು ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷ ಆರ್ಬಿ.ಬೆಲ್ಲದ ಮಾತನಾಡಿ, ಬೆಳಗಾವಿಯ ಬೆಲ್ಲದ ಕಾನೂನು ಮಹಾವಿದ್ಯಾಲಯ ಹಲವಾರು ಉಪಯುಕ್ತ ಕಾರ್ಯಕ್ರಮಗಳನ್ನು ಏರ್ಪಡಿಸುತ್ತಿದೆ. ಇದರ ಮುಂದುವ–ರಿದ ಭಾಗವಾಗಿ ಇದೀಗ ಬೆಳಗಾವಿ ವಲಯದ ಕಾನೂನು ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ರಾಜ್ಯದಲ್ಲೇ ಅತ್ಯುತ್ತಮ ಸಂಸದೀಯ ಪಟುಗಳಾಗಿ ಹೊರಹೊಮ್ಮಬೇಕು. ಬೆಳಗಾವಿಯಲ್ಲಿ ನಡೆಯುತ್ತಿರುವ ಅಧಿವೇಶನ ಸ್ಪರ್ಧೆಯಲ್ಲಿ ಅತ್ಯುತ್ತಮ ಸಾಧನೆ ಮಾಡಬೇಕು. ಈ ಮೂಲಕ ನಮ್ಮ ಪ್ರಜಾಪ್ರಭುತ್ವಕ್ಕೆ ಅತ್ಯುತ್ತಮ ಕೊಡುಗೆ ಸಲ್ಲಿಸಬೇಕು ಎಂದು ಹೇಳಿದರು.

ಕರ್ನಾಟಕ ಕಾನೂನು ಮತ್ತು ಸಂಸದೀಯ ಸಂಸ್ಥೆಯ ಸಂಶೋಧನಾ ನಿರ್ದೇಶಕ ಡಾ.ಸಿ.ಎಸ್.ಪಾಟೀಲ, ಸಂಶೋಧನಾ ಮುಖ್ಯಸ್ಥ ಡಾ.ರೇವಯ್ಯ ಒಡೆಯರ್,

ಕಾರ್ಯಕ್ರಮದ ಸಂಯೋಜಕರಾದ ಸಹಾಯಕ ಪ್ರಾಧ್ಯಾಪಕರಾದ ಸವಿತಾ ಪಟ್ಟಣಶೆಟ್ಟಿ ಹಾಗೂ ಡಾ.ಶ್ರೀನಿವಾಸ ಪಾಲಕೊಂಡ ಉಪಸ್ಥಿತರಿದ್ದರು.

ಕರ್ನಾಟಕ ಸಾರ್ವಜನಿಕ ಪರೀಕ್ಷೆ (ನೇಮಕಾತಿಯಲ್ಲಿನ ಭ್ರಷ್ಟಾಚಾರ ಪ್ರತಿಬಂಧಕ ಕ್ರಮಗಳು) ವಿಧೇಯಕ–2023 ಮಂಡಿಸಲಾಯಿತು.

ಬಿಎಲ್ ಎಲ್ ಬಿ ಅಂತಿಮ ವರ್ಷದ ವಿದ್ಯಾರ್ಥಿನಿ ಸುನಂದಾ ಪಾಟೀಲ ನಾಡಗೀತೆ ಹಾಡಿದರು. ಪ್ರಾಚಾರ್ಯ ಡಾ.ಬಿ.ಜಯಸಿಂಹ ಸ್ವಾಗತಿಸಿದರು. ರೇಖಾ ಪಾಟೀಲ ಹಾಗೂ ಬಸವರಾಜ ಶಿಂತ್ರಿ ನಿರೂಪಿಸಿದರು. ಸಹಾಯಕ ಪ್ರಾಧ್ಯಾಪಕ ಮಂಜುನಾಥ ಅಲ್ಲಪ್ಪನವರ ವಂದಿಸಿದರು.

## ಪ್ರಸ್ತುತ ಅವಧಿಯಲ್ಲಿ ಗ್ರಾಮೀಣ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ನನ್ನ ಗುರಿ

ಬೆಳಗಾವಿ: ಪ್ರಸ್ತುತ 2023 –2028ರ ಅವಧಿಯಲ್ಲಿ ಬೆಳಗಾವಿ ಗ್ರಾಮೀಣ ಕ್ಷೇತ್ರದಲ್ಲಿ ಶೈಕ್ಷಣಿಕ ಕ್ರಾಂತಿ ಮಾಡುವುದಾಗಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದ್ದಾರೆ.



ಬೆಳಗಾವಿ ಗ್ರಾಮೀಣ ಕ್ಷೇತ್ರದ ತುಮ್ಮರಗುದ್ದಿ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಹಾಗೂ ಸೋಮನಟ್ಟಿ ಗ್ರಾಮದ ಸರ್ಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆಗಳಲ್ಲಿ ನೂತನವಾಗಿ ನಿರ್ಮಾಣಗೊಂಡ ಹೆಚ್ಚುವರಿ ಕೊಠಡಿಗಳನ್ನು ಸೋಮವಾರ ಉದ್ಘಾಟಿಸಿ ಅವರು ಮಾತನಾಡಿದರು.

ಕಳೆದ ಅವಧಿಯಲ್ಲಿ ಸಾಕಷ್ಟು ಶಾಲಾ ಕೊಠಡಿ, ಸ್ಮಾರ್ಟ್ ಕ್ಲಾಸ್, ಆಟದ ಮೈದಾನ, ವಿಜ್ಞಾನ ಉಪಕರಣ, ಕ್ರೀಡಾ ಸಾಮಗ್ರಿ ಎಲ್ಲ ವ್ಯವಸ್ಥೆ ಮಾಡಿದ್ದೇನೆ. ಜೊತೆಗೆ ದೇವಸ್ಥಾನಗಳನ್ನು, ರಸ್ತೆಗಳನ್ನು ಅಭಿವೃದ್ಧಿಪಡಿಸಿದ್ದೇನೆ. ಈ ಅವಧಿಯಲ್ಲಿ ಶಿಕ್ಷಣ ಕ್ಷೇತ್ರಕ್ಕೆ ಮೊದಲ ಆದ್ಯತೆ ನೀಡಿ, ಶೈಕ್ಷಣಿಕ ಕ್ರಾಂತಿ ಮಾಡುತ್ತೇನೆ ಎಂದು ಅವರು ಹೇಳಿದರು.

ತುಮ್ಮರಗುದ್ದಿ ಹಾಗೂ ಸೋಮನಟ್ಟಿಗೆ ತಲಾ ಇನ್ನೊಂದು ಕೊಠಡಿ, ಶಾಲೆಗೆ ಅಗತ್ಯವಾದ ಎಲ್ಲ ಡೆಸ್ಕ್ ಗಳನ್ನು ಒದಗಿಸುತ್ತೇನೆ. ತುಮ್ಮ–ರಿಗುದ್ದಿಗೆ ವಿಜ್ಞಾನ ಉಪಕರಣ, ಸ್ಮಾರ್ಟ್ ಕ್ಲಾಸ್ ರೂಂ ಒದಗಿಸುತ್ತೇನೆ. ಸೋಮನಟ್ಟಿಯಲ್ಲಿ ಗ್ರಾಮಸ್ಥರ ಬೇಡಿಕೆಯಂತೆ ಯಲ್ಲಮ್ಮನ ಗುಡಿಯನ್ನು ನಿರ್ಮಾಣ ಮಾಡುತ್ತೇನೆ ಎಂದು ಹೆಬ್ಬಾಳಕರ್ ಭರವಸೆ ನೀಡಿದರು.

ಈ ಸಮಯದಲ್ಲಿ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ, ಆಯಾ ಗ್ರಾಮಗಳ ಹಿರಿಯರು, ಕ್ಷೇತ್ರ ಶಿಕ್ಷಣಾಧಿಕಾರಿಗಳು, ಶಾಲಾಭಿವೃದ್ಧಿ ಸಮಿತಿ ಪದಾಧಿಕಾರಿಗಳು, ಯುವ ಕಾಂಗ್ರೆಸ್ ಮುಖಂಡ ಮೃಣಾಲ ಹೆಬ್ಬಾಳಕರ್, ಆಯಾ ಶಾಲೆಗಳ ಸಿಬ್ಬಂದಿ ಹಾಗೂ ಶಾಲಾ ಮಕ್ಕಳು ಉಪಸ್ಥಿತರಿದ್ದರು.

## ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವ: ವೀರ ಜ್ಯೋತಿ ಯಾತ್ರೆ ವೇಳಾ ಪಟ್ಟಿ

ಬೆಳಗಾವಿ: ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವದ ವೀರ ಜ್ಯೋತಿಯನ್ನು ಫೇ 26 ರಂದು ಬೆಳಿಗ್ಗೆ 10 ಗಂಟೆಗೆ ಸೋಂದಾದಿಂದ ಪ್ರಾರಂಭಿಸಿ ಮೆರವಣಿಗೆ ಮೂಲಕ ಬೀಳೊಡಲಾಗುವದು.

ಅದೇ ದಿನ ಮಧ್ಯಾಹ್ನ 12 ಗಂಟಗೆ ಯಲ್ಲಾಪೂರ, ಹಳಿಯಾಳ, ಅಳ್ನಾವರ ನಂದಗಡ ಮಾರ್ಗವಾಗಿ ಸಂಜೆ 7 ಗಂಟೆಗೆ ಖಾನಾಪೂರಕ್ಕೆ ಜ್ಯೋತಿ ಆಗಮಿಸಿ ವಾಸ್ತವ್ಯ ಮಾಡಲಿದೆ.

ಫೆ 27 ರಂದು ಬೆಳಿಗ್ಗೆ 10 ಗಂಟೆಗೆ ಖಾನಾಪೂರದಿಂದ ಬೀಳ್ಕೊಡಲಾಗುವುದು ಬಳಿಕ 12 ಗಂಟೆಗೆ ಆಗಮಿಸಲಿದೆ ಬೆಳಗಾವಿಯಿಂದ ಬೈಲಹೊಂಗಲ ಅನಿಗೋಳ–ನಯಾನಗರ–ಸಂಗೊಳ್ಳಿ–ಪಟ್ಟಿಹಾಳ.ಕೆ.ಬಿ ಮಾರ್ಗವಾಗಿ ಸಿದ್ದಸಮುದ್ರ ಮಠಕ್ಕೆ ಜ್ಯೋತಿ ಆಗಮಿಸಿ, ವಾಸ್ತವ್ಯ ಇರಲಿದೆ.

ಫೆ 28 ಬೆಳಿಗ್ಗೆ 10 ಗಂಟೆಗೆ ಬೆಳವಡಿಗೆ ಜ್ಯೋತಿಯ ಆಗಮನವಾಲಿದ್ದು, ಎಂದು ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಅವರು ಜ್ಯೋತಿಗೆ ಸ್ವಾಗತಿಸಲಿದ್ದಾರೆ ಎಂದು ಬೈಲಹೊಂಗಲ ಉಪವಿಭಾಗಾಧಿಕಾರಿಗಳು ಹಾಗೂ ಜ್ಯೋತಿ ಉಪಸಮಿತಿ ಅಧ್ಯಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆಡಿಪಿ ಸಭೆ ಮಾ.1 ರಂದು ಮುಂದೂಡಿಕೆ

ಬೆಳಗಾವಿ: 2023–24 ನೇ ಸಾಲಿನ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶಗಳು ಸೇರಿದಂತೆ) ಮೂರನೇ ತ್ರೈಮಾಸಿಕ (ಅಕ್ಟೋಬರ್–2023 ರಿಂದ ಫೆಬ್ರುವರಿ–15, 2024 ರವರೆಗೆ) ಪ್ರಗತಿ ಪರಿಶೀಲನಾ ಸಭೆಯನ್ನು ಫೆ 28 ರಂದು ಸುವರ್ಣ ವಿಧಾನ ಸೌಧ, ಕೊಠಡಿ ಸಂಖ್ಯೆ;354, ಕಾನ್ಫರೆನ್ಸ್ ಹಾಲ್‌ನಲ್ಲಿ ಬೆಳಿಗ್ಗೆ 11 ಗಂಟೆಗೆ ಬೆಳಗಾವಿ ಆಯೋಜಿಸಲಾಗಿರುತ್ತದೆ.

ಸದರಿ ಸಭೆಯನ್ನು ಕರ್ನಾಟಕ ವಿಧಾನ ಮಂಡಲ ಅಧಿವೇಶನವನ್ನು ಫೆ 28 ರ ವರೆಗೆ ವಿಸ್ತರಿಸುವ ಕಾರಣ, ಫೆ 28 ರಂದು ನಿಗದಿಯಾದ ಸಭೆಯನ್ನು ಮಾ.1 ರಂದು ಬೆಳಿಗ್ಗೆ 11 ಗಂಟೆಗೆ ಸುವರ್ಣ ವಿಧಾನ ಸೌಧ, ಕೊಠಡಿ ಸಂಖ್ಯೆ; 354, ಕಾನ್ಫರೆನ್ಸ್ ಹಾಲ್‌ನಲ್ಲಿ ಮರು ನಿಗದಿಪಡಿಸಲಾಗಿದೆ ಎಂದು ಬೆಳಗಾವಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾ–ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾಂಗ್ರೆಸ್ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಯುವಕರು ಕೈ ಸೇರ್ಪಡೆ

ಬೆಳಗಾವಿ: ಕಾಂಗ್ರೆಸ್ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಇಂದು ಬಿಜೆಪಿ–ಜೆಡಿಎಸ್ ಕಾರ್ಯಕರ್ತರು ಕಾಂಗ್ರೆಸ್ ಸೇರ್ಪಡೆಯಾಗುತ್ತಿದ್ದಾರೆ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದರು.



ಯಮಕನಮರಡಿ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಹುದಲಿ ಗ್ರಾಮದಲ್ಲಿ ಗ್ರಾಮದೇವಿ ಜಾತ್ರಾ ನಿಮಿತ್ತವಾಗಿ ಚರಂಡಿ, ಸಿಸಿ ರಸ್ತೆ ಹಾಗೂ ರಸ್ತೆ ಡಾಂಬರೀಕರಣ ಹಾಗೂ ಸುಮಾರು 5 ಕೋಟಿ ರೂಪಾಯಿ ಕಾಮಗಾರಿಗಳಿಗೆ ಚಾಲನೆ ಹಾಗೂ ಹುದಲಿ–ಕಲಕಾಂಬ ಗ್ರಾಮದ ಬಿಜೆಪಿ– ಜೆಡಿಎಸ್ ಮುಖಂಡರು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆ ಮಾಡಿಕೊಳ್ಳುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾಂಗ್ರೆಸ್ ಪಕ್ಷದ ಅಧಿಕಾರದಲ್ಲಿ ರಾಜ್ಯಾದ್ಯಂತ ಆಗುತ್ತಿರುವ ಗ್ರಾಮಗಳ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಬಿಜೆಪಿ ಹಾಗೂ ಜೆಡಿಎಸ್ ಕಾರ್ಯಕರ್ತರು ಪಕ್ಷ ತೊರೆದು ನಮ್ಮ ಪಕ್ಷಕ್ಕೆ ಸೇರ್ಪಡೆಯಾಗುತ್ತಿರುವುದು ಸಂತೋಷದ ವಿಷಯ. ಕಾರ್ಯಕರ್ತರು ನಿಷ್ಠೆಯಿಂದ ಕೆಲಸ ಮಾಡಿದರೆ ಮುಂದೆ ಇನ್ನು ಹೆಚ್ಚಿನ ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುವುದು ಎಂದರು.

ಬಿಜೆಪಿ ಹಾಗೂ ಜೆಡಿಎಸ್ ಪಕ್ಷದಲ್ಲಿ ಜನರಿಗೆ ಯಾವುದೇ ಕೆಲಸಗಳು ಆಗಿಲ್ಲ. ಸುಳ್ಳು ಹೇಳಿ ಜನರಿಗೆ ದಾರಿ ತಪ್ಪಿಸುವ ಕೆಲಸ ಮಾಡುವುದೇ ಬಿಜೆಪಿ ಪಕ್ಷದ ಕೆಲಸವಾಗಿದೆ. ನಮ್ಮ ಪಕ್ಷದ ಅಭಿವೃದ್ಧಿ ಕಾರ್ಯಗಳನ್ನು ನೋಡಿ ಬಿಜೆಪಿ ಪಕ್ಷದವರು ಸಹಿಸಿಕೊಳ್ಳುತ್ತಿಲ್ಲ ಎಂದು ಬಿಜೆಪಿ ವಿರುದ್ಧ ಹರಿಹಾಯ್ದರು.

ಗ್ರಾಮ ದೇವಿ ಜಾತ್ರೆ ನಿಮಿತ್ತ 5 ಕೋಟಿ ರೂ. ವಿವಿಧ ಕಾಮಗಾರಿಗೆ ಚಾಲನೆ: ಗ್ರಾಮದಲ್ಲಿ ನಡೆಯುವ ಗ್ರಾಮ ದೇವಿ ಜಾತ್ರೆಗೆ ರಸ್ತೆ ಹಾಗೂ ಒಳಚರಂಡಿ ಸೇರಿದಂತೆ 5 ಕೋಟಿ ರೂ. ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಅಲ್ಲದೇ ಯಮಕನಮರಡಿ ಹಾಗೂ ಹುದಲಿ ಗ್ರಾಮಕ್ಕೆ ಅಭಿವೃದ್ಧಿ ಕೆಲಸ ಮಾಡುವುದು ಹೊಸದೆನಲ್ಲ. ಗ್ರಾಮದಲ್ಲಿ ಯಾವಾಗ ಸಮಸ್ಯೆ ಇದೆ ಎಂದು ಹೇಳಿದಾಗಲೆಲ್ಲ ಸಮಸ್ಯೆ ಬಗೆಹ–ರಿಸಲಾಗಿದೆ. ನಮ್ಮಿಂದ ಯಾವಾಗಲೂ ಇಲ್ಲ ಎಂಬ ಉತ್ತರ ಬಂದಿಲ್ಲ. ಅಲ್ಲದೇ ಗ್ರಾಮದಲ್ಲಿ ನಿರಂತರವಾಗಿ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮಾಡಲಾಗಿದೆ ಎಂದ ಅವರು, ನಾಲ್ಕು ಚುನಾವಣೆಗಳಲ್ಲಿ ನಾನು ಗೆದ್ದಿದ್ದು, ಪ್ರತಿ ಭಾರಿ ಮತಗಳ ಸಂಖ್ಯೆ ಏರುತ್ತಾ ಹೋಗಿದೆ. ಮೊದಲ ಭಾರಿಗೆ ಗೆದ್ದಾಗ 46 ಸಾವಿರ, 2ನೇ ಭಾರಿಗೆ ಗೆದ್ದಾಗ 70 ಸಾವಿರ ಮತಗಳು, 3ನೇ ಭಾ–ರಿಗೆ 73 ಸಾವಿರ ಮತಗಳು, 4ನೇ ಬಾರಿ 1 ಲಕ್ಷ 4 ಸಾವಿರ ಮತಗಳನ್ನು ಪಡೆಯಲಾಗಿದೆ, ಮುಖ್ಯವಾಗಿ 15 ವರ್ಷಗಳಲ್ಲಿ ಯಮಕನಮರಡಿ ಕ್ಷೇತ್ರಕ್ಕೆ ಬರುವ ಹಳ್ಳಿಗಳಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡಿ ಮಾದರಿಗ್ರಾಮಗಳು ಎನ್ನುವಂತೆ ಮಾಡಲಾಗಿದೆ ಎಂದರು.

## ಸೆಬಿಯಲ್ಲಿ ಡಿಆರ್‌ಎಚ್‌ಪಿ ಫೈಲ್ ಮಾಡಿದ ಟೋಲಿನ್ಸ್ ಟೈರ್ಸ್ ಲಿಮಿಟೆಡ್

ಹುಬ್ಬಳ್ಳಿ: ಟೈರ್ ಮತ್ತು ಟ್ರೆಡ್ಸ್ ಉದ್ಯಮದಲ್ಲಿ ಪ್ರಮುಖರಾಗಿರುವ, ಅಖಿಲ ಭಾರತ ಉಪಸ್ಥಿತಿ ಹೊಂದಿರುವ ಕೇರಳ ಮೂಲದ ಕಂಪನಿ ಟೋಲಿನ್ಸ್ ಟೈರ್ಸ್ ಲಿಮಿಟೆಡ್, ಅದರ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್–ಎಚ್‌ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್‌ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ)ಗೆ ಸಲ್ಲಿಸಿದೆ.

ಕಂಪನಿಯ ಇನಿಷಿಯಲ್ ಪಬ್ಲಿಕ್ ಆಫರಿಂಗ್ ರೂ 200 ಕೋಟಿಗಳವರೆಗಿನ ಹೊಸ ಸಂಚಿಕೆಯನ್ನು ಒಳಗೊಂಡಿರುತ್ತದೆ ಮತ್ತು ಸೆಲ್ಲಿಂಗ್ ಷೇರ್ ಹೋಲ್ಡರ್‌ಗಳ ರೂ 30 ಕೋಟಿಗಳವರೆಗಿನ ಒಟ್ಟು ಈಕ್ವಿಟಿ ಷೇರುಗಳ ಆಫರ್ ಫಾರ್ ಸೇಲ್ ಒಳಗೊಂಡಿದೆ.

ಆಫರ್ ಸೇಲ್ ಕಂಪನಿಯ ಪ್ರಮೋಟ–ರ್, ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಡಾ.ಕಲಂಪರಂಬಿಲ್ ವರ್ಕಿ ಟೋಲಿನ್ ಅವರ ರೂ 15 ಕೋಟಿಯವರೆಗಿನ ಮತ್ತು ಪ್ರಮೋಟ–ರ್, ನಾನ್ ಎಕ್ಸಿಕ್ಯೂಟಿವ್ ಆಂಡ್ ನಾನ್ ಇಂಡಿಪೆಂಡೆಂಟ್ ಡೈರೆಕ್ಟರ್ ಜೆರಿನ್ ಟೋರಿನ್ ಅವರ ರೂ 15 ಕೋಟಿಯವರೆಗಿನ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಕಂಪನಿ ಪಡೆದಿರುವ ಕೆಲವು ಬಾಕಿ ಸಾಲಗಳ ಮರುಪಾವತಿ/ಪೂರ್ವಪಾವತಿಗೆ ರೂ 62.5 ಕೋಟಿ ನಿವ್ವಳ ಆದಾಯ ಬಳಸಿಕೊಳ್ಳಲು, ರೂ 75 ಕೋಟಿಗಳನ್ನು ದೀರ್ಘಾವಧಿಯ ಕಾರ್ಯನಿರತ ಬಂಡವಾಳದ ಅಗತ್ಯಗಳಿಗೆ ಮತ್ತು ರೂ 24.3 ಕೋಟಿಗಳು ತಮ್ಮ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಟೋಲಿನ್ ರಬ್ಬರ್ಸ್ ಪ್ರೈವೇಟ್ ಲಿಮಿಟೆಡ್‌ನಲ್ಲಿ ಹೂಡಿಕೆ ಮರುಪಾವತಿಸಲು ಅಥವಾ ಪೂರ್ವಪಾವತಿ ಮಾಡಲು ಮತ್ತು ಅದರ ಅಲ್ಪಾವಧಿ ಮತ್ತು ದೀರ್ಘಾವಧಿಯ ಎರವಲು ಮತ್ತು ಅದರ ಕಾರ್ಯನಿರತ ಬಂಡವಾಳದ ಅಗತ್ಯಗಳನ್ನು ಹೆಚ್ಚಿಸುವುದಕ್ಕೆ ಪ್ರಸ್ತಾಪಿಸಿದೆ.

ಟೋಲಿನ್ಸ್ ಟೈರ್ಸ್ ಲಿಮಿಟೆಡ್ ತನ್ನ ಕಾರ್ಯಾಚರಣೆಯನ್ನು 1982ರಲ್ಲಿ ಆರಂಭಿಸಿತು. ಟ್ರೇಡ್ ರಬ್ಬರ್ ತಯಾ–ರಿಕೆಯ ಕಂಪನಿಯಾಗಿ ಸಂಂ–ಯೋಜಿತಗೊಂಡಿದ್ದು 2003ರಲ್ಲಿ. 2005ರಲ್ಲಿ ಉತ್ಪಾದನೆ ಮತ್ತು ಮಾರಾಟ ಪ್ರಾರಂಭಿಸಿತು.

2004ರಿಂದಲೂ ಶ್ರೀಮತಿ ಜೆ–ರಿನ್‌ಟೋಲಿನ್, ಪ್ರಮೋಟರ್, ನಾನ್ ಎಕ್ಸಿಕ್ಯೂಟಿವ್ ಆಂಡ್ ನಾನ್ ಇಂಡಿಪೆಂಡೆಂಟ್ ಡೈರೆಕ್ಟರ್ ಆಗಿದ್ದಾರೆ.

ಟೈರ್ ರಿಟ್ರೆಡಿಂಗ್ ಪರಿಹಾರ ಉತ್ಪನ್ನಗಳನ್ನು ಒದಗಿಸುವ ಕಂಪನಿಯು ಮೂರು ಉತ್ಪಾದನಾ ಘಟಕಗಳಿಂದ ತನ್ನ ವ್ಯವಹಾರವನ್ನು ನಿರ್ವಹಿಸುತ್ತಿದೆ. ಅದರಲ್ಲಿ ಎರಡು ಕೇರಳದ ಕಾಲಡಿಯಲ್ಲಿವೆ ಮತ್ತು ಮೂರನೆಯದು ಯುಎಇಯ ರಾಸ್ ಅಲ್ ಖೈಮಾದಲ್ಲಿದೆ.

ಪ್ರಸ್ತುತ, ಇದು ವಾರ್ಷಿಕ 1.51 ಮಿಲಿಯನ್ ಟೈರ್ ಉತ್ಪಾದನೆ ಸಾಮರ್ಥ್ಯ, ವಾರ್ಷಿಕ 12,486 ಟನ್ ಟ್ರೇಡ್ ರಬ್ಬರ್ ಉತ್ಪಾದನೆ ಸಾಮಥ–ರ್ಯದ ಮತ್ತು 17,160 ಟನ್ ರಬ್ಬರ್ ಕಾಂಪೌಂಡ್‌ಗಳನ್ನು ಉತ್ಪಾದಿಸುವ ಸಾಮರ್ಥ್ಯ ಹೊಂದಿದೆ. ಪ್ರಸ್ತುತ, ಇದು ತನ್ನ ಸುಮಾರು 25%ನಷ್ಟು ಸರಾಸರಿ ಸಾಮರ್ಥ್ಯ ಬಳಸುವ ಮೂಲಕ ಕಾರ್ಯನಿರ್ವಹಿಸುತ್ತಿದೆ ಮತ್ತು ಮುಂದಿನ ಕೆಲವು ವರ್ಷಗಳಲ್ಲಿ ಸಾಮರ್ಥ್ಯದ ಬಳಕೆಯನ್ನು 75% ವರೆಗೆ ಹೆಚ್ಚಿಸಲು ಉದ್ದೇಶಿಸಿದೆ. ಇಂ–ಡಾಗ್ ರಬ್ಬರ್ ಲಿಮಿಟೆಡ್, ವಂಶಿ ರಬ್ಬರ್ ಲಿಮಿಟೆಡ್, ಟಿವಿಎಸ್ ಶ್ರೀಚಕ್ರ ಲಿಮಿಟೆಡ್, ಜಿಆರ್ಪಿ ಲಿಮಿಟೆಡ್ ಮತ್ತು ಎಲ್ಗಿ ರಬ್ಬರ್ ಕಂಪನಿ ಲಿಮಿಟೆಡ್‌ನಂತಹ ಲಿಸ್ಟೆಡ್ ಸಂಸ್ಥೆಗಳೊಂದಿಗೆ ಸ್ಪರ್ಧಿಸುವ ಟೋಲಿನ್ಸ್ ಟೈರ್ಸ, ಮಾರ್ಚ್ ಆರ್ಥಿಕ ವರ್ಷ 23ಕ್ಕೆ ರೂ 4.99 ಕೋಟಿಗಳ ಸ್ವತಂತ್ರ ನಿವ್ವಳ ಲಾಭ ದಾಖಲಿಸಿದೆ. ಹಿಂದಿನ ವರ್ಷ ರೂ0.63 ಕೋಟಿ ಲಾಭ ದಾಖಲಾಗಿತ್ತು.

ಇದೇ ಅವಧಿಯಲ್ಲಿ, ಕಾರ್ಯಾಚರಣೆಗಳಿಂದ ಅದರ ಆದ–ಾಯ ರೂ 113.4 ಕೋಟಿಗಳಿಂದ ರೂ 118.3 ಕೋಟಿಗಳಿಗೆ ಏರಿತ್ತು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089